ಸಂಪುಟ: ೦೬/ ಸಂಚಿಕೆ: ೨೬೬/ಶುಕ್ರವಾರ ದಿನಾಂಕ : ೨೦-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ: 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 266/ FRIDAY Date : 20-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

# ಬೆಳಗಾವಿಯ ಚಳಿಗಾಲದ ಅಧಿವೇಶನಕ್ಕೆ ಡಿ.19ರಂದು ತೆರೆ

## ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಂದ 8 ದಿನಗಳ ಅಧಿವೇಶನದ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

ಬೆಳಗಾವಿ ಸುವರ್ಣಸೌಧ ಡಿ.19 : 16ನೇ ವಿಧಾನಸಭೆಯ 5ನೇ ಅಧಿವೇಶನವು ಡಿಸೆಂಬರ್ 9ರಿಂದ ರಿಂದ ಬೆಳಗಾವಿ ಸುವರ್ಣವಿಧಾನಸೌಧದಲ್ಲಿ ಪ್ರಾರಂಭವಾಗಿ ಡಿಸೆಂಬರ್ 19ರವರೆಗೆ 08 ದಿನಗಳ ಕಾಲ ಸುಮಾರು 64 ಗಂಟೆಗಳ ಕಾಲ ಕಾರ್ಯಕಲಾಪ ನಡೆಸಲಾಯಿತು ಎಂದು ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಡಿ.19ರಂದು ಕೊನೆಯ ದಿನ ಅಧಿವೇಶನದ ಕಾರ್ಯಕಲಾಪ ಕು–ರಿತು ವಿವರಿಸಿದ ಅವರು, ಈ ಅಧಿವೇಶನದಲ್ಲಿ ಧನವಿನಿಯೋಗ ವಿಧೇಯಕವೂ ಸೇರಿದಂತೆ ಒಟ್ಟು 16 ವಿಧೇಯಕಗಳನ್ನು ಮಂಡಿಸಿ, ಪರ್ಯಾಲೋಚಿಸಿ ಅಂಗೀಕರಿಸಲಾಗಿದೆ. 2024ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣೆ) (ತಿದ್ದುಪಡಿ) ವಿಧೇಯಕ ಮತ್ತು 2024ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕಗಳನ್ನು ಹಿಂಪಡೆಯಲಾಗಿದೆ ಎಂದು ತಿಳಿಸಿದರು.

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 08 ವರದಿಗಳು ಮತ್ತು ಕರ್ನಾಟಕ ವಿಧಾನಮಂಡಲ ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳ 7 ವರದಿಗಳನ್ನು ಸದನದಲ್ಲಿ ಮಂಡಿಸಲಾಗಿದೆ. ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ನಡೆದ ಚರ್ಚೆಯಲ್ಲಿ 49 ಸದಸ್ಯರುಗಳು ಭಾಗವಹಿಸಿದ್ದು ಸುಮಾರು 13 ಗಂಟೆ 11 ನಿಮಿಷಗಳ ಕಾಲ ಚರ್ಚೆ ನಡೆಸಲಾಗಿದೆ. ನಿಯಮ 60ರಡಿಯಲ್ಲಿ ನೀಡಿದ್ದ 2 ನಿಲುವಳಿ ಸೂಚನೆಗಳನ್ನು ನಿಯಮ 69ಕ್ಕೆ ಪರಿವರ್ತಿಸಿರುವುದು ಸೇರಿದಂತೆ ಒಟ್ಟು 04 ಸೂಚನೆಗಳನ್ನು ನಿಯಮ 69ರಡಿಯಲ್ಲಿ ಚರ್ಚಿಸಲಾಗಿದೆ.

ಒಟ್ಟು 3004 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಸದನದಲ್ಲಿ ಉತ್ತರಿಸಬೇಕಾಗಿದ್ದ 150 ಪ್ರಶ್ನೆಗಳ ಪೈಕಿ 137 ಪ್ರಶ್ನೆಗಳಿಗೆ ಹಾಗೂ ಲಿಖಿತ ಮೂಲಕ ಉತ್ತ–ರಿಸುವ 2,237 ಪ್ರಶ್ನೆಗಳ ಪೈಕಿ 1,794 ಪ್ರಶ್ನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿದೆ. ಗಮನ ಸೆಳೆಯುವ 444 ಸೂಚನೆಗಳ ಪೈಕಿ 294 ಸೂಚನೆಗಳಿಗೆ ಉತ್ತರವನ್ನು ಸ್ವೀಕರಿಸಲಾಗಿದೆ. ನಿಯಮ 351 ರಡಿಯಲ್ಲಿ 160 ಸೂಚನೆಗಳನ್ನು ಅಂಗೀಕರಿಸಿದ್ದು, 80 ಸೂಚನೆಗಳ ಉತ್ತರಗಳನ್ನು ಸ್ವೀಕರಿಸಲಾಗಿದೆ. ಶೂನ್ಯ ವೇಳೆಯಲ್ಲಿ ಒಟ್ಟು 05 ಸೂಚನೆಗಳನ್ನು ಚರ್ಚಿಸಲಾಗಿದೆ ಎಂದು ಅವರು ವಿವರಿಸಿದರು.

ಇತ್ತೀಚೆಗೆ ನಿಧನ ಹೊಂದಿದ ಗಣ್ಯರುಗಳಿಗೆ ಸಂತಾಪ ಸೂಚನಾ ನಿರ್ಣಯ ಮಂಡಿಸಿ ಅಂಗೀಕರಿಸಲಾಗಿದೆ. ರಾಷ್ಟ್ರಪತಿಗಳು, ರಾಜ್ಯಪಾಲ–ರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಬಗ್ಗೆ ಕಾರ್ಯದರ್ಶಿಯವರ ವರದಿಯನ್ನು ಸಹ ಮಂಡಿಸಲಾಗಿದೆ ಎಂದರು.

ರಾಜ್ಯದಲ್ಲಿ ಸುರಿದ ಅಧಿಕ ಮಳೆಯಿಂದ ಉಂಟಾದ ನಷ್ಟ ಕುರಿತಂತೆ ಕಂದಾಯ ಸಚಿವರು ನೀಡಿದ ಹೇಳಿಕೆಯ ಮೇಲೆ ಚರ್ಚಿಸಲಾಗಿದ್ದು, ಕಂದಾಯ ಸಚಿವರು ಹಾಗೂ ಮಾನ್ಯ ಮುಖ್ಯಮಂತ್ರಿಯವರು ಸ್ಪಷ್ಟೀಕರಣ ನೀಡಿದ್ದಾರೆ. 2024–25ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತು ಹಾಗೂ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸಿ ಡಿ.17ರಂದು ಮತಕ್ಕೆ ಹಾಕಿ ಅಂಗೀಕ–ರಿಸಲಾಯಿತು ಎಂದು ಅವರು ತಿಳಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಸೆನೆಟ್‌ಗೆ ಮೂರು ಸದಸ್ಯರುಗಳನ್ನು ನಾಮನಿರ್ದೇಶನ ಮಾಡಲು ಸದನವು ಮಾನ್ಯ ಸಭಾಧ್ಯಕ್ಷರಿಗೆ ಡಿ.18ರಂದು ಅಧಿಕಾರ ನೀಡಿದೆ. ಸದನದಲ್ಲಿ ಶ್ರೀ ಟಿ.ಬಿ. ಜಯಚಂದ್ರ ಅವರಿಗೆ ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರದಾನ ಮಾಡಲಾಗಿದೆ. ಅಂತಾರಾಷ್ಟ್ರೀಯ ವಿಶ್ವ ಚೆಸ್ ಚಾಂಪಿಯನ್‌ಶಿಪ್ ಪಟ್ಟವನ್ನು ಮುಡಿಗೇ–ರಿಸಿಕೊಂಡ ಭಾರತದ ಗುಖೇಶ್ ದೊಮ್ಮರಾಜು ಅವರಿಗೆ ಅಭಿನಂದನೆಗಳನ್ನು ಸಲ್ಲಿಸಲಾಗಿದೆ.



ಸದನ ನಡೆಸಲು ಸಹಕರಿಸಿದ ಸಭಾ ನಾಯಕರಾದ ಮುಖ್ಯಮಂತ್ರಿಯವರಿಗೆ, ವಿರೋಧ ಪಕ್ಷದ ನಾಯಕರಿಗೆ, ಸಚಿವ ಸಂಪುಟದ ಸದಸ್ಯ–ರಿಗೆ, ಸರ್ಕಾರಿ ಮುಖ್ಯ ಸಚೇತಕರಿಗೆ ಎಲ್ಲಾ ಸದಸ್ಯರುಗಳಿಗೆ ಮಾಧ್ಯಮ ಪ್ರತಿನಿಧಿಗಳಿಗೆ, ಇಲಾಖಾ ಮುಖ್ಯಸ್ಥರು, ಅಧಿಕಾರಿ–ಸಿಬ್ಬಂದಿಗೆ, ಬೆಳಗಾವಿಯಲ್ಲಿ ವಸತಿ ಮತ್ತು ಸಾರಿಗೆ ವ್ಯವಸ್ಥೆ ಮಾಡಿದ ಶಾಸಕರು ಮತ್ತು ನಿರಂತರವಾಗಿ ಪ್ರಯತ್ನಿಸಿ ಯಶಸ್ವಿಯಾಗಿ ಕಾರ್ಯನಿರ್ವಹಿಸಿದ ಎಲ್ಲರಿಗೂ ಹಾಗೂ ವಿಶೇಷವಾಗಿ ಬೆಳಗಾವಿ ಜಿಲ್ಲಾಡಳಿತಕ್ಕೆ ಹಾಗೂ ಕಾನೂನು ಸುವ್ಯವಸ್ಥೆಯ ಜವಾಬ್ದಾರಿಗಳನ್ನು ಸೂಕ್ತವಾಗಿ ನಿರ್ವಹಿಸಿದ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಸಿಬ್ಬಂದಿಗೆ ಹಾಗೂ ವಿಧಾನಸಭೆ ಸಚಿವಾಲಯದ ಅಧಿಕಾರಿ ಹಾಗೂ ಸಿಬ್ಬಂದಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ಹೇಳಿದರು.

ಇದೆ ವೇಳೆ ಸಭಾಧ್ಯಕ್ಷರು, ನಾಡಿನ ಜನತೆಗೆ ಮುಂಬರುವ 2024ರ ಹೊಸ ವರ್ಷದ ಶುಭಾಶಯಗಳನ್ನು ತಿಳಿಸಿದರು. ರಾಷ್ಟ್ರಗೀತೆಯೊಂದಿಗೆ ಸದನವನ್ನು ಅನಿರ್ಧಿಷ್ಟ ಅವಧಿಗೆ ಮುಂದೂಡಲಾಯಿತು.

*****

### ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ವಿವಿಧ ಸ್ಥಾಯಿ ಸಮಿತಿಗಳ 7 ವರದಿಗಳ ಮಂಡನೆ: ಯು.ಟಿ.ಖಾದರ್

ಬೆಳಗಾವಿ ಸುವರ್ಣಸೌಧ ಡಿ.19 ಕರ್ನಾಟಕ ವಿಧಾನಮಂಡಲ ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳ ವರದಿಗಳನ್ನು ಸದನದಲ್ಲಿ ಮಂಡಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ಹೇಳಿದರು.

ವಿಧಾನಸಭೆಯಲ್ಲಿ ಡಿ.19ರಂದು ಕೊನೆಯ ದಿನದ ಅಧಿವೇಶನದ ಕಾರ್ಯಕಲಾಪ ಕುರಿತು ವಿವರಿಸಿದ ಅವರು, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮಿತಿಯ 2024–25ನೇ ಸಾಲಿನ ಮೊದಲನೇ ವರದಿ., ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 2023– 24ನೇ ಸಾಲಿನ ಮೂವತ್ತೆಂಟನೇ ವರದಿ., ಕರ್ನಾಟಕ ವಿಧಾನಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ ನೂರ ಮೂವತ್ತೇಳನೇ ಮತ್ತು ನೂರ ಮೂವತ್ತೆಂಟನೇ ವರದಿಗಳು., ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2023–24ನೇ ಸಾಲಿನ ಮೂರನೇ ವರದಿ., ಕರ್ನಾಟಕ ವಿಧಾನಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ 2024–25ನೇ ಸಾಲಿನ ನಾಲ್ಕನೇ ವರದಿ., ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2023–24ನೇ ಸಾಲಿನ 39ನೇ ವರದಿ ಹಾಗೂ 2024–25ನೇ ಸಾಲಿನ 40, 41 ಮತ್ತು 42ನೇ ವರದಿಗಳು ಮತ್ತು ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ 2024–25ನೇ ಸಾಲಿನ ಮೊದಲನೇ ವರದಿಗಳನ್ನು ಮಂಡಿಸಲಾಗಿದೆ ಎಂದು ಅವರು ವಿವರಿಸಿದರು. ಈ ಅಧಿವೇಶನದಲ್ಲಿ 41 ಅರ್ಜಿಗಳನ್ನು ಸದನಕ್ಕೆ ಒಪ್ಪಿಸಲಾಗಿದೆ. ಸಭೆಯ ಮುಂದಿಡಲಾದ ಕಾಗದ ಪತ್ರಗಳ 1 ಮತ್ತು 2 ಪಟ್ಟಿಯಿಂದ ಒಟ್ಟು 24 ಅಧಿಸೂಚನೆಗಳು, 02 ಅಧ್ಯಾದೇಶಗಳು ಮತ್ತು 170 ವಾರ್ಷಿಕ ವರದಿಗಳು, 181 ಲೆಕ್ಕ ಪರಿಶೋಧನಾ ವರದಿಗಳು., 03 ಲೆಕ್ಕ ತಪಾಸಣಾ ವರದಿಗಳು, 05 ಅನುಪಾಲನ ವರದಿಗಳು ಹಾಗೂ 04 ಅನುಸರಣಾ ವರದಿಗಳನ್ನು ಸದನದಲ್ಲಿ ಮಂಡಿಸಲಾಗಿರುತ್ತದೆ ಎಂದು ಅವರು ವಿವರಿಸಿದರು.

### ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ವಿಶೇಷ ನಿರ್ಣಯ, ಹೊಸ ದಾಖಲೆ: ಯು.ಟಿ.ಖಾದರ್

ಬೆಳಗಾವಿ ಸುವರ್ಣಸೌಧ : ಬೆಳಗಾವಿಯಲ್ಲಿ 1924ರಲ್ಲಿ ನಡೆದ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಅಧಿಕೃತ ನಿರ್ಣಯವನ್ನು ಡಿ.19ರಂದು ಸದನದಲ್ಲಿ ಮಂಡಿಸಿ ಸರ್ವಾನುಮತದಿಂದ ಅಂಗೀಕರಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಡಿ.19ರಂದು ಕೊನೆಯ ದಿನದ ಅಧಿವೇಶನದ ಕಾರ್ಯಕಲಾಪ ಕುರಿತು ವಿವರಿಸಿದ ಅವರು, ಬೆಳಗಾವಿಯ ಸುವರ್ಣವಿಧಾನ ಸೌಧದಲ್ಲಿ ಪ್ರಥಮ ಬಾರಿಗೆ ತಡರಾತ್ರಿಯವರೆಗೆ ಅಧಿವೇಶನ ನಡೆಸಿ ಹೊಸ ದಾಖಲೆ ನಿರ್ಮಿಸಲಾಗಿದೆ ಎಂದು ಅವರು ವಿವರಿಸಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದ ಉತ್ತರ ಮತ್ತು ದಕ್ಷಿಣ ಭಾಗದಲ್ಲಿ ಶಾಶ್ವತ ದೀಪಾಲಂಕಾರ ವ್ಯವಸ್ಥೆ ಮಾಡಲಾಗಿದೆ. ಬೆಳಗಾವಿಯ ಸುವರ್ಣ ವಿಧಾನ ಸೌಧದ ಮೊದಲನೇ ಮಹಡಿಯಲ್ಲಿ ಅನುಭವ ಮಂಟಪದ ತೈಲಚಿತ್ರವನ್ನು ಅನಾವರಣ ಮಾಡಲಾಗಿದೆ. ಸುವರ್ಣ ವಿಧಾನ ಸೌಧದ ವಿಧಾನಸಭೆಯ ಸಭಾಂಗಣದಲ್ಲಿರುವ ಸಭಾಧ್ಯಕ್ಷರ ಪೀಠವನ್ನು ಹೊಸದಾಗಿ ರೋಸ್‌ವುಡ್‌ನಿಂದ ನಿರ್ಮಿಸಿ ಅಳವಡಿಸಲಾಗಿದೆ.

ಸುವರ್ಣ ವಿಧಾನಸೌಧದ ವಿಧಾನಸಭೆಯ ಸಭಾಂಗಣದಲ್ಲಿ ಭಾರತ ದೇಶದ ಸಂವಿಧಾನ ರಚನಾ ಸಭೆಯ ಅಧ್ಯಕ್ಷರು ಹಾಗೂ ದೇಶದ ಪ್ರಥಮ ರಾಷ್ಟ್ರಪತಿ ಡಾ.ಬಾಬು ರಾಜೇಂದ್ರ ಪ್ರಸಾದ್, ದೇಶದ ಪ್ರಥ–ಮ ಪ್ರಧಾನಿ ಪಂಡಿತ್ ಜವಹರ್‌ಲಾಲ್ ನೆಹರು, ಸ್ವಾತಂತ್ರ್ಯ ಹೋರಟಗಾರರು ಹಾಗೂ ದೇಶದ ಪ್ರಥಮ ಶಿಕ್ಷಣ ಸಚಿವರಾದ ಮೌಲಾನಾ ಅಬುಲ್ ಕಲಾಂ ಅಜಾದ್ ಮತ್ತು ದೇಶದ ಪ್ರಥ–ಮ ಮಹಿಳಾ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿ ಅವರುಗಳ ಕಲಾಕೃತಿಗಳನ್ನು ಡಿ.16ರಂದು ಅನಾವರಣಗೊಳಿಸಲಾಯಿತು ಹಾಗೂ ಮರುವಿನ್ಯಾಸಗೊಂಡ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಭಾರತದ ಅಧ್ಯಾತ್ಮಿಕ ಹಾಗೂ ತತ್ವಜ್ಞಾನಿಗಳಾದ ಸ್ವಾಮಿ ವಿವೇಕಾನಂದ, ಅಪ್ರತಿಮ ಸ್ವಾತಂತ್ರ್ಯ ಹೋರಟಗಾರರಾದ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ವರ್ಣ ಚಿತ್ರಗಳನ್ನು ಸಹ ಅನಾವರಣಗೊಳಿಸಲಾಗಿದೆ ಎಂದು ಸಭಾಧ್ಯಕ್ಷರು ವಿವರಿಸಿದರು.

### ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ

## ವಕ್ಫ್ ಆಸ್ತಿ ಸಂಬಂಧ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ಸಮಿತಿ ರಚನೆ



ಬೆಳಗಾವಿ ಸುವರ್ಣಸೌಧ ಡಿ.18 :ವಕ್ಫ್ ಆಸ್ತಿ ಸಂಬಂಧ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ಸಮಿತಿ ರಚನೆಗೆ ಸರ್ಕಾರ ಸಿದ್ದವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದರು.

ಬೆಳಗಾವಿ ಸುವರ್ಣಸೌಧದಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಗುರುವಾರ ನಿಯಮ 69 ಅಡಿ ವಕ್ಫ್ ಕುರಿತು ವಿರೋಧ ಪಕ್ಷದ ನಾಯಕರು ಪ್ರಸ್ತಾಪಿಸಿದ್ದ ವಿಚಾರಗಳಿಗೆ ಉತ್ತರಿಸಿ ಅವರು ಮಾತನಾಡಿದರು.

ವಿರೋಧ ಪಕ್ಷಗಳ ಆರೋಪಗಳಿಗೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ವಿವರವಾಗಿ ಉತ್ತರ ನೀಡಿದ್ದಾರೆ. 1954ರಲ್ಲಿ ವಕ್ಫ್ ಕಾಯ್ದೆಯನ್ನು ಕೇಂದ್ರ ಸರ್ಕಾರ ಜಾರಿ ಮಾಡಿದೆ. ಈ ಕಾಯ್ದೆಗೆ ರಾಜ್ಯ ಸರ್ಕಾರ ತಿದ್ದುಪಡಿ ತರಲು ಸಾಧ್ಯವಿಲ್ಲ. ರಾಜ್ಯದಲ್ಲಿ 2008 ರಿಂದ 2013ರ ವರೆಗೆ ಹಾಗೂ 2019 ರಿಂದ 2023ರವೆಗೆ ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಆಡಳಿತದಲ್ಲಿತ್ತು. ಕೇಂದ್ರದಲ್ಲಿ 2014 ರಿಂದ ಬಿಜೆಪಿ ಅಧಿಕಾರದಲ್ಲಿದೆ. ಆಗ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುವ ಬಗ್ಗೆ ಆಲೋಚಿಸದೆ, ಈಗ ವಿವಾದ ಮಾಡುತ್ತಿದ್ದಾರೆ. ಕೇಂದ್ರ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಮುಸ್ಲಿಂ ಧಾರ್ಮಿಕ ಗುರುಗಳೊಂದಿಗೆ ಚರ್ಚಿಸಿ ಒತ್ತುವರಿಯಾದ ವಕ್ಫ್ ಆಸ್ತಿ ತೆರವು ಮಾಡಿ ರಕ್ಷಿಸುವುದಾಗಿ ಹೇಳಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸರ್ಕಾರ ವಿರೋಧ ಪಕ್ಷದ ಎಲ್ಲಾ ಪ್ರಶ್ನೆ ಹಾಗೂ ವಿವಾದಗಳಿಗೆ ಸ್ಪಷ್ಟವಾಗಿ ಉತ್ತರಿಸಿದೆ. ಇದರಿಂದ ಜನರಲ್ಲಿ ಗೊಂದಲವು ದೂರವಾಗಿದೆ. ಇನಾಂ ರದ್ದತಿ ಹಾಗೂ ಭೂ ಸುಧಾರಣೆ ಕಾಯ್ದೆಯಡಿ ಮಂಜೂರಾದ ವಕ್ಫ್ ಜಮೀನುಗಳನ್ನು ಸರ್ಕಾರ ಮುಟ್ಟುವುದಿಲ್ಲ. ವಕ್ಫ್ ಜಾಗದಲ್ಲಿರುವ ಖಬರಸ್ಥಾನ, ದರ್ಗಾ, ಮಸೀದಿಗಳನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯವಾಗಿದೆ. ಒಟ್ಟಾರೆ 1.28 ಲಕ್ಷ ಎಕರೆ ವಕ್ಫ್ ಆಸ್ತಿಯಲ್ಲಿ 47,263 ಎಕರೆ ಇನಾಂ ರದ್ದತಿ ಹಾಗೂ 23,623 ಎಕರೆ ಭೂ ಸುಧಾರಣೆ ಕಾಯ್ದೆ, 3000 ಎಕರೆ ಸಾರ್ವಜನಿಕ ಉದ್ದೇಶಗಳಿಗಾಗಿ ಬಳಸಲಾಗಿದೆ. ಸುಮಾರು 17,969 ಎಕರೆ ವಕ್ಫ್ ಜಮೀನನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಣ ಮಾಡಿದ್ದಾರೆ. ಇವುಗಳನ್ನು ರಕ್ಷಿಸಲು ಸುಪ್ರಿಂ ಕೋರ್ಟ್ ಆದೇಶವಿದೆ. ಒಮ್ಮೆ ವಕ್ಫ್ ಆಸ್ತಿ ಎಂದು ನಮೂದಾದರೆ ಅದು ಯಾವಾಗಲೂ ವಕ್ಫ್ ಆಸ್ತಿಯಾಗಿಯೇ ಇರುವುದು. ಸರ್ಕಾರದ ಉತ್ತರ ವಿರೋಧ ಪಕ್ಷಗಳು ಸಮಾದಾನ ತರದಿದ್ದರೆ, ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ಸಮಿತಿ ರಚನೆಗೆ ಸರ್ಕಾರ ಸಿದ್ದವಿದೆ. ಇದರಲ್ಲಿ ಯಾವುದೇ ಪ್ರತಿಷ್ಠೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

### ಅಕ್ರಮ ಮದ್ಯ ಮಾರಾಟ ವಿರುದ್ಧ ಕಠಿಣ ಕ್ರಮ : ಸಚಿವ ತಿಮ್ಮಾಪುರ

ಬೆಳಗಾವಿ ಸುವರ್ಣಸೌಧ, ರಾಜ್ಯದಲ್ಲಿ ಅಕ್ರಮ ಮದ್ಯ ಮಾರಾಟ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ಸ್ಪಷ್ಟಪಡಿಸಿದರು. ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಸುನಿಲ್ ಗೌಡ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ರಾಜ್ಯದಲ್ಲಿ ಅಕ್ರಮ ಮದ್ಯ ಮಾರಾಟದ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಅನ್ವಯ ಕಳೆದ ಮೂರು ವರ್ಷಗಳಲ್ಲಿ ಒಟ್ಟು 5751 ದಾಳಿಗಳನ್ನು ನಡೆಸಿ, 4437 ಪ್ರಕರಣಗಳನ್ನು ದಾಖಲಿಸಲಾಗಿದೆ. ಪ್ರಕರಣಗಳಲ್ಲಿ ಭಾಗಿಯಾದ 5021 ಆರೋಪಿತರನ್ನು ದಸ್ತಗಿರಿ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

### ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ವಿಧೇಯಕ ಅಂಗೀಕಾರ

ಬೆಳಗಾವಿ ಸುವರ್ಣಸೌಧ ಡಿ.18 : 2024ನೇ ಸಾಲಿನ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರಚನೆ ವಿಧೇಯಕ್ಕೆ ವಿಧಾನಸಭೆ ಅಂಗೀಕಾರ ನೀಡಿದೆ. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಗುರುವಾರ ವಿಧಾನ ಸಭೆ ಕಲಾಪದಲ್ಲಿ, 2024ನೇ ಸಾಲಿನ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚನೆ ಹಾಗೂ ಅಂಗೀಕಾರಕ್ಕೆ ಸದನದ ಮುಂದೆ ಮಂಡಿಸಿದರು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮಾದರಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ರಚನೆಗಾಗಿ ವಿಧೇಯಕವನ್ನು ರಚನೆ ಮಾಡಲಾಗಿದೆ. ಪ್ರಾಧಿಕಾರಕ್ಕೆ ಹಿರಿಯ ಶ್ರೇಣಿ ಐ.ಎ.ಎಸ್ ಅಧಿಕಾರಿಯನ್ನು ಆಯುಕ್ತರನ್ನಾಗಿ ನೇಮಿಸಲು ಅವಕಾಶ ನೀಡಲಾಗಿದೆ. ಪ್ರಾಧಿಕಾರ ಸದಸ್ಯತ್ವದ ನೇಮಕಕ್ಕೂ ತಿದ್ದುಪಡಿ ತಂದು ಸರ್ಕಾರಕ್ಕೆ ಸದಸ್ಯರ ನೇಮಕ ಮಾಡಲು ಅಧಿಕಾರ ನೀಡಲಾಗಿದೆ. ಮೈಸರೂ ಪರಾಂಪರಿಕ ಮಹತ್ವ ಕಾಪಾಡಲು ಪ್ರಾಧಿಕಾರದ ಅಡಿ ಪರಾಂಪರಿಕ ಕಟ್ಟಡಗಳ ರಕ್ಷಣಾ ಸಮಿತಿ ರಚನೆ ಮಾಡಲಾಗುವುದು ಎಂದು ಸಚಿವ ಬಿ.ಎಸ್.ಸುರೇಶ್ ತಿಳಿಸಿದರು. ಶಾಸಕರಾದ ತಮ್ಮಣ್ಣ, ಭೈರತಿ ಸುರೇಶ್, ಎಸ್.ಟಿ.ಸೋಮಶೇಖರ್,ಟಿ. ಎಸ್.ಶ್ರೀವತ್ಸ, ಜಿ.ಟಿ.ದೇವೇಗೌಡ, ವಿ.ಸುನಿಲ್ ಕುಮಾರ್, ಹೆಚ್.ಡಿ.ರೇವಣ್ಣ ವಿಧೇಯಕ ಕುರಿತು ಚರ್ಚಿಸಿದರು. ನಂತರ ವಿಧಾನ ಸಭೆಯಲ್ಲಿ ಧ್ವನಿ ಮತದ ಮೂಲಕ ಹಲವು ತಿದ್ದಪಡಿಯೊಂದಿಗೆ ವಿಧೇಯಕವನ್ನು ಅಂಗೀಕರಿಸಲಾಯಿತು.

### ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಕ್ಷೇತ್ರಗಳ ಅಭಿವೃದ್ಧಿಗೆ ಯಾವುದೇ ಕೊರತೆಯಾಗಿಲ್ಲ



ಬೆಳಗಾವಿ ಸುವರ್ಣಸೌಧ ಡಿ.19 ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ಆಯವ್ಯಯದಲ್ಲಿಯೇ ಸೂಕ್ತ ಅನುದಾನವನ್ನು ಕಲ್ಪಿಸಿರುತ್ತದೆ. ಹಾಗೂ ರಾಜ್ಯದ ಸರ್ವತೋಮುಖ ಅಭಿವೃದ್ದಿಗೆ ಎಲ್ಲಾ ಕ್ಷೇತ್ರಗಳಿಗೂ ಅಗತ್ಯ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಿರುತ್ತದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಕ್ಷೇತ್ರಗಳ ಅಭಿವೃದ್ಧಿಗೆ ಯಾವುದೇ ಕೊರತೆಯಾಗಿರುವುದಿಲ್ಲ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಸದಸ್ಯರಾದ ಸಿ.ಟಿ.ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಮುಖ್ಯಮಂತ್ರಿಗಳು, ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸಲು ಸರ್ಕಾರವು ಯಾವುದೇ ನಿರ್ಧಾರ ತೆಗೆದುಕೊಂಡಿರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಗ್ಯಾರಂಟಿ ಯೋಜನೆಗಳು ಅಸ್ತಿತ್ವಕ್ಕೆ ಬಂದಾಗಿನಿಂದ 2024ರ ನವೆಂಬರ್ ಅಂತ್ಯದವರೆಗೆ ಗೃಹಲಕ್ಷ್ಮಿ ಯೋಜನೆಗೆ 32,817 ಕೋಟಿ ರೂ., ಅನ್ನ ಭಾಗ್ಯ ಯೋಜನೆಗೆ 8,931 ಕೋಟಿ ರೂ., ಗೃಹಜ್ಯೋತಿಗೆ 14,869 ಕೋಟಿ ರೂ., ಶಕ್ತಿ ಯೋಜನೆಗೆ 6,543 ಕೋಟಿ ರೂ., ಯುವನಿಧಿ ಯೋಜನೆಗೆ 221.3 ಕೋಟಿ ರೂ. ವೆಚ್ಚವಾಗಿದೆ.

ಜಿಲ್ಲಾಮಟ್ಟದಲ್ಲಿ 30 ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಚಿಸಿ ಆದೇಶಿಸಲಾಗಿದೆ.ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಅವರ ಆಪ್ತ ಸಿಬ್ಬಂದಿ ಮತ್ತು ಪ್ರಾಧಿಕಾರದ ಸದಸ್ಯರುಗಳ ವೇತನ ಹಾಗೂ ಇತರೆ ಸವಲತ್ತುಗಳನ್ನು ನಿಗದಿಪಡಿಸಲಾಗಿದೆ. ಅದೇ ರೀತಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು ಹಾಗೂ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಗೌರವಧನ ಸಭಾ ಭತ್ಯೆ ನಿಗದಿಪಡಿಸಿ ಆದ–ೇಶಿಸಲಾಗಿದೆ ಎಂದು ಮುಖ್ಯಮಂತ್ರಿಗಳು ಲಿಖಿತ ಉತ್ತರ ನೀಡಿದ್ದಾರೆ.

### ಸಚಿವ ಎಸ್.ಮಧು ಬಂಗಾರಪ್ಪ ಹೇಳಿಕೆ

## ಶೀಘ್ರ ಕಲ್ಯಾಣ ಕರ್ನಾಟಕ ಭಾಗದ 5,267 ಶಿಕ್ಷಕರ ನೇಮಕಾತಿ

ಬೆಳಗಾವಿ: ಸರ್ಕಾರ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳಲ್ಲಿ ಖಾಲಿಯಿರುವ 4,882 ಪ್ರಾಥಮಿಕ ಹಾಗೂ 385 ಪ್ರೌಢ ಶಿಕ್ಷಕರು ಸೇರಿ ಒಟ್ಟು 5,267 ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಿದೆ. ಶೀಘ್ರವೇ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ಹೇಳಿದರು.

ಬೆಳಗಾವಿ ಸುವರ್ಣಸೌಧದಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ಗುರುವಾರ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕರುಗಳ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ರಾಜ್ಯದಲ್ಲಿ 50,567 ಪ್ರಾಥಮಿಕ ಹಾಗೂ 9,705 ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳು ಸೇರಿ ಒಟ್ಟು 59,772 ಶಿಕ್ಷಕರ ಹುದ್ದೆಗಳು ಖಾಲಿಯಿವೆ. ಸರ್ಕಾರ 2022ರಲ್ಲಿ 15,000 ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದ್ದು, ಇದರಲ್ಲಿ ಅರ್ಹತೆ ಪಡೆದ 13,352 ಅಭ್ಯರ್ಥಿಗಳ ಪೈಕಿ, 12,521 ಶಿಕ್ಷಕರಿಗೆ ನೇಮಕಾತಿ ಆದೇಶ ಪತ್ರ ನೀಡಲಾಗಿದೆ. ಉಳಿದ ಶಿಕ್ಷಕರ ನೇಮಕಾತಿ ಬಗ್ಗೆ ಅಭ್ಯರ್ಥಿಗಳು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ. ಸರ್ಕಾರಿ ಶಾಲೆಗಳು ಮಾತ್ರವಲ್ಲ ಅನುದಾನಿತ ಶಾಲೆಗಳಲ್ಲಿಯೂ ಶಿಕ್ಷಕರ ಹುದ್ದೆಗಳು ಖಾಲಿಯಿವೆ ಎಂದರು.

ಅತಿಥಿ ಶಿಕ್ಷಕರ ಗೌರವಧನ ಹೆಚ್ಚಳಕ್ಕೆ ಕ್ರಮ: ಶಾಲೆಗಳಿಗೆ ಹೊರಗುತ್ತಿಗೆ ಆಧಾರದಲ್ಲಿ ಯಾವುದೇ ಶಿಕ್ಷಕರನನ್ನು ನೇಮಿಸಿಲ್ಲ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರಾಥ–ಮಿಕ ಶಾಲೆಗಳಿಗೆ 35,000 ಹಾಗೂ ಪ್ರೌಢಶಾಲೆಗಳಿಗೆ 8,968 ಅಥಿತಿ ಶಿಕ್ಷಕರನ್ನು ನೇಮಿಸಲಾಗಿದೆ. ಸದ್ಯ ಅತಿಥಿ ಶಿಕ್ಷಕ–ರಿಗೆ ನೀಡುವ ಗೌರವಧನ ಹೆಚ್ಚಿಸಲು ಮುಖ್ಯಮಂತ್ರಿಗಳು ಒಲವು ತೋರಿದ್ದು, ಶೀಘ್ರವೇ ಹೆಚ್ಚಳಕ್ಕೆ ಕ್ರಮ ಕೈಗೊಳ್ಳುವುದಾಗಿ ಸಚಿವ ಎಸ್.ಮಧು ಬಂಗಾರಪ್ಪ ಭರವಸೆ ನೀಡಿದರು. ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವರಿಗೆ ಸದ್ಯ ರೂ.12,000 ಗೌರವ ಧನ ನೀಡಲಾಗುತ್ತಿದೆ. ಸರ್ಕಾರ ನಿಯಮಾನುಸಾರ ಕನಿಷ್ಠ ಕೂಲಿ ವೇತನವೇ ರೂ.18,000 ಇದೆ. ಎರಡು ಪದವಿ ಪಡೆದು ಉಪನ್ಯಾಸ ಮಾಡುವವರಿಗೆ ರೂ.12,000 ಗೌರವ ಧನ ನೀಡುವುದು ವಿಪರ್ಯಾಸ ಎನಿಸುತ್ತದೆ. ಸರ್ಕಾರ ಅತಿಥಿ ಪಿಯು ಉಪನ್ಯಾಸಕರಿಗೆ ರೂ.30,000 ಮಾಸಿಕ ಗೌರವಧನ ನೀಡುವಂತೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಹಾಗೂ ಶಾಸಕ ಸುನೀಲ್ ಕುಮಾರ್ ಸಚಿವರನ್ನು ಒತ್ತಾಯಿಸಿದರು.

ಬೆಂಗಳೂರಿನ ಮಹಾಲಕ್ಷ್ಮೀ ಲೇ ಔಟ್ ವಿಧಾನಸಭಾ ಕ್ಷೇತ್ರದಲ್ಲಿನ ಸರ್ಕಾರಿ



ಪ್ರಾಥಮಿಕ ಶಾಲೆಗಳಲ್ಲಿ 20 ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ. ಶಾಲಾ ಕಟ್ಟಡ ನಿರ್ಮಾಣಕ್ಕೆ ಕಳೆದ 3 ವರ್ಷಗಳಲ್ಲಿ 20 ಕೊಠಡಿಗಳಿಗೆ ರೂ.2.78 ಕೋಟಿ ಮಂಜೂರು ಮಾಡಲಾಗಿದೆ ಎಂದು ಶಾಸಕ ಗೋಪಾಲಯ್ಯ.ಕೆ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವ ಎಸ್.ಮಧು ಬಂಗಾರಪ್ಪ ಸ್ಪಷ್ಟೀಕರಣ ನೀಡಿದರು. ಶಾಸಕ ಗೋಪಾಲಯ್ಯ.ಕೆ ಅವರ ಬದಲಿಗೆ, ಶಾಸಕ ಭೈರತಿ ಬಸವರಾಜ್ ಪ್ರಶ್ನೆಯನ್ನು ಸದನದಲ್ಲಿ ಸಚಿವರಿಗೆ ಕೇಳಿದರು. ಸ್ಥಳೀಯ ಖಾಸಗಿ ಕಂಪನಿಗಳ ಸಾಮಾಜಿಕ ಹೊಣೆಗಾ–ರಿಕೆ ನಿಧಿಯನ್ನು ಬಳಿಸಕೊಂಡು ಶಾಲಾ ಕೊಠಡಿಗಳನ್ನು ದುರಸ್ತಿ ಮಾಡಲು ಅನುಮತಿ ನೀಡುವಂತೆ ಶಾಸಕ ಜಿ.ಟಿ.ದೇವೇಗೌಡ ಸಚಿವರಲ್ಲಿ ಕೋರಿದರು.

## ಕೃಷ್ಣಾ ಮೇಲ್ದಂಡೆ ಯೋಜನೆ ಹಂತ ಹಂತವಾಗಿ ಪೂರ್ಣ

ಬೆಳಗಾವಿ ಸುವರ್ಣಸೌಧ, ಡಿ.19 : ಕೃಷ್ಣಾ ಮೇಲ್ದಂಡೆ ಯೋಜನೆಗೆ ಸರ್ಕಾರವು ನೀಡಿರುವ ಆಡಳಿತಾತ್ಮಕ ಅನುಮೋದನೆ ಮೇರೆಗೆ, ಅನುದಾನ ಲಭ್ಯತೆ ಅನುಸಾರ ಸೂಕ್ತ ಅನುದಾನ ಒದಗಿಸಿ, ಯೋಜನೆಯನ್ನು ಹಂತ ಹಂತವಾಗಿ ಪೂರ್ಣಗೊಳಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಪಿ. ಹೆಚ್. ಪೂಜಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–1&2ರ ಯೋಜನೆಯನ್ನು ಪೂರ್ಣಗೊಳಿಸಲಾಗಿದ್ದು, ಹಂತ–3ರ ಯೋಜನೆಯನ್ನು ಪರಿಷ್ಕೃತ ಅನುಮೋದಿತ ಅಂದಾಜು ಮೊತ್ತ ರೂ.51,148.94 ಕೋಟಿ (2014–15ನೇ ಸಾಲಿನ ದರಪಟ್ಟಿಯಂತೆ)ಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಇಲ್ಲಿಯವರೆಗೆ ರೂ.18,307.33 ಕೋಟಿ ವೆಚ್ಚ ಮಾಡಲಾಗಿರುತ್ತದೆ. ಅನುಮೋದಿತ



ಯೋಜನಾ ಮೊತ್ತದನ್ವಯ ಬಾಕಿ ಉಳಿದ ಮೊತ್ತ ರೂ.32,841.61 ಕೋಟಿ ಆಗಿರುತ್ತದೆ ಎಂದು ತಿಳಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–1&2ರಲ್ಲಿ ಮುಳುಗಡೆಯಾದ ಜಮೀನು 1,75,470 ಎಕರೆ ಕ್ಷೇತ್ರಕ್ಕೆ ಮತ್ತು ಮುಳುಗಡೆಯಾದ 78,854 ಕಟ್ಟಡಗಳಿಗೆ ಈಗಾಗಲೇ ಪರಿಹಾರ ನೀಡಲಾಗಿದೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರಲ್ಲಿ ಮುಳುಗಡೆಯಾಗುವ ಜಮೀನು 75,563 ಎಕರೆ ಮತ್ತು ಮುಳುಗಡೆಯಾಗಲಿರುವ 25,660 ಕಟ್ಟಡಗಳ ಪರಿಹಾರಕ್ಕಾಗಿ ರೂ.17,627.00 ಕೋಟಿಗಳ ಅನುಮೋದಿತ ಮೊತ್ತದಲ್ಲಿ, ಇಲ್ಲಿಯವರೆಗೆ ರೂ.3,734.53 ಕೋಟಿ ಮೊತ್ತ ಪರಿಹಾರ ನೀಡಲಾಗಿದ್ದು,ಬಾಕಿ ಉಳಿದ ಮೊತ್ತ ರೂ.13,892.47 ಕೋಟಿ ಆಗಿರುತ್ತದೆ ಎಂದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 ರಡಿ ರಾಜ್ಯಕ್ಕೆ ಹಂಚಿಕೆಯಾದ 130 ಟಿಎಂಸಿ ನೀರಿನ ಬಳಕೆಯು ಕೇಂದ್ರ ಸರ್ಕಾರದಿಂದ ಹೊರಡಿಸುವ ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿರುತ್ತದೆ. ನ್ಯಾಯಾಧಿಕರಣ–2ರ ಕುರಿತು ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಕಣಿವೆ ರಾಜ್ಯಗಳ ದಾಖಲಿಸಿರುವ ವ್ಯಾಜ್ಯಗಳು ಇತ್ಯಥ–ರ್ಕಕ್ಕೆ ಬಾಕಿ ಇದ್ದು, ನ್ಯಾಯಾಧೀಕರಣ ತೀರ್ಪಿನ ಗೆಜೆಟ್ ಅಧಿಸೂಚನೆಗೆ ರಾಜ್ಯ ಸರ್ಕಾರದಿಂದ ನಿರಂತರವಾಗಿ ಆಡಳಿತಾತ್ಮಕ ಮತ್ತು ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದರು.

# ರಾಜ್ಯದಲ್ಲಿ ರಾಜಸ್ವ ಸಂಗ್ರಹ ಹೆಚ್ಚಳ : ಸಚಿವ ಕೃಷ್ಣ ಬೈರೇಗೌಡ



ಬೆಳಗಾವಿ: ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಇದುವರೆಗೆ 15,145.32 ಕೋಟಿಗಳಷ್ಟು ರಾಜಸ್ವ ಸಂಗ್ರಹಣೆ ಆಗಿದ್ದು,ಈ ಬಾರಿ ಕಳೆದ ಸಾಲಿಗಿಂತ ಹೆಚ್ಚು ರಾಜಸ್ವ ಸಂಗ್ರಹಣೆಯಾಗಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.
ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಶಶಿಲ್ ನಮೋಶಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ, ಪ್ರಸಕ್ತ ಸಾಲಿನಲ್ಲಿ ರಾಜಸ್ವ ಸಂಗ್ರಹಣೆಯಲ್ಲಿ ಕಳೆದ ಸಾಲಿಗಿಂತ ಶೇ. 20 ರಷ್ಟು ಹೆಚ್ಚು ಸಂಗ್ರಹದ ಗುರಿ ಇಟ್ಟುಕೊಳ್ಳಲಾಗಿದೆ ಎಂದರು.
ರಾಜ್ಯದಲ್ಲಿ ಭೌತಿಕ ಖಾತೆ ಬಳಸಿ ನೋಂದಣಿ ಮಾಡುತ್ತಿದ್ದ ಸಂದರ್ಭದಲ್ಲಿ ಸುಳ್ಳು ಗುರುತಿನ ಚೀಟಿ ಸೃಷ್ಟಿಸಿಕೊಂಡು, ಸುಳ್ಳು ಕಖಆ ಸಂಖ್ಯೆ ಸೃಷ್ಟಿಸಿ ಸರ್ಕಾರಿ ಆಸ್ತಿ, ಅಮಾಯಕರ ಆಸ್ತಿಗಳನ್ನು ಬೇರೊಬ್ಬರ ಹೆಸರಿಗೆ ನೋಂದಣಿಯಾಗುತ್ತಿದ್ದ Impersonation, ವಂಚನೆ ನೊಂದಣಿಗಳನ್ನು ಪ್ರಕರಣಗಳನ್ನು, ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಂಚನೆಯನ್ನು ಹಾಗೂ ಕಾನೂನುಬದ್ಧವಲ್ಲದ ನೋಂದಣಿಗಳನ್ನು ತಡೆಗಟ್ಟಲಾಗಿದೆ ಎಂದು ಹೇಳಿದರು. ಇ-ಖಾತಾ ಸಂಯೋಜನೆಯ ನಂತರ ಕಾನೂನು ಬಾಹಿರ ಮತ್ತು ಬೊಟ್ಟಿ ದಾಖಲೆಗಳನ್ನು ಸೃಷ್ಟಿಸಿಕೊಂಡು ನೋಂದಣಿ ಮಾಡಿಸಿಕೊಳ್ಳುತ್ತಿದ್ದ ದಸ್ತಾವೇಜುಗಳ ಸಂಖ್ಯೆ ಕಡಿಮೆಯಾಗಿದ್ದು, ಕಾನೂನು ಬದ್ದವಾಗಿ ನೈಜವಾದ ಆಸ್ತಿ ನೋಂದಣಿಯಿಂದ ಸರ್ಕಾರಕ್ಕೆ ಯಾವುದೇ ಆದಾಯ ನಷ್ಟ ಉಂಟಾಗಿರುವುದಿಲ್ಲ ಎಂದು ತಿಳಿಸಿದರು.

# ಜಿಲ್ಲಾ ನ್ಯಾಯಾಲಯ ಶೀಘ್ರ ಕಾರ್ಯಾರಂಭಿಸಲಿ



ಮುದ್ದೇಬಿಹಾಳ: ಪಟ್ಟಣದ ಜೆ-ಎಂಎಫ್‌ಸಿ ಕೋರ್ಟ್ ಕಾಂಪ್ಲೆಕ್ಸ್‌ನಲ್ಲಿ ಕಾರ್ಯನಿರ್ವಹಿಸಲು 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ (ಸಿಟ್ ಆ?ಯಟ್ ಮುದ್ದೇಬಿಹಾಳ)ವನ್ನು ಸರ್ಕಾರ ಮಂಜೂರು ಮಾಡಿದ್ದು ಅದನ್ನುಶೀಘ್ರವೇ ಕಾರ್ಯಾರಂಭಗೊಳಿಸಬೇಕು ಎಂದು ಕೋರಿ ಮುದ್ದೇಬಿಹಾಳ ನ್ಯಾಯವಾದಿಗಳ ಸಂಘದಿಂದ ರಾಜ್ಯ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಅವರಿಗೆ ಮನವಿ ಸಲ್ಲಿಸಲಾಗಿದೆ.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ ಮತ್ತು ಬಿ.ಎನ್. ಹೂಗಾರ ವಕೀಲರು ಸೋಮವಾರ' ಬೆಂಗಳೂರಿನಲ್ಲಿ ಮುಖ್ಯ ನ್ಯಾಯಮೂರ್ತಿಯವರ ಪರ್ಸನಲ್ ಸೆಕ್ರೆಟರಿ, ನ್ಯಾಯಾಧೀಶರಾದ ಕಸನಪ್ಪ ನಾಯಕ, ಹೈಕೋರ್ಟ್ ರಜಿಸ್ಟ್ರಾರ್ ಜನರಲ್ ಹೈಕೋರ್ಟ್ ಎಸ್.ಕೆ.ಭರತ್‌ಕುಮಾರ, ನ್ಯಾಯಮೂರ್ತಿಗಳು, ವಿಜಯಪುರ ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶರಾದ ಎಂ.ಐ.ಅರುಣ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿ ಇಲ್ಲಿನ ವಕೀಲರ ಬೇಡಿಕೆ ಈಡೇರಿಸುವಂತೆ ಕೋರಿದರು.

ಮುದ್ದೇಬಿಹಾಳದ ಕೋರ್ಟ್ ಕಟ್ಟಡ ಎಲ್ಲಸೌಲಭ್ಯಗಳೊಂದಿಗೆ ಸುಸಜ್ಜಿತವಾಗಿದೆ. ಇಲ್ಲಿ ಕಾರ್ಯ ನಿರ್ವಹಿಸಲು ನ್ಯಾಯಾಧೀಶರು, ಸಿಬ್ಬಂದಿಯವರನ್ನು ನೇಮಿಸಿ ಶೀಘ್ರ ನ್ಯಾಯಾಲಯ ಕಾರ್ಯಾರಂಭಗೊಳಿಸಿ ಈ ಭಾಗದ ಕಕ್ಷಿದಾರರಿಗೆ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಣೆ ಮಾಡಲು, ಅವರೆಲ್ಲರಿಗೂ ಶೀಘ್ರ ನ್ಯಾಯ ಒದಗಿಸಿಕೊಡಲು ಕ್ರಮ ಜರುಗಿಸುವಂತೆ ಮನವಿಯಲ್ಲಿ ಮುದ್ದೇಬಿಹಾಳಕ್ಕೆ ಜಿಲ್ಲಾನ್ಯಾಯಾಲಯದ ಅವಶ್ಯಕತೆ ಇರುವ ಕುರಿತು ಉಚ್ಚ ನ್ಯಾಯಾಲಯಕ್ಕೆ ಮೊದಲ ಬಾರಿಗೆ ಪ್ರಸ್ತಾವನೆ ಸಲ್ಲಿಸಿದ್ದ ಅಂದಿನ ವಿಜಯಪುರ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶರಾಗಿದ್ದ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಎಚ್.ಪಿ.ಸಂದೇಶ್, ನ್ಯಾಯಮೂರ್ತಿ ಸಂಜೀವಕುಮಾರ ಹಂಚಾಟಿ, ಉಚ್ಚ ನ್ಯಾಯಾಲಯದ ರಜಿಸ್ಟ್ರಾರ್ (ರಿವ್ಯೂ ಮತ್ತು ಸ್ಟಾಟಿಸ್ಟಿ) ವೆಂಕಟೇಶ ಹುಲಗಿ, ನ್ಯಾಯಾಲಯ ಮಂಜೂರಾತಿಗೆ ಸಹಕರಿಸಿದ ಹಣಕಾಸು ಇಲಾಖೆ ಕಾರ್ಯದರ್ಶಿ (ವೆಚ್ಚ) ರೇಜು, ಈಕ್ರಂ ಶರೀಫ್, ಗೋಪಿಚಂದ್ ಸೇರಿ ಕಾನೂನು ಮತ್ತು ಹಣಕಾಸು ಇಲಾಖೆಯ ಹಲವರನ್ನು ಈರ್ವರೂ ಭೇಟಿ ಮಾಡಿ ಸಿಹಿ ಹಂಚಿ ಸಂತಸ ಹಂಚಿಕೊಂಡರು., ಉಚ್ಚ ನ್ಯಾಯಾಲ ಯದ ನ್ಯಾಯ ಮೂರ್ತಿಗಳಾಗಿದ್ದ ಸದ್ಯ ಕರ್ನಾಟಕ ಲೋಕಾಯುಕ್ತರಾಗಿರುವ .ಪಾಟೀಲ (ಪಡೇಕನೂರ) ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಅವರ ದೂರದೃಷ್ಟಿತ್ವದಿಂದ ಮುದ್ದೇಬಿಹಾಳದಲ್ಲಿ ನಿರ್ಮಾಣ ಗೊಂಡಿರುವ ಸಕಲ ಸೌಕರ್ಯ ಹೊಂದಿರುವ ನ್ಯಾಯಾಲಯ ಕಟ್ಟಡದಲ್ಲೇ ಜಿಲ್ಲಾ ನ್ಯಾಯಾಲಯ ಮಂಜೂರಾಗಿದ್ದನ್ನು ಮುದ್ದೇಬಿಹಾಳ ಮತ್ತು ತಾಳಿಕೋಟೆ ವಕೀಲರು, ನಾಗರಿಕರ ಪರವಾಗಿ ಕೃತಜ್ಞತೆ ಸಲ್ಲಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಮುದ್ದೇಬಿಹಾಳದಲ್ಲಿ ಶಶಿಕಾಂತ ಮಾಲಗತ್ತಿ, ಜಿಲ್ಲಾ ನ್ಯಾಯಾಲಯ ಆರಂಭಿಸಲು ಸರ್ಕಾರ ಹಸಿರು ನಿಶಾನೆ ತೋರಿಸಿದ್ದರ ಹಿಂದೆ ನಮ್ಮ ಫಾಲೋ ಅಪ್, ಪ್ರಯತ್ನ ಮತ್ತು ಸಂಬಂಧಿಸಿದ ಕಡತ ವಿಲೇವಾರ ಅಚ್ಚುಕಟ್ಟಾಗಿ ನಡೆಸಿದ್ದು ಕಾರಣ ಎಂದರು.

# ಅನ್ನ ನೀಡುವುದು ಪುಣ್ಯದಕಾರ್ಯವಾಗಿದೆ




ಮೂಡಲಗಿ: ಮುಖ್ಯ ಅತಿಥಿ ಸಮುದಾಯ ಆರೋಗ್ಯ ಕೇಂದ್ರದ ಮುಖ್ಯ ವೈದ್ಯಾಧಿಕಾರಿ ಡಾ.ಭಾರತಿ ಕೋಣಿ ಅವರು ಮಾತನಾಡಿ 'ಹಸಿದವರಿಗೆ ಅನ್ನ ನೀಡುವುದು ಪುಣ್ಯದಕಾರ್ಯವಾಗಿದೆ. ಲಯನ್ಸ್ ಕ್ಲಬ್‌ವು ರೋಗಿಗಳಿಗೆ ಅನ್ನದಾಸೋಹಕಾರ್ಯವು ಶ್ಲಾಘನೀಯ ಕೆಲಸ ಮಾಡುತ್ತಲಿದೆ' ಎಂದು ಹೇಳಿದರು.

ಪಟ್ಟಣದ ಬಸವರಾಜ ಮತ್ತು ಕಿರಣ ಕುದರಿ ಸಹೋದರರು ತಮ್ಮ ತಂದೆ ಗೂಳಪ್ಪ, ತಾಯಿ ಶಾಂತವ್ವ ಅವರ ಪುಣ್ಯಸ್ಮರಣೆ ನಿಮಿತ್ತವಾಗಿ ಅನ್ನ ದಾಸೋಹವನ್ನು ಮಾಡಿದ್ದರು. ಹಿರಿಯಜ್ಜಿ ಈರವ್ವ ಬಸಪ್ಪ ಕುದರಿ ದಾಸೋಹಕ್ಕೆ ಚಾಲನೆ ನೀಡಿದರು. ಲಯನ್ಸ್ ಕ್ಲಬ್ ಮೂಡಲಗಿ ಪರಿವಾರದ ಸಹಯೋಗದಲ್ಲಿ ಸ್ಥಳೀಯ ಸಮುದಾಯ ಆರೋಗ್ಯ ಕೇಂದ್ರದ ಒಳ ಮತ್ತು ಹೊರ ರೋಗಿಗಳಿಗೆ ಅನ್ನದಾಸೋಹವನ್ನು ಏರ್ಪಡಿಸಿದ್ದರು.ಲಯನ್ಸ್‌ಕ್ಲಬ್‌ಅಧ್ಯಕ್ಷ ಸಂಜಯ ಮೋಕಾಶಿ ಪ್ರಾಸ್ತಾವಿಕ ಮಾತನಾಡಿದರು.ಲಯನ್ಸ್‌ಕ್ಲಬ್ ಸದಸ್ಯರು ಭಾಗವಹಿಸಿದ್ದರು.350ಕ್ಕೂ ಅಧಿಕ ಸಂಖ್ಯೆಯಲ್ಲಿಅನ್ನದಾಸೋಹದಲ್ಲಿ ಭಾಗವಹಿಸಿದ್ದರು.

# ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುತ್ತಿದೆ : ರೇಣುಕಾ ತಿಳುವಳ್ಳಿ



ಹಳ್ಳೂರ 18.ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಶಾಲಾ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇದ್ದರೆ ಅತಿಥಿ ಶಿಕ್ಷಕರನ್ನು ನೇಮಿಸಿ ತಿಂಗಳ ಸಂಬಳ ನೀಡಿ ಶಿಕ್ಷಣ ಕಲಿಸಲು ಸಹಕಾರವನ್ನು ನೀಡುವ ಏಕೈಕ ಸಂಸ್ಥೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ. ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುತ್ತಿದೆ ಎಂದು ವಲಯ ಮೇಲ್ವಿಚಾರಕಿ ರೇಣುಕಾ ತಿಳುವಳ್ಳಿ ಹೇಳಿದರು.

ಅವರು ಶಿವಾಪೂರ (ಹ) ಗ್ರಾಮದ ಸರಕಾರಿ ಪ್ರೌಢ ಶಾಲೆಯಲ್ಲಿ ನಡೆದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಹಯೋಗದೊಂದಿಗೆ ಹತ್ತನೇ ತರಗತಿ ಮಕ್ಕಳ ಆಂಗ್ಲ ಭಾಷೆಯ ಟ್ಯೂಷನ್ ಕ್ಲಾಸ್ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಬಗೆಯ ಸೌಲಭ್ಯಗಳು ಸಿಗುತ್ತವೆ ಸಂಘದ ಮಕ್ಕಳಿಗೆ ಸುಜ್ಞಾನ ನಿಧಿ, ಶಾಲೆ ಆವರಣ ಗೋಡೆ ನಿರ್ಮಾಣ, ಸೌಚಾಲಯ, ಡೆಸ್ಕ, ಬೋರ್ಡು ವಿವಿಧ ಬಗೆಯ ಸೌಲಭ್ಯಗಳು ಸಿಗುತ್ತವೆ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು. ಪ್ರಭಾರಿ ಮುಖ್ಯೋಪಾಧ್ಯಾಯರಾದ ಎಸ್ ಸಿ ಅರಗಿ ಮಾತನಾಡಿ ನಮ್ಮ ಶಾಲೆಗೆ ಹತ್ತನೇ ತರಗತಿಯ ಮಕ್ಕಳಿಗೆ ಆಂಗ್ಲ ಭಾಷೆಯ ಶಿಕ್ಷಕರ ಕೊರತೆಯಿತ್ತು ಅವಶ್ಯಕವಾದ ಸಂದರ್ಭದಲ್ಲಿ ನಮ್ಮ ಶಾಲೆಗೆ ಶಿಕ್ಷಕರನ್ನು ನೇಮಿಸಿ ಪ್ರತಿ ತಿಂಗಳು ಸಂಬಳ ನೀಡಿ ಸಹಾಯ ಮಾಡಿದ್ದಕ್ಕೆ ನಿಜಕ್ಕೂ ಧರ್ಮಸ್ಥಳದ ಮಂಜುನಾಥ ದೇವರ ಹಾಗೂ ವೀರೇಂದ್ರ ಹೆಗಡೆಯವರ ಆಶೀರ್ವಾದ ಸದಾ ಕಾಲ ಶಾಲೆಯ ಮೇಲಿರಲಿ ಎಂದು ಹೇಳಿದರು. ಸಾಮಾಜಿಕ ಕಾರ್ಯಕರ್ತ ಹಾಗೂ ಪತ್ರಕರ್ತ ಮುರಿಗೆಪ್ಪ ಮಾಲಗಾರ ಮಾತನಾಡಿ ಶಿಕ್ಷಣಕ್ಕೆ ಒತ್ತು ಕೊಟ್ಟು ಅನೇಕ ರೀತಿಯ ಸೌಲಭ್ಯಗಳನ್ನು ಒದಗಿಸಿ ಸಹಾಯ ಸಹಕಾರ ನೀಡುತ್ತಿರುವ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯ ಶ್ಲಾಘನೀಯ. ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಜ್ಞಾನದ ಜೊತೆಗೆ ಉತ್ತಮ ಸಂಸ್ಕಾರ ಪಡೆಯುವುದು ಬಹಳ ಮುಖ್ಯವಾಗಿದೆ ವಿದ್ಯಾರ್ಥಿಗಳು ಟ್ಯೂಷನ್ ಕ್ಲಾಸ್ ದ ಸದುಪಯೋಗ ಪಡೆದುಕೊಳ್ಳಬೇಕೆಂದು ಕಿವಿ ಮಾತು ಹೇಳಿದರು. ಈ ಸಮಯದಲ್ಲಿ ಒಕ್ಕೂಟ ಅಧ್ಯಕ್ಷೆ ಮಾದೇವಿ ಕುಂಬಾಳಿ. ಕೌಸರ್ ಹಣಗಂಡಿ. ಕಸ್ತೂರಿ ಸವದಿ. ಶಿಕ್ಷಕರಾದ ಕೆ ಎಚ್ ಪಾಟೀಲ. ಎಸ್ ಆರ್ ಕೊಂಗಾಲಿ. ಎಸ್ ಎಂ ಪಾಟೀಲ. ಎಲ್ ಎಸ್ ಪಾಟೀಲ.ಎಚ್ ಬಿ ಸುಳ್ಳನ್ನವರ. ಸಿ ಬಿ ನರಸನ್ನವರ. ಜೆ ಪಿ ತಳವಾರ.ಸಂತೋಷ ಕಾಂಬಳೆ.ಸೇರಿದಂತೆ ವಿದ್ಯಾರ್ಥಿಗಳಿದ್ದು ಕಾರ್ಯಕ್ರಮವನ್ನು ಲಕ್ಷ್ಮೀ ಗೊರಗುದ್ದಿ ಸ್ವಾಗತಿಸಿ. ಪ್ರಭಾವತಿ ಢವಳೇಶ್ವರ ನಿರೂಪಿಸಿ ವಂದಿಸಿದರು.

# 11ನೇ ವರ್ಷದ ಶ್ರೀ ಅಯ್ಯಪ್ಪ ಸ್ವಾಮಿ ಮಹಾಪೂಜೆ- ಮಹಾ ಅನ್ನಸಂತರ್ಪಣೆ



ಯರಗಟ್ಟಿ: ಪಟ್ಟಣದ ಅಯ್ಯಪ್ಪ ಸ್ವಾಮಿ ಸೇವಾ ಸಮಿತಿಯ 11ನೇ ವರ್ಷದ ಶ್ರೀ ಅಯ್ಯಪ್ಪ ಸ್ವಾಮಿ ಮಹಾಪೂಜೆ, ಮಹಾ ಅನ್ನಸಂತರ್ಪಣೆ ಹಾಗೂ ಅಯ್ಯಪ್ಪ ಮಾಲಾಧಾರಿಗಳಿಂದ ಜರುಗಿತು.
ಶ್ರೀ ಅಯ್ಯಪ್ಪ ಸ್ವಾಮಿ ಪೂಜೆ, ಪಡಿ ಪೂಜೆ, ಮಹಾ ಅನ್ನಸಂತರ್ಪಣೆ ನೆರವೇರಿಸಲಾಯಿತು.

ಬಳಿಕ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜ್ಯೋತಿ ಯಾತ್ರೆಗೆ ಬಸವೇಶ್ವರ ದೇವಸ್ಥಾನದಿಂದ ದೀಪಾಲಂಕೃತ ಮೆರವಣಿಗೆ ಜರುಗಿತು.
ಸರಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಅಯ್ಯಪ್ಪ ಸ್ವಾಮಿಯ ಭಕ್ತರ ಸಮ್ಮುಖದಲ್ಲಿ ಅಮಿನ್ನಭಾವಿ ನಾರಾಯಣ ಗುರುಸ್ವಾಮಿ ಅವರ ನೇತೃತ್ವದಲ್ಲಿ ಹಾಗೂ ಅಯ್ಯಪ್ಪ ಮಾಲಾಧಾರಿಗಳಿಂದ ಮಹಾ ಪೂಜೆ ಜರುಗಿತು.

ಈ ವೇಳೆ 18ನೇ ವರ್ಷದ ಮಾಲಾಧಾರಿಗಳಿಗೆ ಗುರುವಂದನಾ ಮತ್ತು ಸನ್ಮಾನ ಜರುಗಿತು.

ಈ ವೇಳೆ ಕೆ.ಚದರಗಿ ಬಸವರಾಜ ಗುರುಸ್ವಾಮಿ, ಅಶೋಕ ಗುರುಸ್ವಾಮಿ, ಸುರೇಶ ಗುರುಸ್ವಾಮಿ, ವಿಕ್ರಮ ಗುರುಸ್ವಾಮಿ, ವಿಜಯ ಗುರುಸ್ವಾಮಿ, ಬಂಗಾರೆಪ್ಪ ಗುರುಸ್ವಾಮಿ, ಈರಣ್ಣಾ ಗುರುಸ್ವಾಮಿ, ಮಾಲಾಧಾರಿಗಳಾದ ಮಂಜುನಾಥ ಬಿಡ್ಲಿ, ಯಲ್ಲಪ್ಪ ದಾನ್ನನವರ, ಈರಣ್ಣಾ ಜಾಡಿ, ಉದ್ದಪ್ಪ ಹಾರುಗೊಪ್ಪ, ರುದ್ರಪ್ಪ ಮಾದರ, ಮಹೇಶ ಕಡಕೋಳ, ಗದಿಗೆಪ್ಪ ಗಲಬಿ, ರಾಜು ವಾಲಿ, ಪುಟ್ಟು ಪುಜೇರ ಸೇರಿದಂತೆ ಸುತ್ತಲಿನ ಗ್ರಾಮಗಳ ಗುರುಸ್ವಾಮಿಗಳು, ಮಾಲಾ ದಾರಿಗಳು ಇದ್ದರು.

# ಪರಿಸರಕ್ಕೆ ಹೊಂದಿಕೊಳ್ಳುವ ವಸ್ತುಗಳನ್ನು ಉತ್ಪಾದಿಸುವ ಅಗತ್ಯ ಇದೆ. ಸತೀಶ ಜಾರಕಿಹೊಳಿ




ಬೆಳಗಾವಿ : ಜಾಗತಿಕ ಮಟ್ಟದಲ್ಲಿ ಬೇಡಿಕೆಗೆ ತಕ್ಕಂತೆ ಸುಸ್ಥಿರ, ಬಾಳಿಕೆ ಬರುವ ಮತ್ತು ಪರಿಸರಕ್ಕೆ ಹೊಂದಿಕೊಳ್ಳುವ ವಸ್ತುಗಳನ್ನು ಉತ್ಪನ್ನ ಮಾಡುವ ಅಗತ್ಯವಿದೆ ಎಂದು ಲೋಕೋಪಯೋಗಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅಭಿಪ್ರಾಯಪಟ್ಟರು.

ಇಲ್ಲಿನ ಖಾಸಗಿ ಹೊಟೇಲ್ ನಲ್ಲಿ ಗುರುವಾರ ಲೋಕೋಪಯೋಗಿ ಇಲಾಖೆ ಮತ್ತು ಇನ್‌ಸ್ಟಿಟ್ಯೂಷನ್ ಆಫ್ ಎಂಜಿನಿಯರ್ಸ್ (ಭಾರತ) ಲೋಕಲ್ ಸೆಂಟರ್ ಸಹಯೋಗದೊಂದಿಗೆ ಅಂತಾರಾಷ್ಟ್ರೀಯ ಸ್ಟೇನ್‌ಲೆಸ್ ಸ್ಟೀಲ್ ಅಭಿವೃದ್ಧಿ ಸಂಘ (ISSDA) ಆಯೋಜಿಸಿದ ಒಂದು ದಿನದ ಅಂತಾರಾಷ್ಟ್ರೀಯ ಜ್ಞಾನ ಹಂಚಿಕೆ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು,

ರಾಷ್ಟ್ರದ ಅಭಿವೃದ್ಧಿಗಾಗಿ ಬಲಿಷ್ಠ ಯೋಜನೆಗಳನ್ನು ರೂಪಿಸುವ ಅಗತ್ಯವಿದ್ದು ಇದಕ್ಕಾಗಿ ಗುಣಮಟ್ಟದ ಉತ್ಪನ್ನಗಳನ್ನು ಬಳಸಿಕೊಳ್ಳುವ ಅಗತ್ಯವಿದೆ. ಈ ದಿಶೆಯಲ್ಲಿ ಪರಿಸರ ಸ್ನೇಹಿ ಎನಿಸಿರುವ ಸ್ಟೇನ್‌ಲೆಸ್ ಸ್ಟೀಲ್ ಉಪಯುಕ್ತ ಉತ್ಪನ್ನವಾಗಿದೆ. ಆಧುನಿಕತೆಗೆ ತಕ್ಕಂತೆ ಮತ್ತು ಸರ್ಕಾರಿ ಯೋಜನೆಗಳಿಗೆ ಈ ಉತ್ಪನ್ನವನ್ನು ಬಳಸಿಕೊಳ್ಳಲು ಪರಿಶಿಲಿಸಲಾಗುವುದು ಎಂದು ಅವರು ಹೇಳಿದರು.

ಗಗನಚುಂಬಿ ಕಟ್ಟಡಗಳಿಂದ ಹಿಡಿದು ಸೊಗಸಾದ ಕಾರುಗಳವರೆಗೆ, ಕಟ್ಟಡ, ಸಾರಿಗೆ, ಆರೋಗ್ಯ ಮತ್ತು ಗ್ರಾಹಕ ವಸ್ತುಗಳ ವಲಯಗಳಿಗೆ ಈ ಉತ್ಪನ್ನ ಅನುಕೂಲವಾಗಿದೆ. ಅಂದಾಜು 50 ವರ್ಷಗಳ ಕಾಲ ಬಾಳಿಕೆ ಬರಲಿದೆ. ಈ ಮಾನ್ಯತೆ ಸ್ಟಿಲ್ ಬಳಕೆಯಿಂದ ಬಹುವರ್ಷ ಬಾಳಿಕೆ ಬರುವ ಸೇತುವೆ, ನೀರಾವರಿ ಯೋಜನೆ, ಜಲಾಶಯಗಳಿಗೆ ಉಪಯುಕ್ತವಾಗಿದೆ ಎಂದು ಅವರು ಹೇಳಿದರು. ಬಳಿಕ, ವಿವಿಧ ಕಂಪನಿಗಳ ಉತ್ಪನ್ನವನ್ನು ಸಚಿವರು ವೀಕ್ಷಿಸಿ ಮಾಹಿತಿ ಪಡೆದರು

ಈ ವೇಳೆ ಸ್ಟೇನ್‌ಲೆಸ್ ಅಂತರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತಿಮ್ಮ ಕೊಲೀನಸ್ , ಡಾ. ಗ್ರಹಮ ಸಸೇಕ್ಸ್ ಅವರು ವಿಡಿಯೋ ಕಾನ್ಫರೇನ್ ಮೂಲಕ ಮಾತನಾಡಿದರು.

ಈ ಸಂದರ್ಭದಲ್ಲಿ ಲೋಕೊಪಯೋಗಿ ಪ್ರಧಾನ ಕಾರ್ಯದರ್ಶಿ ಡಾ.ಎಸ್ ಸೆಲ್ವಕುಮಾರ್ , ಸಚಿವರ ವಿಶೇಷ ಕರ್ತವ್ಯ ಅಧಿಕಾರಿ ವಿ.ಎನ್. ಪಾಟೀಲ, ಪಿ.ಕೆ ಸರ್ಕಾರ, ರಾಜು ಗರಗ, ದೇವೆಂದ್ರ ದೇವಗನ, ಕೃಷ್ಣಮೂರ್ತಿ ಕುಲಕರ್ಣಿ, ಅಮಿತಕುಮಾರ ತ್ಯಾಗಿ, ಡಾ. ಸರ್ವನನ್, ಎಸ್ .ವಾಯ್.,ಕುಂದರಗಿ, ಸಚಿವರ ಆಪ್ತ ಸಹಾಯಕ ಮಲಗೌಡ ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

ಐಎಸ್ ಎಸ್ ಡಿಎ ಅಧ್ಯಕ್ಷ ರಾಜಮನಿ ಕೃಷ್ಣಮೂರ್ತಿ ಸ್ವಾಗತಿದರು. ಕಾರ್ಯನಿವಾರ್ಹಕ ನಿರ್ದೇಶಕ ರೋಹಿತ ಕುಮಾರ ವಂದಿಸಿದರು.

## ಕರ್ನಾಟಕ ಧನವಿನಿಯೋಗ ವಿಧೇಯಕ ಪರಿಷತ್ ನಲ್ಲಿ ಅಂಗೀಕಾರ

ಬೆಳಗಾವಿ ಸುವರ್ಣಸೌಧ ಡಿ.18. : ವಿಧಾನಸಭೆಯಿಂದ ಅಂಗಿಕೃತ ರೂಪದಲ್ಲಿರುವ ಕರ್ನಾಟಕ ಧನ ವಿನಿಯೋಗ(ಸಂಖ್ಯೆ –5) ವಿಧೇಯಕ 2024 ಡಿ.18 ರಂದು ವಿಧಾನ ಪರಿಷತ್ತಿನಲ್ಲಿ ಅಂಗೀಕೃತವಾಯಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧೇಯಕವನ್ನು ಅಂಗೀಕರಿಸುವಂತೆ ಕೋರಿದರು. ಧ್ವನಿಮತದ ಮೂಲಕ ವಿಧೇಯಕವನ್ನು ಅಂಗೀಕರಿಸಲಾಯಿತು.

## ರಾಜ್ಯದಲ್ಲಿ ಅನಧಿಕೃತವಾಗಿ ವಾಸವಿದ್ದ 24 ಪಾಕ್ ಮತ್ತು 159 ಬಾಂಗ್ಲಾದೇಶ ಮೂಲದವರ ಬಂಧನ : ಗೃಹ ಸಚಿವ ಪರಮೇಶ್ವರ್

ಬೆಳಗಾವಿ ಸುವರ್ಣಸೌಧ, ಡಿ.19 : ಇತ್ತೀಚಿನ ದಿನಗಳಲ್ಲಿ ಬೆಂಗಳೂರು ನಗರ ಮತ್ತು ರಾಜ್ಯದಲ್ಲಿ ಅನಧಿಕೃತವಾಗಿ ವಾಸವಿದ್ದ 24 ಪಾಕ್ ಮತ್ತು 159 ಬಾಂಗ್ಲಾದೇಶ ಮೂಲದವರನ್ನು ಬಂಧಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.
ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಡಿ. ಎಸ್. ಅರುಣ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ರಾಜ್ಯಕ್ಕೆ ಪದೇ ಪದೇ ಅನಧಿಕೃತವಾಗಿ ಪ್ರವೇಶಿಸುವ ಇಂತಹ ಪ್ರಕರಣಗಳ ಬಗ್ಗೆ ನಿಗಾವಹಿಸಲು ಬೆಂಗಳೂರು ನಗರದಲ್ಲಿ ನಗರ ವಿಶೇಷ ಘಟಕವಿದ್ದು, ನಗರಕ್ಕೆ ಪ್ರವೇಶಿಸುವ ಯಾವುದೇ ವಿದೇಶಿಯರ ಬಗ್ಗೆ ಪೊಲೀಸ್ ಠಾಣೆಗಳ ಮೂಲಕ, ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ (ಎಫ್. ಆರ್. ಆರ್. ಓ) ಬೆಂಗಳೂರು ರವರಿಂದ ಮಾಹಿತಿಯನ್ನು ಪಡೆದು, ಪ್ರತಿ ವಿಭಾಗೀಯ ಡಿಸಿಪಿಗಳ ಮುಖಾಂತರ ವಿಶೇಷ ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. ಅಲ್ಲದೆ, ಸಿ.ಸಿ.ಬಿಯ ಸಂಘಟಿತ ಅಪರಾಧ ದಳ ಕೂಡ ಕಾರ್ಯಾಚರಣೆ ನಡೆಸುತ್ತಿದೆ. ಇತರೆ ನಗರ /ಜಿಲ್ಲೆಗಳಲ್ಲಿ ಅನಧಿಕೃತವಾಗಿ ಪ್ರವೇಶಿಸುವ ವಿದೇಶಿಯರುಗಳ ಪತ್ತೆಯ ಬಗ್ಗೆ ಖಿಂಜ-ಛಿಟಿ ಖಿಛಿಇ ಜಿಂಡಿಛಿಜ ರಚಿಸಿದ್ದು, ಅದು ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

## ಅಬಕಾರಿ ಇಲಾಖೆ ವರ್ಗಾವಣೆಯಲ್ಲಿ ಭ್ರಷ್ಟಾಚಾರ ನಡೆದಿಲ್ಲ : ಸಚಿವ ತಿಮ್ಮಾಪುರ

ಬೆಳಗಾವಿ ಸುವರ್ಣಸೌಧ, ಅಬಕಾರಿ ಇಲಾಖೆಯ ವರ್ಗಾವಣೆಯಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ಎಂದು ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ಸ್ಪಷ್ಟಪಡಿಸಿದರು.
ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಕೆ. ಎಸ್. ನವೀನ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.
ಅಬಕಾರಿ ಇಲಾಖೆಯಲ್ಲಿ ಡಿಸೆಂಬರ್ 2023 ರಿಂದ ನವೆಂಬರ್ 2024 ರ ವರೆಗೆ ಗ್ರೂಪ್ ಎ, ಬಿ ಮತ್ತು ಸಿ ವೃಂದದಲ್ಲಿ 336 ವರ್ಗಾವಣೆಯಾಗಿದ್ದು ಇದರಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ ಎಂದು ಸಚಿವರು ತಿಳಿಸಿದರು.

ಪ್ರಸಕ್ತ ಆರ್ಥಿಕ ಸಾಲಿನ ಸೆಪ್ಟೆಂಬರ್, ಅಕ್ಟೋಬರ್ ಮತ್ತು ನವೆಂಬರ್ ಮಾಹೆಗಳಲ್ಲಿ ಜಟು ೩ಡಿಜಟುಣಟ ಮತ್ತು ೩ಡಿಜಟುಣಟ ಮದ್ಯದ ಸ್ಲಾಬ್‌ಗಳ ಮದ್ಯ ಮಾರಾಟದ ಪಾಲು ಶೇ.21.03 ರಷ್ಟಾಗಿರುತ್ತದೆ. ಅಂದರೆ, ಜಟು ೩ಡಿಜಟುಣಟ ಮತ್ತು ೩ಡಿಜಟುಣಟ ಮದ್ಯದ ಬ್ರಾಂಡ್‌ಗಳ ಮಾರಾಟದಲ್ಲಿ ಶೇ. 6.85 ರಷ್ಟು ಹೆಚ್ಚಳವಾಗಿರುತ್ತದೆ. ಹಾಗಾಗಿ, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಜಟು ೩ಡಿಜಟುಣಟ ಮತ್ತು ೩ಡಿಜಟುಣಟ ಬ್ರಾಂಡ್‌ಗಳ ಬಳಕೆ ಹೆಚ್ಚಾಗುವ ಮೂಲಕ ಮಾರಾಟ ಹೆಚ್ಚಳದಿಂದ ರಾಜಸ್ವ ಸಂಗ್ರಹಣೆಯಲ್ಲಿ ಧನಾತ್ಮಕ ಬೆಳವಣಿಗೆ ಕಂಡು ಅಂದಾಜಿಸಲಾಗಿದೆ ಎಂದರು.

## ಮನುವಾದಿ ಮನಸ್ಥಿತಿಯ ಅಮಿತ ಶಾರನ್ನ ಸಂಪುಟದಿಂದ ವಜಾಗೊಳಿಸಿ:ದಸಂಸ ಜಿಲ್ಲಾ ಸಂಚಾಲಕ ಸಂಜಯ ತಳವಲ್ಕರ ಒತ್ತಾಯ



ಮೋಳೆ:ಡಾ.ಬಿ.ಆರ್.ಅಂಬೇಡ್ಕರ್ ಬಗ್ಗೆ ವಿವಾದಾತ್ಮಕವಾಗಿ ಹೇಳಿಕೆ ನೀಡಿರುವ ಕೇಂದ್ರ ಗೃಹ ಮಂತ್ರಿ ಅಮಿತ ಶಾರನ್ನ ಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಕೆಂದು ದಲಿಸ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸಂಜಯ ತಳವಲ್ಕರ ಒತ್ತಾಯಿಸಿದರು.

ಅವರು ಗುರುವಾರ ದಿ.19 ರಂದು ಕಾಗವಾಡ ಪಟ್ಟಣದ ಚನ್ನಮ್ಮ ವೃತ್ತದಲ್ಲಿ ಪ್ರತಿಭಟಿಸಿ ಮಾತನಾಡುತ್ತಿದ್ದರು. ಅವರು ಮುಂದೆ ಮಾತನಾಡುತ್ತಾ,ದೇಶವನ್ನು ಸಂವಿಧಾನದಡಿ ಆಳುವವವರೇ ಈ ಸಂವಿಧಾನಕ್ಕೆ ತಿರುಗಿ ಬೀಳುವ ಕೆಲಸ ಮಾಡುತ್ತಿದ್ದಾರೆ,ಡಾ.ಬಾಬಾಸಾಹೇಬರ ವಿಚಾರಧಾರೆಗೆ ಕೊಡಲಿ ಪೆಟ್ಟು ಕೊಟ್ಟು ದೇಶಕ್ಕೆ ಮನುಸ್ಮೃತಿ ಜಾರಿಗೆ ತರುವ ಉದ್ದೇಶ ಹೊಂದಿದ್ದಾರೆ .ಆ ಮನಸ್ಥಿತಿಯನ್ನು ಹೊಂದಿರುವ ಅಮಿತ ಶಾ ಅವರ ಬಾಯಿಂದ ಈ ರೀತಿಯ ಪದಗಳು ಬಂದಿವೆ.ದೇವರ ಹೆಸರು ಹೇಳಿದರೆ ಸ್ವರ್ಗ ಸಿಗುತ್ತದೆ ಎನ್ನುವ ಶಬ್ದವೇ ನಮ್ಮ ಸಂವಿಧಾನದಲ್ಲಿಲ್ಲ ಆ ಶಬ್ದಗಳು ಮನುಸ್ಮೃತಿಯಲ್ಲಿವೆ.ಆ ಮನುಸ್ಮೃತಿಯ ವಿಚಾರಧಾರೆಯನ್ನು ನಮ್ಮೆಲ್ಲರ ಮೇಲೆ ಹೇರಲು ಹೊರಟು ದೇಶದಲ್ಲಿ ಅಶಾಂತಿ ಮಾಡುವ ಹುನ್ನಾರ ಮಾಡುತ್ತಿದ್ದಾರೆ.

ಶಾಂತಿ ಕಾಪಾಡಿಕೊಳ್ಳಬೇಕಾದ ವ್ಯಕ್ತಿ ಶಾಂತಿ ಭಂಗ ಮಾಡುತ್ತಿದ್ದಾನೆ ಆದ್ದರಿಂದ ಕೇಂದ್ರದಲ್ಲಿ ಎಲ್ಲ ಪಕ್ಷದವರೂ ಕೆಳಮನೆ ಮತ್ತು ಮೇಲ್ಮನೆ ಸದಸ್ಯರೂ ಒಳಗೊಂಡಂತೆ ಮೋದಿ ಮತ್ತು ಅಮಿತ ಶಾ ಅವರಿಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.ಹೀಗಾಗಿ ಕೇಂದ್ರ ಗೃಹ ಮಂತ್ರಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವದು ಸೂಕ್ತ.ತಕ್ಷಣ ರಾಷ್ಟ್ರಪತಿಯವರು ಅಮಿತ ಶಾ ಅವರ ರಾಜೀನಾಮೆಯನ್ನು ಪಡೆದುಕೊಳ್ಳಬೇಕೆಂದು ದಲಿತ ಸಂಘರ್ಷ ಸಮಿತಿ ವತಿಯಿಂದ ಒತ್ತಾಯಿಸುತ್ತೇವೆ ಎಂದರು.

ಇದೆ ಸಂದರ್ಭದಲ್ಲಿ ಜಯಪಾಲ ಬಡಿಗೇರ,ವಿಧ್ಯಾಧರ ದೊಂಡಾರೆ, ವಿಧ್ಯಾಧರ ಮೌರ್ಯ,ಅಮಿತ ದಿಕ್ಷಾಂತ, ಮಾತನಾಡಿದರು.

ನಂತರ ಉಪತಹಶಿಲ್ದಾರ ವಿಜಯಕುಮಾರ ಚೌಗಲಾ ಇವರಿಗೆ ತಹಶಿಲ್ದಾರ ಮೂಲಕ ರಾಷ್ಟ್ರಪತಿಯವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ದಂಸಸ ತಾಲ್ಲೂಕಾ ಅಧ್ಯಕ್ಷ ಸಚಿನ್ ಪೂಜಾರಿ,ಮಂಗಸೂಳಿ ಗ್ರಾಪಂ ಅಧ್ಯಕ್ಷ ಬಾಳು ಭಜಂತ್ರಿ,ವಿಜಯ ಅಸೋದೆ,ಅಮರ ಪಾಟೀಲ್,ರಾಜು ಭಜಂತ್ರಿ, ಪ್ರಕಾಶ ದೊಂಡಾರೆ,ಬಾಳಾಸಾಬ ಕಾಂಬಳೆ,ಅವಿನಾಶ ದೇವಣೆ,ಮಹಾಂತೇಶ ಬಡಿಗೇರ,ರವಿ ಕುರಣಿ,ಯಲ್ಲಪ್ಪ ನಾವಿ,ಪ್ರಿಯಾ ಕಾಂಬಳೆ,ಮಂಜುನಾಥ ಹೊನಕಾಂಬಳೆ,ಯಲ್ಲಪ್ಪ ಕಾಂಬಳೆ ಸೇರಿದಂತೆ ಅನೇಕರು ಇದ್ದರು.

# ಶ್ರೀ, ಸಿದ್ದೇಶ್ವರ ಸ್ವಾಮೀಜಿಯವರ ಗುರು ನಮನ ಕಾರ್ಯಕ್ರಮ



ಇಂಡಿ : ಸಮೀಪದ ಸುಕ್ಷೇತ್ರ ಬಳ್ಳೊಳ್ಳಿ ಗ್ರಾಮದಲ್ಲಿ ಮಂಗಳವಾರ ದಿವಸ ಶತಮಾನದ ಸಂತ, ನಡೆದಾಡುವ ದೇವರು ಪರಮಪೂಜ್ಯ ಶ್ರೀ, ಸಿದ್ದೇಶ್ವರ ಸ್ವಾಮೀಜಿಯವರ ಗುರು ನಮನ ಕಾರ್ಯಕ್ರಮ ಅದ್ದೂರಿಯಾಗಿ ಡಾ॥ ಶ್ರೀ, ಅಮೃತಾನಂದ ಸ್ವಾಮಿಜಿ ನೇತ್ರತ್ವದಲ್ಲಿ ನೇರವೇರಿಸಲಾಯಿತು.

ಮಾನವನಾಗಿ ಹುಟ್ಟಿದ ಮೇಲೆ ಸಾಂಪ್ರದಾಯಕತೆ, ಆಧ್ಯಾತ್ಮ ಚಿಂತನೆ, ಭಜನೆ, ಹಿರಿಯರಲ್ಲಿ ಗೌರವ, ನಾನು ಎನ್ನದೆ ನನ್ನದು, ನನ್ನೋರು ಎನ್ನುವವರೆ ನೀಜವಾದ ಮಾನವ, ತಲೆಬಾಗಿ ನಮಸ್ಕರಿಸುವವನು ಮನುಜ, ತಲೆ ಎತ್ತಿ ಮೇರೆಯುವವ ಮೂರ್ಖ, ಮೂರ್ಖನಿಗೆ ಒಂದೇ ದಾರಿ, ಆದರೆ ಜಾಣನಿಗೆ ನೂರೆಂಟು ದಾರಿ, ದಿನದ ಕೇವಲ ಒಂದು ಕಂಟೆಯಾದರು ದೇವರ ನಾಮ ಸ್ಮರಣೆ ಮಾಡಿದಾಗ ಮಾನವ ಶರಿರಕ್ಕೆ ಮುಕ್ತಿ, ಸಂತರು, ಸಾಧುಗಳು ಒಂದುಗುಡಿಸುವ ಯಂತ್ರಗಳಿದಂತೆ, ಆದ್ದರಿಂದ ಸಂತರ, ಸಾಧುಗಳ ಮಾರ್ಗ ದರ್ಶನ ಪ್ರತಿ ಮಾನವನಿಗು ಬಹುಮುಖ್ಯ, ಯಾವಗ್ರಾಮದಲ್ಲಿ ಧಾರ್ಮಿಕ ಚಿಂತನ ಕಾರ್ಯಕ್ರಮಗಳು ನಡೆಯುತ್ತವೆ ಅಂತಹ ಗ್ರಾಮದಲ್ಲಿ ಸದಾ ಸುಖ, ಶಾಂತಿ ನೆಲೆಸಿರುತ್ತದೆ ಎಂದು ಡಾ॥ ಶ್ರೀ, ಅಮೃತಾನಂದ ಸ್ವಾಮಿಜಿ ಆಶಿರ್ವಚನ ನೀಡಿದರು.

ಸಾಯಂಕಾಲ 4 ಗಂಟೆಗೆ ಜೈ ಭವಾನಿ ದೇವಸ್ಥಾನದಿಂದ ಗ್ರಾಮದ ಪ್ರಮುಖ ಬೀದಿಗಳಲ್ಲಿ ವೃಂದ, ವಾದ್ಯಗಳೊಂದಿಗೆ, ಡೊಳ್ಳು ಕುಣಿತ, ಗ್ರಾಮದ ಮುತ್ತೈದೆಯರಿಂದ ಆರತಿಗಳೊಂದಿಗೆ, ಶ್ರೀಗಳ ಭಾವಚಿತ್ರದ ಭವ್ಯ ಮೇರವಣಿಗೆ ಮಾಡುತ್ತಾ ಗ್ರಾಮ ದೇವತೆ ಶ್ರೀ,ವೀರಭದ್ರೆಶ್ವರ ದೇವಸ್ಥಾನಕ್ಕೆ ಆಗಮ, ನಂತರ ಸರಕಾರಿ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲಾ ಆವರಣದಲ್ಲಿ, ಅಪ್ಪಾಜಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ,, ಮಂಗಳಾರುತಿ, ನಂತರ ಮಹಾ ಪ್ರಸಾದೊಂದಿಗೆ ಕಾರ್ಯಕ್ರಮ ಮುಕ್ತಾಯ ಗೋಳಿಸಲಾಯಿತು.

ಈ ಸಂದರ್ಬದಲ್ಲಿ ಸಾನಿಧ್ಯ ಸಿದ್ದೇಶ್ವರ ಮಹಾಸ್ವಾಮಿಗಳು, ಕಾತ್ರಾಳ ಆಶ್ರಮ ಅಮೋಘಸಿದ್ದ ಮಾಹಾಸ್ವಾಮಿಜಿ, ಮಾಜಿ ಸಚಿವರಾದ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಗ್ರಾಮದ ಹೀರಿಯರಾದ ಮಲ್ಲನಗೌಡ ಪಾಟೀಲ, ಶ್ರೀಶೈಲ ವಾಲಿ, ಸಿದ್ದಾರಾಮ ವಾಲಿ, ಅಶೋಕ ತೋಟದಾರ, ಅನೀಲಗೌಡ ಪಾಟೀಲ, ಈರಣ್ಣ ವಾಲಿ, ಭರತ ತೋಟದಾರ, ನ್ಯಾನೇಶ್ವರ ಪವಾರ, ಮೌಲಾಲಿ ನದಾಫ, ಬಸವರಾಜ ಸಗಾಯಿ, ಹಜರತ ಮುಲ್ಲಾ, ಮಹಾದೇವ ಕದರಿ, ಶರಣಯ್ಯ ಮಠಪತಿ, ಅಣ್ಣಪ್ಪ ಯರನಾಳ, ರಾಘವೇಂದ್ರ ಬಡಿಗೇರ, ಮಲ್ಲಿಕಾರ್ಜುನ ನಾಯ್ಕೋಡಿ, ರಾಜು ನಾಯ್ಕೋಡಿ, ರೇವಣಸಿದ್ದ ಶಿರಶ್ಯಾ, ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳು, ಗ್ರಾಮದ ಯುವಕರು, ತಾಯಂದಿರು ಹಾಗೂ ಎಲ್ಲ ಸಮಾಜದ ಬಾಂಧವರು ಉಪಸ್ಥಿತರಿದ್ದರು.

## ಬೆಳಗಾವಿ ಜಿಲ್ಲೆ ವಿಭಜಿಸಿದರೆ ಪ್ರಥಮವಾಗಿ ಬೈಲಹೊಂಗಲ ಜಿಲ್ಲೆ ಮಾಡಲು ಸಿ ಎಮ್ ಗೆ ಮನವಿ



ಬೆಳಗಾವಿ. ಜಿಲ್ಲೆಯನ್ನು ವಿಭಜಿಸಿ ಹೊಸ ಜಿಲ್ಲೆ ರಚನೆ ಮಾಡುವದಾದರೆ ಬೈಲಹೊಂಗಲ ಉಪವಿಭಾಗವನ್ನು ಜಿಲ್ಲೆಯನ್ನಾಗಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬೈಲಹೊಂಗಲ ಜಿಲ್ಲಾ ಹೊರಾಟ ಸಮಿತಿ ಅಧ್ಯಕ್ಷ ಶಿವರಂಜನ ಬೋಳಣ್ಣವರ, ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಮಹಾಂತೇಶ ತುರಮರಿ, ರಾಜು ಜನ್ಮಟ್ಟಿ, ಎಫ್. ಎಸ್.ಸಿದ್ದನಗೌಡರ, ಸಿ.ಕೆ.ಮೆಕ್ಕೆದ, ಮಡಿವಾಳಪ್ಪ ಹೋಟಿ, ಗುರು ಮೆಟಗುಡ್, ಮಹಾಂತೇಶ ಮತ್ತಿಕೊಪ್ಪ, ಮಹೇಶ ಬೆಲ್ಲದ, ವಿ.ಎಸ್. ಕೋ-ರಿಮಠ, ಬಿ.ಬಿ.ಗಣಾಚಾರಿ, ವಿಠಲ ದಾಸೋಗ, ಸುಭಾಷ ತುರಮರಿ ಸೇರಿದಂತೆ ಪದಾಧಿಕಾರಿಗಳು ಪಕ್ಷಾತೀತವಾಗಿ ಬೆಟಿ ಮಾಡಿ ಬೈಲಹೊಂಗಲ ಜಿಲ್ಲೆ ಮಾಡುವ ಸಕಾರಣಗಳ ಸಮೇತ ಸಮಗ್ರವಾಗಿ ತಯಾರಿಸಿದ ವರದಿಯನ್ನು ಮನವಿ ರೂಪದಲ್ಲಿ ನೀಡಲಾಯಿತು.

ಈ ಬಗ್ಗೆ ಮುಖ್ಯಮಂತ್ರಿಗಳು ಸಕಾರತ್ಮಕ್ಕವಾಗಿ ಸ್ಪಂದಿಸಿದ್ದಾರೆ.

## ಪ್ರತಿಯೊಬ್ಬರೂ ಪಡೆಯಲು ಪ್ರಾಥಮಿಕ ಹಂತದಿಂದಲೇ ಮಾತೃಭಾಷೆ ಜೊತೆ ಆಂಗ್ಲ ಭಾಷೆ ಕಲಿಯುವಂತೆ ಆಗಬೇಕು




ಮುಧೋಳ: ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸಾಧ್ಯವಾಗದ ಉನ್ನತ ಶಿಕ್ಷಣ ಪ್ರತಿಯೊಬ್ಬರೂ ಪಡೆಯಲು ಪ್ರಾಥಮಿಕ ಹಂತದಿಂದಲೇ ಮಾತೃಭಾಷೆ ಜೊತೆ ಆಂಗ್ಲ ಭಾಷೆ ಕಲಿಯುವಂತೆ ಆಗಬೇಕು. ಎಂದು ಜಮಖಂಡಿಯ ಉಪವಿಭಾಗಾಧಿಕಾರಿ ಶ್ವೇತಾ ಬಿಡೀಕರ ಹೇಳಿದರು.

ತಾಲೂಕಿನ ಶಿರೋಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳಿಂದ ಗಣಿತ ಲೆಕ್ಕ, ಇಂಗ್ಲೀಷ ಪದ್ಯಗಳನ್ನು ಓದಿಸಿದರು, ಮಕ್ಕಳ ಶೇ.ನೂರರ ಹಾಜರಾತಿ, ಅವರಲ್ಲಿರುವ ಶಿಸ್ತು, ಲವಲವಿಕೆ, ಪ್ರಶ್ನೆಗಳಿಗೆ ಉತ್ತರಿಸುವ ರೀತಿಯನ್ನು ಕಂಡು ಸಂತಸಪಟ್ಟು ಮು.ಗು. ಮಲ್ಲಿಕಾರ್ಜುನ್ ಅರಬ್ಬಿ ಅವರ ಕಾರ್ಯವನ್ನು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಅಡುಗೆ ಕೋಣೆ, ಶೌಚಾಲಯ ಹಾಗು ಶಾಲಾ ಕಂಪೌಂಡ ಮತ್ತು ಅಲ್ಲಿರುವ ಹೂದೋಟ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮುಧೋಳ ತಹಸೀಲ್ದಾರ ಮಹಾದೇವ ಸನಮುರಿ, ಮುಖ್ಯಶಿಕ್ಷಕ ಎಂ.ಎಂ. ಅರಬ್ಬಿ, ಸಿಬ್ಬಂದಿ ಜ್ಯೋತಿ ಶೇಡಬಾಳ, ಮಹಾದೇವಿ ಕುಳಲಿ, ಅತಿಥಿ ಶಿಕ್ಷಕ ಬಸವರಾಜ ಕಡಪಟ್ಟಿ ಇತರರಿದ್ದರು.

## ಕೃಷಿಕ ಸಮಾಜದ ಕಾರ್ಯಕಾರಿ ಸಮೀತಿಗೆ ಅವಿರೋಧ ಆಯ್ಕೆ



ಮುಧೋಳ: ತಾಲೂಕು ಕೃಷಿಕ ಸಮಾಜದ 2025-26 ರಿಂದ 2029-30ನೇ ಸಾಲುಗಳ (5) ವರ್ಷದ ಅವಧಿಗೆ ಕಾರ್ಯಕಾರಿ ಸಮಿತಿಯ 15 ಜನರ ಸದಸ್ಯರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮುಧೋಳ ತಾಲುಕು ಕೃಷಿಕ ಸಮಾಜ, ಸ.ಕೃ. ನಿರ್ದೇಶಕರು ಘೋಷಿಸಿದ್ದಾರೆ. ಕಾರ್ಯಕಾರಿ ಸಮೀತಿ ಸದಸ್ಯರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ವಿಠ್ಠಲ ದ್ಯಾ. ನಾಗನೂರ, ದುಂಡಪ್ಪ ವೆಂ. ಭರಮನಿ, ರಾಜೇಸಾಬ ದಾ. ಹುದ್ದಾರ, ಮೆಹಬೂಬ ಗ. ಮುಲ್ಲಾ, ಗೋಪಾಲ ಪಾಂ. ಅರಳಿಮಟ್ಟಿ, ಬಸವರಾಜ ದುಂ. ದೇಸಾಯಿ, ಶಿವಲಿಂಗಪ್ಪ ರಾ. ಹೊಸೂರ, ರವಿಕುಮಾರ ರು. ದೇಸಾಯಿ, ರಂಗಣ್ಣ ಕ. ನಾಯಿಕ, ದುಂಡಪ್ಪ ಗು. ಯರಗಟ್ಟಿ, ಬಸವರಾಜ ಈಶ್ವರ ಮಾನೆ, ಮಹಾಂತೇಶ ಗು. ಯರಗಟ್ಟಿ, ಭೀಮಪ್ಪ ಸಾ. ಹುನ್ನೂರ, ಶಶಿಕಲಾ ಬಸವಂತ ಮಾನೆ, ಲಕ್ಷ್ಮಣ ಶಿ. ಮಾದರ ಅವರನ್ನು ಕೃಷಿ ಇಲಾಖೆ ಕಚೇರಿಯಲ್ಲಿ ಘೋಷಣಾ ಪತ್ರವನ್ನು ಅಧಿಕಾರಿಗಳು ನೀಡಿದರು.

## ದಿ.೨೦ ರಿಂದ ಹಜಾರೆ ಹಬ್ಬದ ದಶಮಾನೊತ್ಸವ

ರಬಕವಿ-ಬನಹಟ್ಟಿ,ಡಿ18: ರಬಕವಿ ಹೊಸೂ-ರಿನ ಹಜಾರೆ ಪೌಂಡೇಶನ್ ಅಡಿಯ ಪದ್ಮಾವತಿ ಅಂತರಾಷ್ಟ್ರೀಯ ಶಿಕ್ಷಣ ಸಂಸ್ಥೆಯ 10ನೇ ಹಜಾರೆ ಹಬ್ಬ ಡಿ. 20 ರಿಂದ 21 ರವರೆಗೆ ಎರಡು ದಿನಗಳ ಕಾಲ ಅದ್ದೂರಿಯಾಗಿ ಜರುಗಲಿದೆ ಎಂದು ಸಂಸ್ಥೆಯ ಚೇರ್ಮನ್ ಸತೀಶ ಹಜಾರೆ ತಿಳಿಸಿದರು.

ಬುಧವಾರ ಸಂಸ್ಥೆಯ ಸಭಾಭವನದಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸ್ಥೆ 10ನೇ ವರ್ಷದ ಹಬ್ಬ ಆಚರಿಸುತ್ತಿರುವುದು ಸಂತಸ ತಂದಿದೆ. ಡಿ. 20 ರ ಸಂಜೆ 3.30 ಕ್ಕೆ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಮತ್ತು ಪಾರಿತೋಷಕವನ್ನು ವಿತರಿಸಲಾಗುವುದು. ಈ ಸಮಾರಂಭ ಗೌರವ ಅಧ್ಯಕ್ಷತೆಯನ್ನು ವಸಂತ ಹಜಾರೆ ವಹಿಸುವವರು. ಅಧ್ಯಕ್ಷತೆಯನ್ನು ಪದ್ಮಾವತಿ ಹಜಾರೆ, ಮುಖ್ಯ ಅತಿಥಿಗಳಾಗಿ ಶ್ರೀಪಾದ ಗುಂಡಾ, ಶಂಕರ ಅರಬಳ್ಳಿ, ಸಂತೋಷ ಸಮಾಜೆ, ವಿಠ್ಠಲ ಅಜ್ಜನಗೌಡರ, ಸುಕುಮಾರ ಕದ್ದು ಕಾಡೇಶ ಕೋಳೂರು, ಎಸ್, ಎ, ಬಿಜಾಪೂರ, ಬಿ. ಎಂ. ಹಳಮನಿ, ಸಂತೋಷ ಬಡ್ಡಿ ಆಗಮಿಸಲಿದ್ದಾರೆ.

ಡಿ. 21 ರಂದು ಸಂಜೆ 4, 30 ಕ್ಕೆ ಸಾಂಸ್ಕೃತಿ-ಕ ಕಾರ್ಯಕ್ರಮ ಹಜಾರೆ ಹಬ್ಬ ಜರುಗಲಿದೆ. ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಸೇಗುಣಸಿಯ ಮಹಾಂತ ಪ್ರಭು ಸ್ವಾಮಿಜಿ ವಹಿಸಲಿದ್ದು, ಗೌರವಾಧ್ಯಕ್ಷರಾಗಿ ಗಣಪತರಾವ ಹಜಾರೆ, ಅಧ್ಯಕ್ಷ ರಾಗಿ ಚಡಚಣದ ಬಾಹುಬಲಿ ಮುತ್ತಿನ ಆಗಮಿಸಲಿದ್ದಾರೆ. ಜಮಖಂಡಿಯ ಡಿವೈಎಸ್ಪಿ ಶಾಂತವೀರ ಈ, ಡಿಡಿಪಿಐ ವಿವೇಕಾನಂ ಎಂ, ರಾಜಶೇಖರ ಪಟ್ಟಣಶೆಟ್ಟಿ, ಎ. ಕೆ. ಬಸನ್ನವರ, ಸತೀಶ ಹಜಾರೆ ಸೇರಿದಂತೆ ಅನೇಕರು ಆಗಮಿಸಲಿದ್ದಾರೆ ಎಂದು ಅವರು ತಿಳಿಸಿದರು.

ಇಂದು ನಡೆದ ಗೋಷ್ಠಿಯಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಭಾರತಿ ತಾಳಿಕೋಟಿ, ಪ್ರಾಚಾರ್ಯರಾದ ಬಸವರಾಜ ಕಲಾದಗಿ, ಶ್ರೀಶೈಲ ಕುಂಬಾರ ಸೇರಿದಂತೆ ಶಾಲಾ ಸುಧಾರಣೆ ಸಮಿತಿಯ ಸದಸ್ಯರು, ಹಿರಿಯರು ಇದ್ದರು.



**ಈಚೆಗೆ ವಿವಾಹವಾದ ನವಜೋಡಿ ಜತ್ತಿ ಫೌಂಡೇಶನ್ ರುವಾರಿ ಧ್ರುವ ಹಾಗು ಅಮೋಘಾ ಅವರು ತೇರದಾಳ ವಿಧಾನಸಭಾ ಕ್ಷೇತ್ರದ ಎಲ್ಲ ಪಟ್ಟಣ ಹಾಗು ಗ್ರಾಮಗಳ ಆರಾಧ್ಯದೈವಗಳ ದೇವಾಲಯಕ್ಕೆ ತಮ್ಮ ಅಭಿಮಾನಿ ಬಳಗದೊಂದಿಗೆ ತೆರಳಿ ದರ್ಶನ ಪಡೆದರು.**

# ಪ್ರತಿಯೊಬ್ಬ ಪ್ರಜೆಗೂ ಆಧ್ಯಾತ್ಮದ ಜ್ಞಾನ ನೀಡಿ




ಇಂಡಿ : ಈ ದೇಶ ಉದ್ದಾರವಾಗಲು ಪ್ರತಿಯೊಬ್ಬ ಪ್ರಜೆಗೂ ಆಧ್ಯಾತ್ಮದ ಜ್ಞಾನ ನೀಡಿ,ಇದರತ್ತ ಆಕರ್ಷಣೆ ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂಬುದು ಸ್ವಾಮಿ ವಿವೇಕಾನಂದರ ವಿಚಾರವಾಗಿತ್ತು ಎಂದು ಡಿವೈನ್ ಪಾರ್ಕಿನ ಎಲ್ - 2 ಅಧಿಕಾರಿ ಯಶವಂತ ಡಿ ಎಸ್ ಹೇಳಿದರು.

ಅವರು ಇಂಡಿ ಪಟ್ಟಣದ ಶ್ರೀ ಬಸವರಾಜೇಂದ್ರ ಸತ್ಸಂಗ ಸಮಿತಿ ಹಾಗೂ ಶ್ರೀ ಬಸವರಾಜೇಂದ್ರ ಗಜಾನನ ಯುವಕ ಮಂಡಳಿ ಇವರ ಸಹಯೋಗದಲ್ಲಿ ನಡೆದ 89ನೇ ಹುಣ್ಣಿಮೆ ಬೆಳಕು ಕಾರ್ಯಕ್ರಮದ ನಿಮಿತ್ತವಾಗಿ ಇಂಡಿ ಪಟ್ಟಣದ ವಿವೇಕ ಜಾಗೃತ ಬಳಗದ ವತಿಯಿಂದ ಹಮ್ಮಿಕೊಂಡಿದ್ದ ಆತ್ಮೋನ್ನತಿ ಶಿಬಿರದಲ್ಲಿ ಅತಿಥಿ ಉಪನ್ಯಾಸಕರಾಗಿ ಉಪನ್ಯಾಸ ನೀಡಿದರು.

ದೇವರನ್ನು ಕಾಣಿಸುವವರೆಗೂ ನಾನು ನಿಲ್ಲುವುದಿಲ್ಲ ಎಂದು ವಿವೇಕಾನಂದರು ಶಪಥ ಮಾಡಿದ್ದರು.ಅದಕ್ಕಾಗಿ ಅವರು ನಿರಂತರವಾಗಿ ಭಗವಂತನ ಧ್ಯಾನದಲ್ಲಿ ತಲ್ಲಿನರಾದಾಗ ಅವರ ಗುರುಗಳಾದ ರಾಮಕೃಷ್ಣ ಪರಮಹಸರು ಭಗವಂತನ ದರ್ಶನ ಮಾಡಿಸಿದರು.ಈ ಆತ್ಮಗಳಿಗೆ ಮರಣವಿಲ್ಲ.ಆದರೆ, ನಮಗೆ ಮರಣವಿದೆ ಆತ್ಮ ನಿನ್ನಲ್ಲಿರದಿದ್ದರೆ ನಿನಗೆ ಎಂದಿಗೂ ಬೆಲೆ ಇಲ್ಲ.ಅದಕ್ಕಾಗಿ ಆತ್ಮೋನ್ನತಿ ಹೊಂದಲು ಯಾವತ್ತೂ ಭಗವಂತನ ಧ್ಯಾನ ಮಾಡುತ್ತಿರಬೇಕು.ಧರ್ಮ ಶಿಕ್ಷಣ ಮತ್ತು ದೇಶಭಕ್ತಿ ಶಿಕ್ಷಣ ಇಂದಿನ ಯುವಕರಿಗೆ ಅತಿ ಅವಶ್ಯವಾಗಿದೆ.ಯಾರು ದೇವರನ್ನು ಕಂಡಿದ್ದಾರೊ ಅವರು ದೇವರನ್ನು ತೋ-ರಿಸಬಲ್ಲರು.ಗುರು ಪರಂಪರೆ ಋಷಿ ಪರಂಪರೆಯು ದೇಶ ಇದಾಗಿದೆ.ತೋ-ರಿಕೆಯ ಭಕ್ತಿ ನಮ್ಮಲ್ಲಿ ಇರಬಾರದು.ಬದುಕು ಎಂಬುದು ಜಟಕಾ ಬಂಡಿ ಅದನ್ನು ಸಾರ್ಥಕ ಪಡಿಸಿಕೊಳ್ಳಿ, ಭಗವಂತ ನನ್ನನ್ನು ಕೈಹಿಡಿದು ಮೇಲೆತ್ತು ಎಂದು ಬೇಡಿಕೊಳ್ಳಿ.ನಾವು ಭಗವಂತನ ದಾಸರಾಗಬೇಕು.ಆಗ ಮಾತ್ರ ನಾವು ಉದ್ಧಾರವಾಗಲು ಸಾಧ್ಯ ಎಂಬುದು ವಿವೇಕಾನಂದರ ವಿಚಾರವಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಇನ್ನೋರ್ವ ಅತಿಥಿ ಉಪನ್ಯಾಸಕರಾಗಿ ಆಗಮಿಸಿದ್ದ ಡಿವೈನ್ ಪಾರ್ಕ್ ಎಲ್ -2 ಅಧಿಕಾರಿ ಶ್ರೀಮತಿ ಸುಜಾತಾ ರಾಮಕೃಷ್ಣನ್ ಅವರು ಮಾತನಾಡಿ, ಭಗವಂತನಿಗೆ ಧನ್ಯತೆ ಹೇಳುವ ಗುಣವನ್ನು ನೀವೆಲ್ಲರೂ ಬೆಳೆಸಿಕೊಳ್ಳಿರಿ. ಏನನ್ನು ಒಳ್ಳೆಯದೆಂದು ನಾವು ಪಡೆದುಕೊಂಡಿದ್ದೆಯೋ ಅದನ್ನು ಇತರರಿಗೂ ಹಂಚಿಕೊಡಬೇಕು.ಸರ್ವೇ ಜನ ಸುಖಿನೋ ಭವಂತು ಎಂಬಂತೆ ಎಲ್ಲವೂ ಭಗವಂತನೆ ಕೊಟ್ಟಿದ್ದಾನೆ.ಇಲ್ಲಿ ನನ್ನದೆಂಬುದು ಏನೂ ಇಲ್ಲ.ಆತ ಅವಕಾಶ ಮತ್ತು ಶಕ್ತಿಯನ್ನು ಕೊಟ್ಟಿದ್ದಾನೆ .ಅದನ್ನು ನಾವೆಲ್ಲರೂ ಸದುಪಯೋಗಪಡಿಸಿಕೊಳ್ಳಲು ದಿನಾಲು ಭಗವಂತನ ಇಷ್ಟನಾಮ ಸ್ಮರಣೆ ಮಾಡಿರಿ ಎಂದು ಎಂದು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಹಿರೇಮಠ ಜೈನಾಪುರ-ಅರ್ಜುಣಗಿ ಗ್ರಾಮದ ರೇಣುಕಾ ಶಿವಾಚಾರ್ಯರು ಆಶೀರ್ವಚನ ನೀಡಿ,ನಾವೆಲ್ಲರೂ ದೈವಿಕೃಪೆಗೆ ಒಳಗಾಗ ಬೇಕಾದರೆ ಇಂಥ ಸತ್ಸಂಗದಂತಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು,ಶರಣರ ವಚನಗಳ ಸಾರವನ್ನು ಅರಿತುಕೊಳ್ಳಬೇಕೆಂದು ಭಕ್ತರಿಗೆ ಕರೆ ನೀಡಿದರು. ವಿವೇಕ ಜಾಗೃತೆ ಬಳಗದ ಅಧ್ಯಕ್ಷರಾದ ದ್ರಾಕ್ಷಾಯಿಣಿ ವ್ಹಿ ಮೈದರಗಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದ ಪ್ರಾಯೋಜಕರಾದ ಬಾಲಾಜಿ ನರಸಯ್ಯ ಇಪ್ಪಕಾಯಲ್ ಹಾಗೂ ಸತ್ಸಂಗ ಸಮಿತಿ ಅಧ್ಯಕ್ಷರಾದ ಪ್ರೊ ಐ ಬಿ ಸುರಪುರ ಅತಿಥಿಗಳಾಗಿ ವೇದಿಕೆ ಮೇಲೆ ಆಸೀನರಾಗಿದ್ದರು.

ಇದೇ ಸಂದರ್ಭದಲ್ಲಿ ಸಾಹಿತಿಗಳಾದ ಶ್ರೀಮತಿ ಪಾರ್ವತಿ ಬ ಸೊನ್ನದ ಇವರು ರಚಿಸಿದ ಹೆಮ್ಮೆಯ ಪುತ್ರ ಮಕ್ಕಳ ಕಥಾ ಸಂಕಲನ ಕೃತಿಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ತಾಲೂಕು ಕನ್ನಡ ಜಾನಪದ ಪರಿಷತ್ತಿನ ಅಧ್ಯಕ್ಷ ಆರ್ ವಿ ಪಾಟೀಲ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಾಘವೇಂದ್ರ ಕುಲಕರ್ಣಿ,ಯುವಕ ಮಂಡಳಿ ಅಧ್ಯಕ್ಷ ಗಿರೀಶ ಮೋಪಡಿ, ಪ್ರೊ ಎಂ ಜೆ ಪಾಟೀಲ ಪ್ರೊ ಎ ಎಸ ಗಾಣಿಗೇರ, ಎಸ್ ಎಸ್ ಈರನಕೇರಿ,ಸಿ ಎಂ ಉಪ್ಪಿನ, ಕೆ ಜಿ ನಾಟೀಕಾರ, ಜಾಗೃತ ಬಳಗದ ಶ್ರೀಮತಿ ಎನ್ ಟಿ ಸಂಗಾ ಹಾಗೂ ಜಯಶ್ರೀ ಪತ್ತಾರ ಉಪಸ್ಥಿತರಿದ್ದರು.

## ಬಸವಂತಪೂರಗೆ ಸಂಗೀತ ಭಾಸ್ಕರ ಪ್ರಶಸ್ತಿ



ತಾಳಿಕೋಟೆ, ಸಮಿಪದ ಜಮ್ಮಲದಿನ್ನಿ ಗ್ರಾಮದ ಸಂಗೀತದ ಅಂದ ಕಲಾವಿದರಾದ ಸುರೇಶ ಮಲ್ಲಪ್ಪ ಬಸವಂತಪೂರ ಅವರಿಗೆ ಪ್ರಾಚೀನ ಕಲಾಕೇಂದ್ರ ಚಂಡಿಗಡದ ವತಿಯಿಂದ ಸಂಗೀತ ಭಾಸ್ಕರ ಎಂಬ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಇತ್ತೀಚಗೆ ಬಾಗಲಕೋಟದಲ್ಲಿ ಜರುಗಿದ ಸಂಗೀತ ಭಾಸ್ಕರ ಎಂಬ ನಡೆದ ಪರಿಕ್ಷೆಯಲ್ಲಿ ಪ್ರಥಮ ರ್‍ಯಾಂಕ್ ಪಡೆದು ಹೆಗ್ಗಳಿಕೆಗೆ ಪಾತ್ರರಾದ ಸುರೇಶ ಬಸವಂತಪೂರ ಅವರಿಗೆ ಚಂಡಿಗಡದ ಪ್ರಾಚೀನ ಕಲಾ ಕೇಂದ್ರದ ವತಿಯಿಂದ ದೊರೆತ ಪ್ರಶಸ್ತಿ ಕುರಿತು ಅನೇಕ ಸಂಗೀತಗಾರರು ಅಭಿನಂದನೆ ಸಲ್ಲಿಸಿದ್ದಾರೆ.

ಗವಾಯಿ ಸುರೇಶಕುಮಾರ ಅವರು ಮೂಲತ ಜಮ್ಮಲದಿನ್ನಿ ಗ್ರಾಮದವರಾಗಿದ್ದು 1998ರಿಂದ ಸತತ 3ವರ್ಷಗಳ ಕಾಲ ಶ್ರೀ ಖಾಸ್ಗತೇಶ್ವರ ಸಂಗೀತ ಪಾಠ ಶಾಲೆಯಲ್ಲಿ ಸಂಗೀತ ಪಡೆದ ಇವರು ಶಿಕ್ಷಕ ಮಲ್ಲಿಕಾರ್ಜುನ ಭಜಂತ್ರಿ ಅವರಿಂದ ಶಿಕ್ಷಣ ಪಡೆದವರಾಗಿದ್ದಾರೆ. ನಂತರ ಗದಗಿನ ವಿರೇಶ್ವರ ಪುಣ್ಯಾಶ್ರಮದಲ್ಲಿ ಗಾನ ಶಿವಯೋಗಿ ಶ್ರೀ ಪುಟ್ಟರಾಜ ಗವಾಯಿಗಳ ಮಾರ್ಗದರ್ಶನ ಪಡೆದ ಇವರು ಅಲ್ಲಿಯೂ ಈ ಹಿಂದೆ 4 ವರ್ಷಗಳ ಕಾಲ ಸಂಗೀತ ಅಧ್ಯಯನ ನಡೆಸಿ ಹಾಡುಗಾರಿಕೆ, ಹಾರ್ಮೋನಿಯಂ ವಾದನ ಹಾಗೂ ತಬಲಾ ವಾದನಗಳಲ್ಲಿಯೂ ಪರಿಣಿತ ಹೊಂದಿದ ಸುರೇಶ ಇವರು ಸತತ 24ವರ್ಷಗಳ ಕಾಲ ಸಂಗೀತ ಕ್ಷೇತ್ರದಲ್ಲಿ ಅನುಭವ ಹೊಂದಿ ಗವಾಯಿ ಸ್ಥಾನವನ್ನು ಗಿಟ್ಟಿಸಿಕೊಂಡ ಸುರೇಶ ಅವರು ಪ್ರಸ್ತುತ ಚಿಕ್ಕಮಂಗಳೂರ ಜಿಲ್ಲೆಯ ಬೀರೂರ ವಲಯದ ಕಡೂರ ತಾಲೂಕಿನ ಸಕಾರಾಮ ಪಟ್ಟಣದಲ್ಲಿ ಸರ್ಕಾರಿ ಜಿಎಂಎಚ್‌ಪಿಎಸ್ ಶಾಲೆಯಲ್ಲಿ ಸಂಗೀತ ಶಿಕ್ಷಕರಾಗಿ ಸೇವೆಗೆ ಮುಂದಾಗಿ ಶಾಲಾ ಮಕ್ಕಳಿಗೆ ಸಂಗೀತ ಕಲೆಯನ್ನು ಬಿತ್ತರಿಸುತ್ತಾ ಸಾಗಿದ್ದಾರೆ.

ಇತ್ತೀಚಗೆ ಗವಾಯಿ ಸುರೇಶ ಅವರ ಸಾಧನೆಗೆ ದೊರೆತ ಸಂಗೀತ ಭಾಸ್ಕರ ಪ್ರಶಸ್ತಿ ಕುರಿತು ತಾಳಿಕೋಟೆ ಶ್ರೀ ಖಾಸ್ಗತೇಶ್ವರ ಮಠದ ಸಂಗೀತ ಮಹಾ ವಿದ್ಯಾಲಯದ ಅಧ್ಯಕ್ಷ ವೇ.ಮುರುಘೇಶ ವಿರಕ್ತಮಠ ಅವರು ಹಾಗೂ ಸಂಗೀತಗಾರರಾದ ಗುಂಡಣ್ಣ ಹಂದಿಗನೂರ, ನಾಡಕಂಡ ಶ್ರೇಷ್ಠ ಗವಾಯಿಗಳಾದ ಬಸವರಾಜ ಭಂಟನೂರ ಅವರು ಹರ್ಷ ವ್ಯಕ್ತಪಡಿಸಿ ಸುರೇಶ ಅವರಿಗೆ ಹಾಗೂ ಪ್ರಾಚೀನ ಕಲಾ ಕೇಂದ್ರಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.

## ಸಹಕಾರಿ ರತ್ನ ಪ್ರಶಸ್ತಿ ಪುರಸ್ಕೃತ ಸರಶೆಟ್ಟಿಗೆ ಸನ್ಮಾನ



ತಾಳಿಕೋಟೆ, ಪಟ್ಟಣದ ಪ್ರತಿಷ್ಠಿತ ಸಹಕಾರಿ ಬ್ಯಾಂಕಿನ ನಿರ್ದೇಶಕ ಹಾಗೂ ಸ್ಥಳೀಯ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಎಂ.ಎಸ್.ಸರಸಟ್ಟಿ ಇವರಿಗೆ 2024-25 ನೇ ಸಾಲಿನ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ,ದ ವತಿಯಿಂದ ಕೊಡ ಮಾಡುವ ಸಹಕಾರ ರತ್ನ ಪ್ರಶಸ್ತಿ ಲಬಿಸಿದಕ್ಕೆ ಪುರಸಭೆ ಮಾಜಿ ಉಪಾಧ್ಯಕ್ಷೆ ಶ್ರೀಮತಿ ಹುಸೇನಬಿ ಎಚ್. ಮುಲ್ಲಾ ಅವರು ಸನ್ಮಾನಿಸಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಖಾಂಜಾದೆ, ಈದ್ಗಾ ಸಮಿತಿ ಮಾಜಿ ಅಧ್ಯಕ್ಷ ಮಾಸೂಮಸಾಬ ಕೆಂಭಾವಿ ಮತ್ತಿತರರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಹಾಲಗೋಡಾ ಜಮಾತ್ ಅಧ್ಯಕ್ಷ ಮಹಮ್ಮದ್ ಇಕ್ಬಾಲ್ ಖಾಜಿ, ಹುಸೇನಸಾಬ ಮುಲ್ಲಾ, ಮಹಮ್ಮದ್ ಸಾಧಿಕ್ ಮುಲ್ಲಾ, ಸತೀಶ ಸರಶೆಟ್ಟಿ, ಸೈಯದಸಾಬ ಕಟಗಿ, ಮಹಿಬೂಬ ಕೆಂಭಾವಿ, ತನ್ವೀರ ಮನಗೂಳಿ, ನಿವೃತ್ತ ಶಿಕ್ಷಕ ಅಮೀನ ಸಾಬ ಮುಲ್ಲಾ, ರಿಯಾಜ್ ಡೋಣಿ, ಸನಾ ಕೆಂಭಾವಿ, ಮಹಿಬೂಬ ಮುಲ್ಲಾ, ಮಹಾಂತೇಶ ಸರಶೆಟ್ಟಿ ಮತ್ತಿತರರು ಇದ್ದರು.

# ಏಕಾಗ್ರತೆಯಿದ್ದಲ್ಲಿ ಅಪಘಾತ ತಡೆ ಸಾಧ್ಯ




ರಬಕವಿ-ಬನಹಟ್ಟಿ,ಡಿ19: ವಾಹನ ಚಾಲನೆ ಮಾಡುವಾಗ ಚಾಲಕರು ಏಕಾಗ್ರತೆ ರೂಢಿಸಿಕೊಂಡರೆ ಅಪಘಾತಗಳನ್ನು ತಡೆಗಟ್ಟಬಹುದು. ಯಾವದೇ ಕಾರಣ-ಕ್ಕೂ ಮದ್ಯಪಾನ ಮಾಡುವದಕ್ಕೆ ಮುಂದಾಗಬಾರದು ಇದರಿಂದ ಅಪಘಾತ ತಡೆಗಳಿಗೆ ತುಂಬಾ ಸಹಕಾರಿಯೆಂದು ಪಿಎಸ್‌ಐ ಶಾಂತಾ ಹಳ್ಳಿ ತಿಳಿಸಿದರು.

ರಬಕವಿಯ 'ಕರಿ ಹೌಸ್' ಸಭಾಂಗಣದಲ್ಲಿ ಆಶೀರ್ವಾದ ಪೈಪ್ಸ್‌ನಿಂದ ಜರುಗಿದ ಪ್ಲಂಬರ್ ಕಾರ್ಮಿಕರ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ರೈತರು ತಮ್ಮ ಚಕ್ಕಡಿ ಹಾಗು ಟ್ರ್ಯಾಕ್ಟರ್ ಟ್ರ್ಯಾಲಿಗಳಿಗೆ ರೇಡಿಯಂ ಹಚ್ಚುವದರಿಂದ ರಸ್ತೆ ಅಪಘಾತಗಳನ್ನು ಕಡಿಮೆಗೊಳಿಸಬಹುದು. ಸಂಚಾರಿ ನಿಯಮಗಳಿಂದ ವಾಹನ ಚಾಲನೆ ಅನಿವಾರ್ಯ. ತಿಳುವಳಿಕೆ ಕೊರತೆಯಿಂದ ಯುವಕರು ಹೆಚ್ಚಿನ ನಿಯಮ ಉಲ್ಲಂಘನೆಯಲ್ಲಿದ್ದಾರೆ. ವಾಹನ ದಟ್ಟಣೆ, ಜನಸಂದಣಿ ಹಾಗು ರಸ್ತೆ ಮಾರ್ಗದಲ್ಲಿರುವಾಗ ಸಮಚಿತ್ತದ ವಾಹನ ಚಾಲನೆ ಅತಿಮುಖ್ಯವೆಂದರು.

ಇದೇ ಸಂದರ್ಭ ಸೂಫೀ ಕುಡಚಿ ಮಾತನಾಡಿ, ಕಾರ್ಮಿಕರಿಗೆ ಪೂರಕವಾಗುವ ಹಾಗು ಗುಣಮಟ್ಟದ ಪೈಪ್‌ದೊಂದಿಗೆ ಇಂದಿಗೂ ಜನರ ವಿಶ್ವಾಸದೊಂದಿಗೆ ಮುನ್ನಡೆಯುತ್ತಿರುವ ಆಶೀರ್ವಾದ ಪೈಪ್ ಸಂಸ್ಥೆಯು ದೇಶದಲ್ಲಿಯೇ ಮುಂಚೂಣಿ ಪಾತ್ರ ವಹಿಸಿದ್ದು, ಜನತೆಗೆ ಹತ್ತಿರವಾಗುವಲ್ಲಿ ಯಶಸ್ವಿಯಾಗಿದೆ ಎಂದರು.

ಇದೇ ಸಂದರ್ಭ ನೂರಾರು ಕಾರ್ಮಿಕರಿಗೆ ಆಶೀರ್ವಾದ ಸಂಸ್ಥೆಯಿಂದ ಉಚಿತವಾಗಿ ಹೆಲ್ಮೆಟ್ ವಿತರಿಸಲಾಯಿತು. ಸೂಫೀ ಕುಡಚಿ, ಸಿದ್ದು ಅಸ್ಕಿ, ಗೋಪಾಲ ಕಾಬರಾ, ಕುಂಬಾರ, ಕೋಲೂರ, ಮಹಾಲಿಂಗಪೂರ ಸೇರಿದಂತೆ ಅನೇಕ-ರಿದ್ದರು.

## ಕರ್ನಾಟಕ ಭೂ ಕಂದಾಯ ಕಾಯ್ದೆ ತಿದ್ದುಪಡಿ ಉಪ ಸಮಿತಿ ತೀರ್ಮಾನ ಕುರಿತು ಪರಿಶೀಲನೆ: ಕೃಷ್ಣ ಭೈರೇಗೌಡ

ಬೆಳಗಾವಿ : ಕರಾವಳಿ ಭಾಗದ ಕಾನೆ, ಬಾನೆ, ಕುಮ್ಕಿ ಮತ್ತು ಇನ್ನಿತರ ಭೂಮಿಗಳ ಬಗ್ಗೆ ಸದಸ್ಯರಾದ ಪ್ರತಾಪ ಸಿಂಹ ನಾಯಕ ಕೆ ಅವರು ಡಿ.18ರಂದು ವಿಧಾನ ಪರಿಷತ್ತಿನಲ್ಲಿ ಪ್ರಸ್ತಾಪಿಸಿದರು.

ಪ್ರಶ್ನೋತ್ತರ ವೇಳೆ, ಸದಸ್ಯರ ಚುಕ್ಕೆ ಗುರುತಿನ ಪ್ರಶ್ನೆಗೆ ಪ್ರತಿಕ್ರಿಯಿಸಿದ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 79(2) ರಲ್ಲಿರುವ ಜಮೀನುಗಳು ವಿಶೇಷಾಧಿಕಾರಗಳನ್ನು ಮುಂದುವರಿಸಿ, ಅವುಗಳನ್ನು ಅಧಿಭೋಗದಾರರಿಗೆ ಅವರ ಹಿಡುವಳಿ ಜಮೀನನ್ನು ಹೊರತುಪಡಿಸಿ 5 ಎಕರೆಗೆ ಮೀರದಂತೆ ಸರ್ಕಾರವು ನಿರ್ಧ-ರಿಸಬಹುದಾದಂತಹ ಗುತ್ತಿಗೆ ಮೌಲ್ಯವನ್ನು ವಿಧಿಸಿ 30 ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡಲು ಅನುವಾಗುವಂತೆ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ಕ್ಕೆ ತಿದ್ದುಪಡಿ ತರುವ ಬಗ್ಗೆ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಗೋಮಾಳ, ಗಾಯರಾಣ, ಹುಲ್ಲಬನ್ನಿ. ಸೊಪ್ಪಿನಬೆಟ್ಟ ಇತ್ಯಾದಿ ಗ್ರಾಮೀಣ ಪ್ರದೇಶದ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವ ಕುರಿತು ನೀತಿಯೊಂದನ್ನು ರೂಪಿಸಲು ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿ ರಚಿಸಲಾಗಿತ್ತು. ಈ ಸಮಿತಿಯು ವಿವಿಧ ದಿನಾಂಕಗಳಂದು ಸಭೆ ನಡೆಸಿದೆ.24.01.2023ರಂದು ನಡೆದ ಸಭೆಯಲ್ಲಿ ಉಪ ಸಮಿತಿಯು ಕಾಯ್ದೆಯ ತಿದ್ದುಪಡಿ ತರುವ ಬಗ್ಗೆ ತೆಗೆದುಕೊಂಡ ತೀರ್ಮಾನ ಅನುಷ್ಠಾನಗೊಳಿಸಲು ಇರುವ ಕಾನೂನು ತೊಡಕುಗಳ ಬಗ್ಗೆ ಸರ್ಕಾರವು ಪರಿಶೀಲಿಸಲಿದೆ ಎಂದು ಸಚಿವರು ಇದೆ ವೇಳೆ ಸ್ಪಷ್ಟನೆ ನೀಡಿದರು.

ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಬಹುದಾದಂಥ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು ರೂಢಿಯಂತೆ ಅಂಥ ಯಾವುದೇ ಆದ-ೇಶದ ಮೇರೆಗೆ ಅನುಭೋಗಿಸಲಾಗುತ್ತಿರುವ ವಿಶೇಷಾಧಿಕಾರಗಳು ಅಂದರೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರೆಯತಕ್ಕದ್ದು ಎಂದು ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 79ರ (2)ರಡಿ ಕಲಂ 79 ಉಪ-ಪ್ರಕರಣ (1)ರಲ್ಲಿ ತಿಳಿಸಲಾಗಿದೆ ಎಂದು ಸಚಿವರು ವಿವರಿಸಿದರು.

## 371 (ಜೆ ) ಅಡಿ 5977 ಹುದ್ದೆ ಭರ್ತಿ : ಸಚಿವ ಡಿ. ಸುಧಾಕರ್

ಬೆಳಗಾವಿ ಸುವರ್ಣಸೌಧ, ಡಿ.19 : 371(ಜೆ ) ಕಾಯ್ದೆಯನ್ವಯ ರಾಜ್ಯದಾ ದ್ಯಂತ ಸರ್ಕಾರಿ ನೇಮಕಾತಿಯಲ್ಲಿ ರಾಜ್ಯಮಟ್ಟದ ಸ್ಥಳೀಯ ವೃಂದದ ನೇರ ನೇಮಕಾತಿಯಲ್ಲಿ 9695 ಹುದ್ದೆಗಳನ್ನು ಗುರುತಿಸಲಾಗಿದ್ದು, ಈ ಪೈಕಿ 5977 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಎಂದು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ. ಸುಧಾಕರ್ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಜಗದೇವ್ ಗುತ್ತೇದಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

371(ಜೆ) ಅಡಿ ವಿವಿಧ ನೇಮಕಾತಿ ಸಂಸ್ಥೆಗಳಲ್ಲಿ 1658 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದ್ದು ಇನ್ನು 2035 ಹುದ್ದೆಗಳ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕಿದೆ. ಈಗಾಗಲೆ ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಂಡಂತೆ ಕ್ರಮವಹಿಸಲು ಎಲ್ಲಾ ಇಲಾಖೆಗಳಿಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸೂಚನೆ ನೀಡಲಾಗಿದೆ ಎಂದರು

371 (ಜೆ) ಅಡಿಯಲ್ಲಿ ನೇಮಕವಾಗಿರುವ ನೌಕರರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಸದರಿ ಅಂಶಗಳನ್ನು ಆದ್ಯತೆ ಮೇಲೆ ಚರ್ಚಿಸಿ, ಸಂಬಂಧಪಟ್ಟ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡುವುದರ ಮೂಲಕ ಪರಿಹರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

## ಬೆಂಗಳೂರು-ಮೈಸೂರು ಇನ್‌ಫ್ರಾಸ್ಟಕ್ಚರ್ ಕಾರಿಡಾರ್ ಶಾಖಾ ಕಚೇರಿಯನ್ನು ಮದ್ದೂರು ಪಟ್ಟಣದಲ್ಲಿ ಸ್ಥಾಪಿಸುವ ಪ್ರಸ್ತಾವನೆಯ ಪರಿಶೀಲನೆಯಲ್ಲಿದೆ: ಡಿ.ಕೆ.ಶಿವಕುಮಾರ

ಬೆಳಗಾವಿ ಸುವರ್ಣಸೌಧ : ಬೆಂಗಳೂರ -ಮೈಸೂರು ಇನ್‌ಫ್ರಾಸ್ಟಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ಶಾಖಾ ಕಚೇರಿಯನ್ನು ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ ಎಂದು ಉಪ ಮುಖ್ಯಮಂತ್ರಿಗಳಾದ

ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ.

ಸದಸ್ಯರಾದ ಮಧು ಜಿ ಮಾದೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಉಪ ಮುಖ್ಯಮಂತ್ರಿಗಳು,

ಬೆಂಗಳೂರು-ಮೈಸೂರು ಇನ್‌ಫ್ರಾಸ್ಟಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರ (ಬಿ.ಎಂ.ಐ.ಸಿ.ಎ.ಪಿ.ಎ) ವ್ಯಾಪ್ತಿಗೆ ಮಂಡ್ಯ ಜಿಲ್ಲೆಯ ಮದ್ದೂರು ಪುರಸಭೆಗೆ 2001ನೇ ಸಾಲಿನಲ್ಲಿ ಸೇರ್ಪಡೆಯಾಗಿದೆ ಎಂದು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ನೀರನ್ನು ಪಡೆಯಲು ಕ್ರಮ:

ಭೀಮಾ ಮುಖ್ಯ ನದಿಯಲ್ಲಿ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಿಗೆ ನೀರನ್ನು ಬಳಸಿಕೊಳ್ಳಲು ನಿರ್ಭಂದವಿದ್ದು, ಮಿತಿಗೊಳಿಸಿರುವ ಪ್ರಮಾಣದಲ್ಲಿ ಯೋಜನೆಗಳನ್ನು ರೂಪಿಸಲಾಗಿರುತ್ತದೆ. ಸಾಮಾನ್ಯ ವರ್ಷಗಳಲ್ಲಿ ನೀರಿನ ಕೊರತೆ ಕಂಡುಬಂದಿರುವುದಿಲ್ಲ. ಕೊರತೆಯಾದ ಜಲ ವರ್ಷಗಳಲ್ಲಿ ಕುಡಿಯುವ ಹಾಗೂ ಇತರೆ ಅಗತ್ಯಗಳಿಗೆ ನೀರನ್ನು ಮಹಾರಾಷ್ಟ್ರ ರಾಜ್ಯದಿಂದ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿಗಳು, ಸದಸ್ಯರಾದ ಡಾ.ತಳವಾರ ಸಾಬಣ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ್ದಾರೆ.

ಬಚಾವತ್ ತೀರ್ಪಿನ ಪ್ರಕಾರ ನ್ಯಾಯಯುತವಾಗಿ ರಾಜ್ಯಕ್ಕೆ ಬರಬೇಕಾದ ನೀರನ್ನು ಪಡೆಯಲು ಸರ್ಕಾರ ಪ್ರಯತ್ನಿಸಿದೆ ಎಂದು ಅವರು ವಿವರಿಸಿದ್ದಾರೆ.

*****

## ಶಾಲೆಯ ಭದ್ರತೆಗೆ ನೇರವಾದ ಉದ್ಯೋಗ ಖಾತ್ರಿ




ಕಾರವಾರ – ಸಿದ್ದಾಪುರ ತಾಲೂಕಿನ ಹಾರ್ಸಿಕಟ್ಟಾ ಗ್ರಾಮ ಪಂಚಾಯತ್ ವ್ಯಾಪ್ತಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ದೇವಾಸ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುತ್ತಳ್ಳಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ತಲಾ 3ಲಕ್ಷ 52ಸಾವಿರ ರೂ ವೆಚ್ಚದಲ್ಲಿ ಕಾಂಪೌಂಡ ನಿರ್ಮಿಸಲಾಗಿದ್ದು ಶಾಲೆಗೆ ಭದ್ರತೆಗೆ ಅನುಕೂಲವಾಗಿದೆ.

ಕಾಂಪೌಂಡ್ ನಿರ್ಮಾಣದಿಂದಾಗಿ ಶಾಲೆಯ ಭದ್ರತೆಯ ಜೊತೆಗೆ ಶಾಲೆಯ ಆಸ್ತಿಯ ಅತಿಕ್ರಮಣ–ಕ್ಕೆ ಕಡಿವಾಣ ಹಾಕಲಾಗಿದೆ. ಶಾಲೆಯಲ್ಲಿ ಕೈತೋಟ ಹಾಗೂ ಆವರಣವನ್ನು ಸುಂದರಗೊಳಿಸುವಲ್ಲಿ ಸಹಾಯಕವಾಗಿದೆ.

ಸರ್ಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ನರೇಗಾ ಯೋಜನೆಯಡಿ ಶಾಲೆಗಳಲ್ಲಿ ಶೌಚಾಲಯ, ಆಟದ ಮೈದಾನ, ಕಾಂಪೌಂಡ್, ಅಡುಗೆ ಕೋಣೆ, ಮಳೆ ನೀರಿನ ಕೊಯ್ಲು ಮುಂತಾದ ಕಾಮಗಾರಿಗಳನ್ನು ಕೈಗೊಂಡು ಶಾಲೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಇದರ ಸಂಪೂರ್ಣ ಸದುಪಯೋಗವನ್ನು ಸರ್ಕಾರಿ ಶಾಲೆಗಳು ಪಡೆಯಬೇಕು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಾಜೇಶ್ ನಾಯ್ಕ ತಿಳಿಸಿದರು.

## ದಿವ್ಯಾಂಗ ಮಕ್ಕಳನ್ನು ಪ್ರೀತಿ ಗೌರವದಿಂದ ಕಾಣಿ : ಶಂಕರ್ ಕುಂಬಾರ್

ಬೆಳಗಾವಿ: ದಿವ್ಯಾಂಗ ಮಕ್ಕಳು ಮುಗ್ಧರು, ಅವರನ್ನು ಪ್ರೀತಿ, ಗೌರವದಿಂದ ಕಾಣಬೇಕು. ಈ ಮಕ್ಕಳಲ್ಲಿ ವಿಶೇಷ ಶಕ್ತಿ, ಸಾಮರ್ಥ್ಯ, ಜ್ಞಾನ ಇರುತ್ತದೆ. ಅವರನ್ನು ಸಮಾಜದಲ್ಲಿ ಪ್ರೋತ್ಸಾಹಿಸಿ ಬೆಳೆಸುತ್ತಿರುವ ಆರಾಧನೆ ಶಾಲೆಯ ಎಲ್ಲ ಶಿಕ್ಷಕ ವೃಂದದ ಸೇವೆ ಮೆಚ್ಚುವಂತದ್ದು ಎಂದು ನಿವೃತ್ತ ಸೈನಿಕ, ಶಿಕ್ಷಕರಾದ ಶಂಕರ್ ಕುಂಬಾರ್ ಹೇಳಿದರು.

ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನದಿಂದ ಹಿಂದುವಾಡಿ ಕಿಲ್ಲಾದಲ್ಲಿರುವ ಆರಾಧನಾ ಬುದ್ಧಿಮಾಂದ್ಯ ಮಕ್ಕಳ ಶಾಲೆಯಲ್ಲಿ ವಿಶ್ವ ದಿವ್ಯಾಂಗ ಚೇತನರ ದಿನಾಚರಣೆಯನ್ನು ಆಚರಿಸಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಿಜವಾಗಲೂ ಶಾಲೆಗೆ ಹ್ಯಾಪಿ ಸ್ಕೂಲ್ ಎಂದು ಹೆಸರು ನೀಡಿದ್ದು ತುಂಬಾ ಸಮಾಜಸವಾಗಿದೆ ಮತ್ತು ಈ ಎರಡು




ಸಂಸ್ಥೆಗಳು ಇಂತಹ ಸಮಾಜಮುಖಿ ಕಾರ್ಯವನ್ನು ಮಾಡುತ್ತಿರುವುದು ಒಂದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಆರಾಧನಾ ಬುದ್ಧಿ ಮಾಂದ್ಯ ಶಾಲೆಯ ಪ್ರಧಾನ ಗುರುಗಳಾದ ಗಜಾನನ್ ಸುತಾರ್ ಉತ್ತಮ ಶಿಕ್ಷಕ ಎಂದು ರಾಜ್ಯ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ. ಇವರು ಈ ಎರಡು ಸಂಸ್ಥೆಯು ಮೊಟ್ಟ ಮೊದಲಿಗೆ ನಮ್ಮ ಶಾಲೆಗೆ ಬಂದು ರಕ್ಷಾಬಂಧನ ಕಾರ್ಯಕ್ರಮವನ್ನು ಆಚ–ರಿಸಿದ ಸಂದರ್ಭವನ್ನು ಮರೆಯುವುದಿಲ್ಲ ಎಂದು ಹೇಳಿದರು.

ನಮ್ಮ ಶಾಲೆಯ ಪ್ರಗತಿಯು ಕೂಡ ನಿಮ್ಮ ಎರಡು ಸಂಸ್ಥೆಗಳ ಸಹಕಾರದಿಂದ ಆಗಿದೆ ಸರಕಾರವು ಮಾಡಬೇಕಾದ ಕೆಲಸವನ್ನು ಈ ಎರಡು ಸಂಸ್ಥೆಗಳು ಮಾಡುತ್ತಿವೆ.

ನಿಮ್ಮ ಈ ಸಹಾಯ ಸಹಕಾರವನ್ನು ನಾವು ಎಂದೂ ಮರೆಯುವುದಿಲ್ಲ ಎಂದು ಹೆಮ್ಮೆಯಿಂದ ಹೇಳಿದರು.

ನಿವೃತ್ತ ಸೈನಿಕರಾದ ಶಂಕರ್ ಕುಂಬಾರ್ ಅವರಿಗೆ ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಗಜಾನನ್ ಸುತಾರವ–ರಿಗೆ ನಮ್ಮ ಎರಡು ಸಂಸ್ಥೆಗಳಿಂದ ಸನ್ಮಾನಿಸಲಾಯಿತು.

ಮಂಡಲದ ಅಧ್ಯಕ್ಷರಾದ ಮಂಗಲ್ ಮಠ ಸ್ವಾಗತಿಸಿದರು. ಕಾರ್ಯದರ್ಶಿ ಭಾರತಿ ರತ್ನಪ್ಗೊಳ ಪ್ರಸ್ತಾವಿಕವಾಗಿ ಮಾತನಾಡಿದರು. ಗೀತಾ ಎಮ್ಮಿ, ಶೋಭಾ ಕಾಡನ್ನವರ್ ಪ್ರಾರ್ಥನಾ ಗೀತೆಯನ್ನು ಹಾಡಿದರು.

ಮಮತಾ ಆಂಟಿ ನ ಮತ್ತು ರತ್ನಶ್ರೀ ಗುಡೆರ್ ಅತಿಥಿಗಳ ಪರಿಚಯವನ್ನು ಮಾಡಿದರು.

ಆಶಾ ನೀಲಗಿ ವಂದಿಸಿದರು. ಅಕ್ಷತಾ ಪಾಟೀಲ್ ನಿರೂಪಿಸಿದರು. ಮಂಡಳದ ಎಲ್ಲ ಸದಸ್ಯರು ಹಾಗೂ ಮಾಜಿ ಯೋಧರು ಆರ್ ಬಿ ಬನಶಂಕರಿ ಇತರರು ಇದ್ದರು.

### ಚೂರು–ಪಾರು

## 'ಝೇಂಕಾರ' ಬ್ರ್ಯಾಂಡ್ ಹೆಸರಿನಲ್ಲಿ ಜೇನುತುಪ್ಪ ಉತ್ಪನ್ನಗಳ ಮಾರಾಟ: ಸದುಪಯೋಗಕ್ಕೆ ಮನವಿ

ಕೊಪ್ಪಳ : ತೋಟಗಾರಿಕೆ ಇಲಾಖೆ ಮಾಲೀಕತ್ವದ "ಝೇಂಕಾರ" ಬ್ರ್ಯಾಂಡ್ ಹೆಸರಿನಲ್ಲಿ ಜೇನುತುಪ್ಪ ಹಾಗೂ ಉತ್ಪನ್ನಗಳ ಮಾರಾಟದ ಸದುಪಯೋಗ ಪಡೆದುಕೊಳ್ಳುವಂತೆ ಕೊಪ್ಪಳ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಜೇನು ತುಪ್ಪಕ್ಕೆ ಝೇಂಕಾರ ಎಂಬ ಬ್ರ್ಯಾಂಡ್ ಹೆಸರು, ಟ್ಯಾಗ್‌ಲೈನ್ ಮತ್ತು ಲೋಗೊಗಳು ಟ್ರೇಡ್ ಮರ್ಕ್ ರೆಜಿಸ್ಟರಿ (Trade Mark Registry) ಯಲ್ಲಿ ಕಾನೂನಾತ್ಮಕವಾಗಿ ನೋಂದಣಿಯಾಗಿದ್ದು, ತೋಟಗಾರಿಕೆ ಇಲಾಖಾ ವತಿಯಿಂದ ನೋಂದಣಿ ಪ್ರಮಾಣ ಪತ್ರ ಪಡೆಯಲಾಗಿರುತ್ತದೆ. ಕೊಪ್ಪಳ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜೇನುತುಪ್ಪ ಉತ್ಪಾದಕರು ಮತ್ತು ಸಂಗ್ರಾಹಕರು ತೋಟಗಾರಿಕೆ ಇಲಾಖೆಯ ಮಾರ್ಗಸೂಚಿಯನ್ವಯ "ಝೇಂಕಾರ" ಬ್ರ್ಯಾಂಡ್ ಹೆಸರನ್ನು ಉಪಯೋಗಿಸಿಕೊಂಡು ಜೇನು ತುಪ್ಪ ಹಾಗೂ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶವಿದ್ದು, ಜೇನು ಕೃಷಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ www.horticulturedirkarnataka.gov.in ಜಾಲತಾಣದಲ್ಲಿ ವೀಕ್ಷಿಸಿ ಅಥವಾ ತೋಟಗಾ–ರಿಕೆ ಉಪನಿರ್ದೇಶಕರ ಕಛೇರಿ (ಜಿ.ಪಂ.) ಕೊಪ್ಪಳ ಹಾಗೂ ಕೊಪ್ಪಳ, ಗಂಗಾವತಿ, ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಕೊಪ್ಪಳ ವಿಶ್ವ ವಿದ್ಯಾಲಯ ಸ್ನಾತಕೋತ್ತರ ಪದವಿ ಪ್ರವೇಶ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ : ಕೊಪ್ಪಳ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿಯನ್ನು ಡಿಸೆಂಬರ್ 25 ರವರೆಗೆ ವಿಸ್ತರಿಸಲಾಗಿದೆ.

2024–25ನೇ ಶೈಕ್ಷಣಿಕ ಸಾಲಿನ ಕೊಪ್ಪಳ ವಿಶ್ವವಿದ್ಯಾಲಯದ ಸ್ನಾತಕೋತ್ತರ ಪದವಿಗಳಿಗೆ ಪ್ರವೇಶಾತಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಕೆಗೆ ನ.30 ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಪ್ರಸ್ತುತ ವಿದಾರ್ಥಿಗಳ ಹಿತದೃಷ್ಠಿಯಿಂದ ಈ ಅವಧಿಯನ್ನು ಡಿ.25 ರವರೆಗೆ ವಿಸ್ತರಿಸಲಾಗಿದೆ.ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅದರ ಒಂದು ಪ್ರತಿ ಜೊತೆಗೆ ಸಂಬಂಧಪಟ್ಟ ದಾಖಲಾತಿಗಳ ನಕಲು ಪ್ರತಿಯನ್ನು ದೃಢೀಕರಿಸಿ ಕೊಪ್ಪಳ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು.

ಅರ್ಜಿ ಶುಲ್ಕಗಳ ವಿವರ ಹಾಗೂ ಅರ್ಜಿಗಳನ್ನು ಸಲ್ಲಿಸಲು ಪಾಲಿಸಬೇಕಾದ ಮಾನದಂಡಗಳಿಗೆ ಸಂಬಂಧಿಸಿದ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣಕ್ಕೆ ಭೇಟಿ ನೀಡಿ ಅಥವಾ ಪ್ರವೇಶಾತಿ ಪಡೆಯಲಿಚ್ಛಿಸುವ ವಿದ್ಯಾರ್ಥಿಗಳು ಕೊಪ್ಪಳ ವಿಶ್ವವಿದ್ಯಾಲಯದ ಮುಖ್ಯ ಅವರಣ, 4ನೇ ಮಹಡಿ, ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ, ತಳಕಲ್, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ ಮತ್ತು ಗಂಗಾವತಿ ಹಾಗೂ ಸಂಯೋಜಿತ ಮಹಾವಿದ್ಯಾಲಯಗಳಿಗೆ ನೇರವಾಗಿ ಭೇಟಿ ನೀಡಿ ಮಾಹಿತಿ ಪಡೆಯಬಹುದುದಾಗಿದೆ ಎಂದು ಕೊಪ್ಪಳ ವಿವಿಯ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವಮಾನವ ದಿನಾಚರಣೆ ಪೂರ್ವ ಸಿದ್ಧತಾ ಸಭೆ

ಗದಗ : ಇದೇ ಡಿಸೆಂಬರ್ 29 ರಂದು ಆಚರಿಸಲಾಗುತ್ತಿರುವ ವಿಶ್ವಮಾನವ ದಿನಾಚರಣೆ ನಿಮಿತ್ಯ ಡಿಸೆಂಬರ್ 20 ರಂದು ಮಧ್ಯಾಹ್ನ 3 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ತಾವು ಸಭೆಗೆ ಆಗಮಿಸಿ ಸಲಹೆ, ಅಭಿಪ್ರಾಯ ನೀಡುವಂತೆ ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಪೂರ್ವ ಸಿದ್ಧತಾ ಸಭೆ

ಗದಗ: ಜನವರಿ 1 ರಂದು ನಡೆಯುವ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ನಿಮಿತ್ಯ ಡಿಸೆಂಬರ್ 20 ರಂದು ಮಧ್ಯಾಹ್ನ 3:30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಗದಗ : ಸಮುದಾಯ ಆರೋಗ್ಯ ಕೇಂದ್ರಗಳಾಗಿ ಮೇಲ್ದರ್ಜೆಗೇರಿದ ಬೆಟಗೇರಿ ಹಾಗೂ ನರೇಗಲ್ ಸಂಸ್ಥೆಗಳಿಗೆ ವಿವಿಧ ತಜ್ಞ ವೈದ್ಯರ ಹುದ್ದೆಗಳ ಅವಶ್ಯಕತೆ ಹಿನ್ನೆಲೆಯಲ್ಲಿ ಜನರಲ್ ಮೆಡಿಸನ್, ಚಿಕ್ಕಮಕ್ಕಳ ತಜ್ಞರು, ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರು ಅರವಳಿಕೆ ತಜ್ಞರು ಸದರಿ ಮಂಜೂರಾದ ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ಅಥವಾ ಕ್ರಮಬದ್ಧವಾಗಿ ನೇಮಕವಾಗುವವರೆಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸಂದರ್ಶನ (ವಾಕ್–ಇನ್–ಇಂಟರ್‌ವ್ಯೂವ್) ಮೂಲಕ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ.

ಇಚ್ಛೆಯುಳ್ಳ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ–101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿಗೆ ತಮ್ಮ ಬಯೋಡೆಟಾ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳ ದ್ವಿಪ್ರತಿಗಳೊಂದಿಗೆ ದಿನಾಂಕ:02–01–2025 ರಂದು ಸಂದರ್ಶನಕ್ಕೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾಗಿದೆ.

## ಸಖಿ ಕೇಂದ್ರ್ರದಲ್ಲಿ ಕಾರ್ಯನಿರ್ವಹಿಸಲು ಮಹಿಳಾ ಅರ್ಜಿ ಅಭ್ಯರ್ಥಿಗಳಿಂದ ಆಹ್ವಾನ

ಕೊಪ್ಪಳ : ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ವೈದ್ಯಕೀಯ ಸೇವೆ, ಪೊಲೀಸ್ ಸೇವೆ, ಕಾನೂನು ಸೇವೆ, ಸಮಾಲೋಚನೆ ಮತ್ತು ತಾತ್ಕಾಲಿಕ ವಸತಿ ಒದಗಿಸುವ ಉದ್ದೇಶ ಹೊಂದಿರುವ "ಸಖಿ" (ಒನ್ ಸ್ಟಾಪ್ ಸೆಂಟರ್) ಕೇಂದ್ರ ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸಲು ಒಂದು ಕೇಸ್ ವರ್ಕರ್/ಸೋಶಿಯಲ್ ವರ್ಕರ್ ಹಾಗೂ ಒಂದು ಪ್ಯಾರಾಲೀಗಲ್ ಪರ್ಸನಲ್ ಲಾಯರ್ ಹುದ್ದೆಗಳನ್ನು ಮಾಸಿಕ ಗೌರವಧನವನ್ನಾಧರಿಸಿ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲು ಅರ್ಹ ವಿದ್ಯಾರ್ಹತೆ ಹೊಂದಿರುವ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೇಸ್ ವರ್ಕರ್/ಸೋಶಿಯಲ್ ವರ್ಕರ್ ಹುದ್ದೆಗೆ ಬಿ.ಎಸ್.ಡಬ್ಲ್ಯೂ, ಬಿಎ (ಸಮಾಜಶಾಸ್ತ್ರ) ಅಥವಾ ಮಹಿಳಾ ಅಧ್ಯಯನದಲ್ಲಿ ಪದವಿ (02 ವರ್ಷಗಳ ಅನುಭವದೊಂದಿಗೆ) ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಪ್ಯಾರಾಲೀಗಲ್ ಪರ್ಸನಲ್ ಲಾಯರ್ ಹುದ್ದೆಗೆ ಕಾನೂನು ಪದವಿಯೊಂದಿಗೆ 2 ರಿಂದ 3 ವರ್ಷಗಳ ಅನುಭವ ಹೊಂದಿರಬೇಕು.

ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರಬೇಕು. ಒಂದಕ್ಕಿಂತ ಹೆಚ್ಚಿನ ಹುದ್ದೆಗೆ ಅರ್ಜಿ ಸಲ್ಲಿಸಬಯಸಿದ್ದಲ್ಲಿ ಪ್ರತ್ಯೇಕವಾಗಿ ಹುದ್ದೆವಾರು ಅರ್ಜಿ ಸಲ್ಲಿಸಬೇಕು. ಆಯ್ಕೆಯಾದ ಅಭ್ಯರ್ಥಿಯವರು ಸಖಿ (ಒನ್ ಸ್ಟಾಪ್ ಸೆಂಟರ್) ಮಾರ್ಗಸೂಚಿಗಳನ್ವಯ 24*7 (ಶಿಫ್ಟ್ ಡ್ಯೂಟೀಸ್) ಕಾರ್ಯನಿರ್ವಹಿಸಲು ಸಿದ್ಧರಿರಬೇಕು. ಈ ಹುದ್ದೆಗಳು ತಾತ್ಕಾಲಿಕ ಹುದ್ದೆಗಳಾಗಿದ್ದು, 11 ತಿಂಗಳಿಗೆ ಗೌರವಧನ ಸೇವೆ ಆಗಿರುತ್ತದೆ. ತಮ್ಮ ಸೇವೆಯು ತೃಪ್ತಿಕರವಾಗಿಲ್ಲವೆಂದು ಕಂಡುಬಂದಲ್ಲಿ ಯಾವುದೇ ಮುಚ್ಚಳಿಕೆ ಅಥವಾ ನೋಟೀಸ್ ನೀಡದೇ ತೆಗೆದು ಹಾಕುವ ಅಧಿಕಾರವು ಜಿಲ್ಲಾಧಿಕಾರಿಗಳಿಗೆ ಇರುತ್ತದೆ. ಅಭ್ಯರ್ಥಿಗಳ ಆಯ್ಕೆಯಲ್ಲಿ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ ಸಮಿತಿಯನಿರ್ಣಯವೇ ಅಂತಿಮವಾಗಿರುತ್ತದೆ.

ಅಭ್ಯರ್ಥಿಯ ಆಯ್ಕೆಯನ್ನು ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್, ಅನುಭವ ಆಧಾರ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಯು ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಯ ಅನುಮೋದನೆ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವರು ಕಾಲಕಾಲಕ್ಕೆ ನೀಡುವ ಸೂಚನೆಗಳು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಅಭ್ಯರ್ಥಿಗಳು ಇಂಗ್ಲೀಷ್ ಮತ್ತು ಕನ್ನಡ ಕಂಪ್ಯೂಟರ್ ಜ್ಞಾನದಲ್ಲಿ ಪರಿಣಿತಿ ಹೊಂದಿರಬೇಕು. ಅಗತ್ಯವಿದ್ದಲ್ಲಿ ಕಂಪ್ಯೂಟ–ರ್ ಜ್ಞಾನ ಪರೀಕ್ಷೆಯನ್ನು ನಡೆಸಲಾಗುವುದು. ಈ ಕ್ಷೇತ್ರದಲ್ಲಿ ಅನುಭವ ಹೊಂದಿದವ–ರಿಗೆ ಪ್ರಾಮುಖ್ಯತೆ ನೀಡಲಾಗುವುದು. ಸಖಿ (ಒನ್ ಸ್ಟಾಪ್ ಸೆಂಟರ್) ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕನ್ನಡ ಇಂಗ್ಲೀಷ್ ಹಿಂದಿ ಭಾಷೆಗಳಲ್ಲಿ ಓದಲು ಬರೆಯಲು ಮತ್ತು ಮಾತನಾಡಲು ನಿಪುಣರಾಗಿರಬೇಕು. ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಯು ಕಡ್ಡಾಯವಾಗಿ ಕೊಪ್ಪಳ ಜಿಲ್ಲೆಯ ನಿವಾಸಿಯಾಗಿರಬೇಕು. ಅಭ್ಯರ್ಥಿ ಹುದ್ದೆಗೆ ಅನುಗುಣವಾಗಿ ಅಂಗೀಕೃತ ಕಾಲೇಜು ಅಥವಾ ವಿಶ್ವ ವಿದ್ಯಾಲಯಗಳಿಂದ ಶಿಕ್ಷಣ ಪಡೆದಿರಬೇಕು. ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಗೌರವಧನ ಹೊರತುಪಡಿಸಿ ಯಾವುದೇ ಭತ್ಯೆ ನೀಡಲಾಗುವುದಿಲ್ಲ. ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದ ಲಭ್ಯತೆಯ ಮೇಲೆ ಗೌರವಧನ ನೀಡಲಾಗುವುದು. ಈ ಹುದ್ದೆಗಳು ತಾತ್ಕಾಲಿಕವಾಗಿರುವುದರಿಂದ ಯಾವುದೇ ಮೀಸಲಾತಿಗಳು ಅನ್ವಯಿಸುವುದಿಲ್ಲ.

ಅರ್ಹ ಅಭ್ಯರ್ಥಿಗಳು ತಮ್ಮ ವೈಯಕ್ತಿಕ ವಿವರವನ್ನೊಳಗೊಂಡ ಅರ್ಜಿ ನಮೂನೆ, ಎಸ್.ಎಸ್.ಎಲ್.ಸಿ ಅಂಕ ಪಟ್ಟಿ, ಹುದ್ದೆಗೆ ನಿಗದಿಪಡಿಸಿದ ಹಾಗೂ ವಿದ್ಯಾರ್ಹತೆಯ ಅಂಕಪಟ್ಟಿಗಳು, ಅನುಭವ ಪ್ರಮಾಣ ಪತ್ರಗಳು, ಕನಿಷ್ಠ 06 ತಿಂಗಳು ಕಂಪ್ಯೂಟರ್ ತರಬೇತಿ ಪಡೆದಿರುವ ಬಗ್ಗೆ ಪ್ರಮಾಣ ಪತ್ರ, ಕಡ್ಡಾಯವಾಗಿ ತಹಶೀಲ್ದಾರರವರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ ಲಗತ್ತಿಸಬೇಕು. ಈ ಎಲ್ಲಾ ಅಗತ್ಯ ದಾಖಲಾತಿಗಳನ್ನು ಕಡ್ಡಾಯವಾಗಿ ದೃಢಿಕರಿಸಿ ಸಲ್ಲಿಸಬೇಕು. ಇಲ್ಲದಿದ್ದಲ್ಲಿ ಅಂತಹ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

ಅರ್ಹ ವಿದ್ಯಾರ್ಹತೆ ಹೊಂದಿರುವ ಸರ್ಕಾರ ನಿಗದಿಪಡಿಸಿರುವ ವಯೋಮಿತಿಯೊಳಗಿನ ಮಹಿಳಾ ಅಭ್ಯರ್ಥಿಗಳು ಅರ್ಜಿಗಳನ್ನು 2025ರ ಜನವರಿ 9 ರೊಳಗೆ ಸಾಯಂಕಾಲ 5.30 ಗಂಟೆಯೊಳಗಾಗಿ ಪಡೆದುಕೊಂಡು, ಅಗತ್ಯ ಎಲ್ಲಾ ದಾಖಲಾತಿಗಳೊಂದಿಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಭವನ, ಕೊಪ್ಪಳ ರವರ ಕಾರ್ಯಾಲಯದಲ್ಲಿ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಕೆಲಸ ಅವಧಿಯೊಗೆ ಬಂದು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲ್ಯಾಣ ಕರ್ನಾಟಕದ 18 ಹೊಸ ತಾಲ್ಲೂಕುಗಳಲ್ಲಿ ಪ್ರಜಾಸೌಧ ನಿರ್ಮಾಣ– ಅಜಯ್ ಸಿಂಗ್

ಬೆಳಗಾವಿ ಸುವರ್ಣ ವಿಧಾನಸೌಧ : ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಹೊಸದಾಗಿ ರಚಿಸಲಾಗಿರುವ ಎಲ್ಲ 18 ತಾಲ್ಲೂಕುಗಳಲ್ಲಿ ಪ್ರಜಾಸೌಧ ನಿರ್ಮಾಣ ಮಾಡಲು ನಿರ್ಧ–ರಿಸಲಾಗಿದ್ದು, ಶೀಘ್ರದಲ್ಲಿಯೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯ್ ಸಿಂಗ್ ಅವರು ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯಲಿ ಬುಧವಾರ ಉತ್ತರ ಕರ್ನಾಟಕದ ವಿಷಯಗಳ ಬಗ್ಗೆ ನಡೆದ ಚರ್ಚೆ ಸಂದರ್ಭದಲ್ಲಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ನೂತನವಾಗಿ ರಚಿಸಲಾಗಿರುವ 18 ಹೊಸ ತಾಲ್ಲೂಕುಗಳಲ್ಲಿ ಕೆಕೆಆರ್‌ಡಿಬಿ ಅನುದಾನ ವಿನಿಯೋಗಿಸಿ ಹೊಸದಾಗಿ ಪ್ರಜಾಸೌಧ ನಿರ್ಮಾಣ ಮಾಡಲಾಗುತ್ತಿದ್ದು, ಬರುವ ತಿಂಗಳಿನಲ್ಲಿ ಟೆಂಡರ್ ಪ್ರಕ್ರಿಯೆ ನಡೆಯಲಿದೆ. ಪ್ರಸಕ್ತ ವರ್ಷ ಕಲ್ಯಾಣ ಕರ್ನಾಟಕಕ್ಕೆ ಸರ್ಕಾರ 5000 ಕೋಟಿ ರೂ. ಅನುದಾನ ಒದಗಿಸಿದೆ ಎಂದರು. ಕಲ್ಯಾಣ ಕರ್ನಾಟಕದ ರಾಯಚೂರು, ಕಲಬುರ್ಗಿ ಜಿಲ್ಲೆಯಲ್ಲಿ ಶಿಕ್ಷಣದಲ್ಲಿ ಹಿಂದುಳಿದಿದ್ದು, ಈ ಭಾಗಕ್ಕೆ ನೀಡಲಾಗಿರುವ ಅನುದಾನದಲ್ಲಿ ಶೇ. 25 ರಷ್ಟು ಅನುದಾನವನ್ನು ಶಿಕ್ಷಣ ಕ್ಷೇತ್ರಕ್ಕೆ ಖರ್ಚು ಮಾಡಲು ನಿರ್ಧರಿಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿನ ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಪ್ರಾರಂಭಿಸಲು ಸರ್ಕಾರ ಕೈಗೊಂಡ ನಿರ್ಣಯದಂತೆ ಈ ವ್ಯಾಪ್ತಿಯ 1008 ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಶಿಕ್ಷಣ ಪ್ರಾರಂಭಿಸಲಾಗಿದೆ, ಸುಮಾರು 40 ಸಾವಿರ ಮಕ್ಕಳು ದಾಖಲಾಗಿದ್ದಾರೆ. ಈ ನಿಟ್ಟಿನಲ್ಲಿ ಶಿಕ್ಷಣ ಗುಣಮಟ್ಟದ ಸುಧಾರಣೆಯ ಪರಿಣಾಮ ಮುಂದಿನ ಮೂರ್‍ನಾಲ್ಕು ವರ್ಷಗಳ ಬಳಿಕ ಕಾಣಬಹುದಾಗಿದೆ. ಕಲ್ಯಾಣ ಕರ್ನಾಟಕದಲ್ಲಿನ ಶಾಲೆಗಳಲ್ಲಿ ಶಿಕ್ಷಕರ ಕೊರತೆ ನೀಗಿಸಲು ಕೆಕೆಆರ್‌ಡಿಬಿ ವತಿಯಿಂದ 18.34 ಕೋಟಿ ರೂ. ವೆಚ್ಚದಲ್ಲಿ 2618 ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲಾಗಿದೆ, ಅಲ್ಲದೆ ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿನ ಹಿಂದುಳಿಯುವಿಕೆಯ ಕಾರಣ, ಪರಿಹಾರ, ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ, ವರದಿ ಸಲ್ಲಿಸಲು ಎಕ್ಸ್‌ಪರ್ಟ್ ಎಜುಕೇಶನ್ ಕಮಿಟಿ ರಚಿಸಲಾಗಿದೆ. ಡಾ. ಡಿ.ಎಂ. ನಂಜುಂಡಪ್ಪ ಅವರ ವರದಿಯಂತೆ ಆರೋಗ್ಯ ಕ್ಷೇತ್ರದ ಸುಧಾರಣೆಗಾಗಿ 857 ಕೋಟಿ ರೂ. ಅನುದಾನ ಒದಗಿಸಲಾಗಿದೆ. ಈ ಭಾಗದಲ್ಲಿನ ನಿರುದ್ಯೋಗ ಸಮಸ್ಯೆ ನೀಗಿಸಲು ಉದ್ಯೋಗ ಆವಿಷ್ಕಾರ ಕಾರ್ಯಕ್ರಮ ರೂಪಿಸಿದ್ದು, ಸುಮಾರು 25 ಸಾವಿರ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಕಲಿಕೆ ಜೊತೆಗೆ ಕೌಶಲ್ಯ ತರಬೇತಿ ನೀಡಲು ಕೊಪ್ಪಳ ಮತ್ತು ಕಲಬುರ್ಗಿಯಲ್ಲಿ 60 ಕೋಟಿ ರೂ. ವೆಚ್ಚದಲ್ಲಿ ಕೌಶಲ್ಯ ಅಭಿವೃದ್ಧಿ ಕೇಂದ್ರ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೆಕೆಆರ್‌ಡಿಬಿ ವತಿಯಿಂದ 90 ಕೋಟಿ ರೂ. ವೆಚ್ಚದಲ್ಲಿ 224 ಹೊಸ ಬಸ್ ಖರೀದಿಸಲು ಕ್ರಮ ವಹಿಸಲಾಗಿದೆ. 156 ಕೋಟಿ ರೂ. ವೆಚ್ಚದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 34 ಹೊಸ ಹಾಸ್ಟೆಲ್‌ಗಳನ್ನು ನಿರ್ಮಿಸಲಾಗಿದೆ, ಅಲ್ಲದೆ ಪ.ಜಾತಿ, ಪ.ಪಂಗಡದ ಹಾಸ್ಟೆಲ್‌ಗಳ ನಿರ್ಮಾಣಕ್ಕೆ 150 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ ಎಂದರು. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಸರ್ಕಾರ ಪ್ರತ್ಯೇಕ ಸಚಿವಾಲಯ, ಪ್ರತ್ಯೇಕ ಇಂಜಿನಿಯರಿಂಗ್ ವಿಭಾಗ, ಇಂಟರ್‌ನಲ್ ಆಡಿಟ್ ಡಿವಿಜನ್ ಆಗಬೇಕು. ಈ ಭಾಗದಲ್ಲಿ ಹೆಚ್ಚು ತೊಗರಿ ಬೆಳೆಯುವುದರಿಂದ ತೊಗರಿ ಬೆಳೆಯ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ವಿಶೇಷ ಪ್ಯಾಕೇಜ್ ನೀಡಬೇಕು. ಮಲ್ಲಾಬಾದ್ ಏತನೀರಾವರಿ ಯೋಜನೆ ಆಗಬೇಕು. ಕೇಂದ್ರ ಸರ್ಕಾರದಿಂದ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಆಗಬೇಕು ಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಅಜಯ್ ಸಿಂಗ್ ಮನವಿ ಮಾಡಿದರು.

## ಕೊಡಗಾನೂರ ಗ್ರಾಂಪಂ ಮತ್ತೇ ಜೆಡಿಎಸ್ ತೆಕ್ಕೆಗೆ ಗ್ರಾಂಪಂ ಅಧ್ಯಕ್ಷರಾಗಿ ಶಾಂತಮ್ಮ ಅವಿರೋಧ ಆಯ್ಕೆ



ತಾಳಿಕೋಟೆ – ತಾಲೂಕಿನ ಕೊಡಗಾನೂರ ಗ್ರಾಂ ಪಂಚಾಯ್ತಿಯ ನೂತನ ಅಧ್ಯಕ್ಷರಾಗಿ ನಾವದಗಿಯ ಶ್ರೀಮತಿ ಶಾಂತಮ್ಮ ಮಲಕನಗೌಡ ಪಾಟೀಲ ಅವರು ಬುಧವಾರರಂದು ನಡೆದ ಅಧ್ಯಕ್ಷ ಆಯ್ಕೆ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಎರಡನೇ ಭಾರಿಗೆ ಕೊಡಗಾನೂರ ಗ್ರಾಂಪಂ ಜೆಡಿಎಸ್ ತೆಕ್ಕೆಗೆ ಸೇರಿದೆ.

ಈ ಹಿಂದಿನ ಅಧ್ಯಕ್ಷರಾಗಿದ್ದ ಶ್ರೀಮತಿ ಅಶ್ವಿನಿ ಸಾಹೇಬಗೌಡ ಬಿರಾದಾರ ಅವರ ರಾಜೀನಾಮೆಯಿಂದ ತೆರವಾಗಿದ್ದ ಈ ಮುಂದಿನ ಅವಧಿಗಾಗಿ ಅಧ್ಯಕ್ಷ ಆಯ್ಕೆ ಚುನಾವಣೆಗೆ ಶ್ರೀಮತಿ ಶಾಂತಮ್ಮ ಮಲಕನಗೌಡ ಪಾಟೀಲ ಅವರು ಒಬ್ಬರೇ ನಾಮ ಪತ್ರ ಸಲ್ಲಿಸಿದ್ದ–ರಿಂದ ಅವಿರೋಧವಾಗಿ ಆಯ್ಕೆಯಾಗಲು ಕಾರಣವಾಯಿತು.

ಅಧ್ಯಕ್ಷ ಆಯ್ಕೆ ಚುನಾವಣೆ ಪ್ರಕ್ರೀಯೇದಂತೆ ಬೆಳಿಗ್ಗೆ ಯಿಂದ ನಾಮ ಪತ್ರ ಸಲ್ಲಿಕೆ, ನಾಮಪತ್ರ ಪರಿಶೀಲನೆ, ನಂತರ ಅವಿರೋಧ ಆಯ್ಕೆ ಘೋಷಣೆ ನಡೆಯಿತು.

22 ಜನ ಸದಸ್ಯರ ಭಲ ಹೊಂದಿರುವ ಕೊಡಗಾನೂರ ಗ್ರಾಂಪಂ ಅಧ್ಯಕ್ಷ ಆಯ್ಕೆ ಚುನಾವಣೆಯಲ್ಲಿ 14 ಜನ ಸದಸ್ಯರು ಪಾಲ್ಗೊಂಡಿದ್ದರು.

ಚುನಾವಣಾಧಿಕಾರಿಯಾಗಿ ತಾಳಿಕೋಟೆ ತಾಪಂ ಇಓ ನಿಂಗಪ್ಪ ಮಸಳಿ, ಸಹಾಯಕರಾಗಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಅನೀಲಕುಮಾರ ಕಿರಣಗಿ, ಕಾರ್ಯದರ್ಶಿ ಎಚ್.ಜಿ.ಚೌದ್ರಿ, ಮಹಾಂತಗೌಡ ದೊರೆಗೋಳ, ಬಸನಗೌಡ ಚೌದ್ರಿ, ಶಾಂತಪ್ಪ ಕಟ್ಟಿಮನಿ, ವಿರೇಶ ಹೊಸಮನಿ, ಅವರು ಕಾರ್ಯ ನಿರ್ವಹಿಸಿದರು.

ಈ ಸಮಯದಲ್ಲಿ ಸದಸ್ಯರುಗಳಾದ ಶ್ರೀಮತಿ ಬಸಮ್ಮ ನಾಯ್ಕೋಡಿ, ಆನಂದಗೌಡ ಪಾಟೀಲ, ವಿರೇಶಗೌಡ ಪಾಟೀಲ(ಕಾರನೂರ), ಶ್ರೀಮತಿ ಶಾಂತಮ್ಮ ಕಾರನೂರ, ಮಲ್ಲನಗೌಡ ಇಬ್ರಾಹಿಂಪೂರ, ಮಾದೇವಿ ದೊಡಮನಿ, ಬಸನಗೌಡ ಬಿರಾದಾರ, ಭೀಮನಗೌಡ ತಂಗಡಗಿ, ಶ್ರೀಮತಿ ಅಶ್ವಿನಿ ಬಿರಾದಾರ, ಭೀಮು ನಾಯಕ, ಶಶಿಕಲಾ ನಾಯಕ, ಮಲ್ಲಮ್ಮ ಬಿರಾದಾರ, ನಾಗಮ್ಮ ಬಪ್ಪರಗಿ, ಮೊದಲಾದವರು ಇದ್ದರು.

**ವಿಜಯೋತ್ಸವ**

ಕೊಡಗಾನೂರ ಗ್ರಾಂಪಂ ನೂತನ ಅಧ್ಯಕ್ಷರಾಗಿ ಶ್ರೀಮತಿ ಶಾಂತಮ್ಮ ಪಾಟೀಲ ಅವರು ಅವಿರೋಧವಾಗಿ ಆಯ್ಕೆಯಾಗುತ್ತಿದ್ದಂತೆ ಬೆಂಬಲಿಗರು ಹಾಗೂ ಮುಖಂಡರುಗಳು, ಜೆಡಿ–ಎಸ್ ಪಕ್ಷದ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಈ ಸಮಯದಲ್ಲಿ ಮುಖಂಡರುಗಳಾದ ಜಿಪಂ ಮಾಜಿ ಸದಸ್ಯ ಬಸನಗೌಡ ವಣ–ಕ್ಯಾಳ, ಎಂ.ಎಂ.ಪಾಟೀಲ, ಮಡುಸಾಹುಕಾರ ಬಿರಾದಾರ, ರಾಜುಗೌಡ ಕೊಳೂರ, ಪ್ರಭುಗೌಡ ಲಕ್ಕುಂಡಿ, ಅಶೋಕ ಅಸ್ಕಿ, ಬಸನಗೌಡ ಹಳ್ಳಿಪಾಟೀಲ, ಸಾಹೇಬಗೌಡ ಬಿರಾದಾರ, ಮುತ್ತು ಜಾಗೀರದಾರ, ಈಸುಗೌಡ ಲಕ್ಕುಂಡಿ, ಬಸನಗೌಡ ಲಕ್ಕುಂಡಿ, ಪ್ರಭುಗೌಡ ಕಾರಗನೂರ, ಸಿದ್ದನಗೌಡ ಲಕ್ಕುಂಡಿ, ರುದ್ರಪ್ಪಣ್ಣ ನಾಯ್ಕೋಡಿ, ಗೌಡಪ್ಪಗೌಡ ಮಾಳಿ, ಶಾಂತಗೌಡ ಇಬ್ರಾಹಿಂಪೂರ, ಬಾಪುಗೌಡ ಪಾಟೀಲ, ಶಿವಲಿಂಗಯ್ಯ ಹಿರೇಮಠ ಮೊದಲಾದವರು ಉಪಸ್ಥಿತರಿದ್ದರು.

## ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

ಕಾರವಾರ – ಗ್ರಾಮಾಭಿವೃದ್ಧಿ ಹಾಗೂ ಸ್ವ–ಉದ್ಯೋಗ ತರಬೇತಿ (ರುಡ್‌ಸೆಟ್) ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಖಾಲಿ ಇರುವ 1 ಉಪನ್ಯಾಸಕರು ಹುದ್ದೆಗೆ ಅರ್ಜಿ ಆಹ್ವಾನಿಲಾಗಿದೆ.

M.A. in Psychology/ M.A. in Journalism/ M.A. in Rural Development/ M.A. in Sociology/ M.Com/ B.Sc in Agriculture and allied subjects, /MSW /BBM /B.A /B.Sc with B.Ed. CxÀªÁ M.Ed ವಿದ್ಯಾರ್ಹತೆಯನ್ನು ಉಳ್ಳ ಅರ್ಹ ಯುವಕ/ ಯುವತಿಯರು ಕನ್ನಡ ಹಾಗೂ ಇಂಗ್ಲೀಷ್ ಭಾಷೆಯನ್ನು ಬಲ್ಲವರು, ಟೈಪಿಂಗ್ ಮಾಡುವ ಪರಿಣಿತಿಯನ್ನು ಹೊಂದಿರಬೇಕು. ಕಂಪ್ಯೂಟರ್‌ನಲ್ಲಿ MS Word, MS Excel ಹಾಗೂ MS Powerpoint ನಲ್ಲಿ ಪರಿಣಿತಿಯನ್ನು ಹೊಂದಿರುವ 22 ರಿಂದ 30 ವಯೋಮಾನದ ಯುವಕ/ ಯುವತಿಯರು ಅರ್ಜಿಯನ್ನು ಸಲ್ಲಿಸಬಹುದು.

ಆಸಕ್ತ ಅಭ್ಯರ್ಥಿಗಳು ತಮ್ಮ ಬಯೋಡಾಟವನ್ನು ಡಿ.28 ರೊಳಗಾಗಿ ಇ–ಮೇಲ್ rudsetinlm@gmail.com ಮುಖಾಂತರ ಮಾತ್ರ ಕಳುಹಿಸಬಹುದು. ಪ್ರತಿ ತಿಂಗಳಿಗೆ ವೇತನ ರೂ. 30,000 ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9113880324, 9686172444 ನ್ನು ಸಂಪರ್ಕಿಸುವಂತೆ ರುಡ್‌ಸೆಟ್ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸದ್ದಾರೆ.

## ಮಂಗನ ಕಾಯಿಲೆ ಹರಡದಂತೆ ಅಗತ್ಯ ಕ್ರಮ ಕೈಗೊಳ್ಳಿ : ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ

ಕಾರವಾರ – ಮಂಗನ ಕಾಯಿಲೆ ಬಾಧಿತ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಾದರಿ ಪರೀಕ್ಷೆ ಕೈಗೊಂಡು, ಕಾಯಿಲೆ ಹರಡದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ನಿರ್ದೇಶನ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮಂಗನ ಕಾಯಿಲೆ ಪ್ರಸರಣ ತಡೆಯುವ ಮತ್ತು ನಿಯಂತ್ರಿಸುವ ಜಿಲ್ಲಾ ಮಟ್ಟದ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಂಗನ ಕಾಯಿಲೆ ಬಾಧಿತ ಪ್ರದೇಶಗಳಲ್ಲಿನ ಮನೆಗಳಿಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ನಿಯಮಿತವಾಗಿ ಭೇಟಿ ನೀಡಿ ಜ್ವರದ ಪ್ರಕರಣಗಳನ್ನು ಪತ್ತೆ ಹಚ್ಚುವ ಕೆಲಸ ಮಾಡುವುದರ ಜೊತೆಗೆ ಶಾಲಾ ಕಾಲೇಜುಗಳಲ್ಲಿ ಮತ್ತು ಪ್ರತಿ




ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಂಗನ ಕಾಯಿಲೆ ಕುರಿತು ಜನರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು ಎಂದರು.

ಪ್ರತಿ ತಿಂಗಳು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಂದ ವರದಿ ಪಡೆದು ಆ ಪ್ರದೇಶದಲ್ಲಿನ ಮಾಹಿತಿ ಸಂಗ್ರಹಿಸಿ ಶಂಕಿತ ಪ್ರಕರಣಗಳು ಇದ್ದಲ್ಲಿ ಕೂಡಲೇ ಆರೋಗ್ಯ ಇಲಾಖೆಯ ಅಧಿಕಾರಿಗಳು ತೆರಳಿ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳುವಂತೆ ತಿಳಿಸಿದ ಅವರು, ತಾಲೂಕು ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲು ಅಗತ್ಯ ಹಾಸಿಗೆಯನ್ನು ಮೀಸಲಿಡುವಂತೆ ಸೂಚನೆ ನೀಡಿದರು.

ಇಲಾಖೆಗಳ ನಡುವೆ ಸಮನ್ವಯತೆ ಮುಖ್ಯವಾಗಿದ್ದು, ಆರೋಗ್ಯ ಇಲಾಖೆಯ ಜೊತೆಗೆ ಅರಣ್ಯ, ಪಶುಪಾಲನಾ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಶಿಕ್ಷಣ ಇಲಾಖೆಗಳು ಸಮನ್ವಯದಿಂದ ಮಂಗನ ಕಾಯಿಲೆ ನಿಯಂತ್ರಿಸಲು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಜುಲೈ 1 ರಿಂದ ಡಿ. 16 ರವರೆಗೆ 63 ಮಾನವ ಮಾದರಿ ಪರೀಕ್ಷೆ ಮಾಡಲಾಗಿದ್ದು, ಯಾವುದೇ ಧನಾತ್ಮಕ ಪ್ರಕರಣಗಳು ಕಂಡು ಬಂದಿಲ್ಲ ಹಾಗೂ ಅಗತ್ಯ ಡೇಪಾ ತೈಲ್‌ದ ದಾಸ್ತಾನವಿದ್ದು, ತಾಲೂಕು ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಿತರಿಸಲಾಗಿದೆ ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಅರ್ಚನಾ ನಾಯ್ಕ ಮಾಹಿತಿ ನೀಡಿದರು.

ಜ್ವರ ಮತ್ತು ರೋಗ ಲಕ್ಷಣಗಳು ಕಾಣಿಸಿಕೊಂಡ ತಕ್ಷಣ ಹತ್ತಿರದ ಆರೋಗ್ಯ ಕೇಂದ್ರದ ವೈದ್ಯರನ್ನು ಸಂಪರ್ಕಿಸಬೇಕು. ವಾಸಸ್ಥಳದ ಸುತ್ತಮುತ್ತ ತೋಟ, ಕಾಡು, ಗದ್ದೆಯಲ್ಲಿ ಮಂಗ ಸತ್ತಿರುವುದು ಗಮನಕ್ಕೆ ಬಂದೊಡನೆ ಸ್ಥಳೀಯ ಆರೋಗ್ಯಾಧಿಕಾ–ರಿಗಳು /ಆರೋಗ್ಯ ಇಲಾಖೆ ನೌಕರರಿಗೆ/ ಆಶಾ ಕಾರ್ಯಕರ್ತೆಯರಿಗೆ ತಿಳಿಸಬೇಕು. ಮಂಗ ಸಾಯುತ್ತಿರುವ ಕಾಡಿನಲ್ಲಿ ಸಂಚ–ರಿಸುವಾಗ ಮೈ ತುಂಬಾ ಬಟ್ಟೆ ಧರಿಸಿ, ಆರೋಗ್ಯ ಇಲಾಖೆಯಿಂದ ವಿತರಿಸುವ ಡೇಪಾ ತೈಲವನ್ನು ಕೈಕಾಲುಗಳಿಗೆ ಲೇಪಿಸಿಕೊಂಡು ಹೋಗಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನೀರಜ್, ಆರ್‌ಸಿಎಚ್ ಅಧಿಕಾರಿ ಡಾ.ನಟ–ರಾಜ್, ಕುಟುಂಬ ಕಲ್ಯಾಣಾಧಿಕಾರಿ ಡಾ. ಅನ್ನಪೂರ್ಣ ವಸ್ತ್ರದ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಕ್ಯಾಪ್ಟನ್ ಡಾ. ರಮೇಶ್ ರಾವ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ. ಮೋಹನ ಕುಮಾರ್ ಕೆ.ಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ವಿರೂಪಾಕ್ಷಗೌಡ ಪಾಟೀಲ್ ವಿವಿಧ ಇಲಾಖೆಯ ಅಧಿಕಾ–ರಿಗಳು ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತಿತ್ತರರು ಇದ್ದರು.

## ವಕ್ಫ್ ಆಸ್ತಿ ವಿಚಾರಗಳಲ್ಲಿ ಸುಳ್ಳು ಕಥೆಗಳನ್ನು ಸೃಷ್ಟಿಸಿ ಹರಡಿಸಲಾಗುತ್ತಿದೆ

# ಎಲ್ಲ ರೈತರ ಹಿತಕಾಯಲು ಸರ್ಕಾರ ಬದ್ಧವಾಗಿದೆ- ಕಂದಾಯ ಸಚಿವ ಕೃಷ್ಣ ಭೈರೇಗೌಡ

ಬೆಳಗಾವಿ ಸುವರ್ಣ ವಿಧಾನಸೌಧ : ರಾಜ್ಯದಲ್ಲಿ ವಕ್ಫ್ ಆಸ್ತಿ ವಿಚಾರಗಳಲ್ಲಿ ಸುಳ್ಳು ಕಥೆಗಳನ್ನು ಸೃಷ್ಟಿಸಿ, ಸಾರ್ವಜನಿಕರು ಹಾಗೂ ರೈತರಲ್ಲಿ ಗೊಂದಲ ಮೂಡಿಸುವ ಪ್ರಯತ್ನ ನಡೆದಿದ್ದು, ಆದರೆ ಎಲ್ಲ ರೈತರ ಹಿತ ಕಾಯಲು ನಮ್ಮ ಸರ್ಕಾರ ಬದ್ಧವಾಗಿದ್ದು, ಯಾವುದೇ ರೈತರಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಸ್ಪಷ್ಟಪಡಿಸಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯಲಿ ಬುಧವಾರ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದ ಗೊಂದಲಗಳಿಗೆ ಸರ್ಕಾರದ ಪರವಾಗಿ ಉತ್ತರ ನೀಡಿದರು.

ವಕ್ಫ್ ಆಸ್ತಿಗಳ ವಿಚಾರದಲ್ಲಿ ಜನರ ಮನಸ್ಸಿನಲ್ಲಿ ಗೊಂದಲ ಸೃಷ್ಟಿಸಿರುವುದರಿಂದ, ಸಾಮರಸ್ಯದಿಂದ ಬಾಳಲು ಸತ್ಯ ಯಾವುದು ಸುಳ್ಳು ಯಾವುದು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕಿದೆ. ವಕ್ಫ್ ಕಾಯ್ದೆ 1913 ರಲ್ಲಿ ಬ್ರಿಟೀಷರು ಮಾಡಿದ್ದು, ನಂತರದಲ್ಲಿ ಮೈಸೂರು ಮಹಾರಾಜರ ಕಾಲದಲ್ಲಿಯೂ ಮಾಡಲಾಗಿತ್ತು. ಸ್ವಾತಂತ್ರ ಪೂರ್ವದಲ್ಲಿಯೇ ವಕ್ಫ್ ಕಾಯ್ದೆಯನ್ನು ಮಾಡಲಾಗಿದೆ. ಸರ್ಕಾರದಲ್ಲಿ ಲಭ್ಯವಿರುವ ದಾಖಲೆಗಳಂತೆ ರಾಜ್ಯದಲ್ಲಿ 1.12 ಲಕ್ಷ ಎಕರೆ ವಕ್ಫ್ ಗೆ ಸೇರಿದ್ದು, ಆದರೆ 20,524 ಎಕರೆ ಮಾತ್ರ ವಕ್ಫ್ ಗೆ ಸಿಕ್ಕಿದೆ. ಇನ್ನೂ ಸುಮಾರು 90 ಸಾವಿರ ಎಕರೆಯಷ್ಟು ಪ್ರದೇಶ ವಕ್ಫ್‌ಗೆ ದೊರೆತಿಲ್ಲ. ಕಾರಣ ಆಗ ಪಹಣಿಯಲ್ಲಿ ವಕ್ಫ್ ಹೆಸರಿನಲ್ಲಿ ನಮೂದಾಗದೇ ಇದ್ದುದರಿಂದ ದಾನ ಕೊಟ್ಟವರ ಹೆಸರಿನವರಲ್ಲಿ ಅಥವಾ ಅವರ ಕುಟುಂಬದವರ ಹೆಸರಿನಲ್ಲಿಯೇ ಮುಂದುವರೆದಿದೆ. ಇನಾಮ್ ರಿಗ್ರಾಂಟ್‌ನಲ್ಲಿ, ಇನಾಮ್ ರಿಫಾರ್ಮ್ಸ್ ನಂತರವು ಸುಮಾರು 73 ಸಾವಿರ ಎಕರೆ ಬಹುತೇಕ ರೈತರ ವಶದಲ್ಲಿಯೇ ಇದೆ. ಆದಾಗ್ಯೂ ಈ ಎಲ್ಲ ರೈತರ ಹಿತಕಾಯಲು ಸರ್ಕಾರ ಬದ್ಧವಾಗಿದೆ. ಯಾವುದೇ ರೈತರಿಗೆ ಅನ್ಯಾಯವಾಗಲು ಸರ್ಕಾರ ಅವಕಾಶ ನೀಡುವುದಿಲ್ಲ. ರೈತರಿಗೆ



ನೀಡಿರುವ ಎಲ್ಲ ನೋಟಿಸ್‌ಗಳನ್ನು ಈಗಾಗಲೆ ಸರ್ಕಾರ ಹಿಂಪಡೆದಿದ್ದು, ಇನ್ನೂ ಉಳಿದಿದ್ದರೆ, ಅವುಗಳನ್ನು ಕೂಡ ಹಿಂಪಡೆಯಲಾಗುವುದು ಎಂದು ಸ್ಪಷ್ಟನೆ ನೀಡಿದ ಸಚಿವ ಕೃಷ್ಣ ಭೈರೇಗೌಡ ಅವರು, ಒತ್ತುವಾರಿಯಾಗಿರುವ 19987 ಎಕರೆ ವಕ್ಫ್ ಭೂಮಿಯನ್ನು, ಅದೂ ಕೂಡ ಸರ್ಕಾರ ಈಗಾಗಲೆ ನೀಡಿರುವ ಖಬರಸ್ತಾನ್, ದರ್ಗಾ ಮಸೀದಿಗಳಿಗೆ ನೀಡಿರುವ ಭೂಮಿಯನ್ನು ಕೆಲವು ಖಾಸಗಿಯವರು ಒತ್ತುವರಿ ಮಾಡಿದ್ದಾರೆ, ಈ ಭೂಮಿಯನ್ನು ಮಾತ್ರ ವಕ್ಫ್‌ಗೆ ಹಸ್ತಾಂತರಿಸಲು ವಕ್ಫ್ ಮಂಡಳಿ ಕೇಳಿಕೊಂಡಿದೆ ಎಂದರು.

ರೈತರಿಗೆ ನೋಟಿಸ್ ನೀಡುವ ಪ್ರಕ್ರಿಯೆ ಈ ಹಿಂದಿನಿಂದಲೂ ನಡೆದುಬಂದಿರುವ ಪ್ರಕ್ರಿಯೆಯಾಗಿದ್ದು, ಈ ಹಿಂದಿನ ಸರ್ಕಾರದ ಕಾಲದಲ್ಲಿ 4500 ಆಸ್ತಿಗಳನ್ನು ವಕ್ಫ್‌ ಖಾತೆ ಬದಲಾವಣೆ ಮಾಡಲಾಗಿದೆ. ಆದರೆ ನಮ್ಮ ಸರ್ಕಾರ ಬಂದ ಬಳಿಕ ಕೇವಲ 600 ಆಸ್ತಿಗಳನ್ನು ಮಾತ್ರ ವಕ್ಫ್‌ ಖಾತೆ ಬದಲಾವಣೆ ಮಾಡಲಾಗಿದೆ. ವಕ್ಫ್ ಕಾಯ್ದೆ ಕೇಂದ್ರ ಸರ್ಕಾರ ಮಾಡಿದ್ದು, ರಾಜ್ಯ ಸರ್ಕಾರ ಮಾಡಿಲ್ಲ, ಆದಾಗ್ಯೂ ರೈತರಲ್ಲಿ ಸುಳ್ಳು ಸುದ್ದಿ ಹರಡಿ ರೈತರನ್ನು ಎತ್ತಿಕಟ್ಟುವ ಕಾರ್ಯ ಆಗುತ್ತಿದೆ ಎಂದು ಆರೋಪಿಸಿದರು.

2016 ರಲ್ಲಿ ಕೇಂದ್ರ ಸರ್ಕಾರ ಮಾಡೆಲ್ ವಕ್ಫ್ ರೂಲ್ಸ್ ಮಾಡಿ, ವಕ್ಫ್ ಆಸ್ತಿಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸಲು ನಿರ್ದೇಶನ ಕೊಟ್ಟಿದೆ ಎಂದು ಸಚಿವರು ಹೇಳಿದರು.

ವಿರೋಧಪಕ್ಷ ವಕ್ಫ್ ಆಸ್ತಿ ವಿಚಾರಗಳಿಗೆ ಮಾಡಿರುವ ಪ್ರತಿಯೊಂದು ಪ್ರಕರಣಗಳಿಗೂ ಸ್ಪಷ್ಟನೆ ನೀಡಿದ ಕೃಷ್ಣ ಭೈರೇಗೌಡ ಅವರು, ಬಿಜಾಪುರ ಜಿಲ್ಲೆ ವನವಾಡದಲ್ಲಿ 1200 ಎಕರೆ ವಕ್ಫ್ ಆಸ್ತಿಯಾಗಿದೆ ಎಂದು ಸುಳ್ಳು ಸುದ್ದಿ ಹರಡಿ, ರೈತರ ನೆಮ್ಮದಿ ಕೆಡಿಸಿದರು, ಆದ-'ರೆ ವಾಸ್ತವವಾಗಿ ಕೇವಲ 11 ಎಕರೆಗೆ ಸಂಬಂಧಿಸಿದಂತೆ ಮಾತ್ರ ರೈತರಿಗೆ ನೋಟಿಸ್ ನೀಡಲಾಗಿತ್ತು. ಆಳಂದದಲ್ಲಿ 2020 ರಲ್ಲಿ ಇದ್ದ ಸರ್ಕಾರದ ಅವಧಿಯಲ್ಲಿ ವಕ್ಫ್ ಆಸ್ತಿ ಎಂದು ಆಗಿದ್ದ ಬೀರಲಿಂಗೇಶ್ವರ ದೇವಸ್ಥಾನವನ್ನು ನಮ್ಮ ಸರ್ಕಾರ ಬೀರಲಿಂಗೇಶ್ವರ ದೇವಸ್ಥಾನ ಎಂದು ಬದಲಿಸಿ, ಆಸ್ತಿ ಮಾಡಿಕೊಟ್ಟಿದ್ದೇವೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸರ್.ಎಂ. ವಿಶ್ವೇಶ್ವರಯ್ಯ ಅವರು ಓದಿದ ಶಾಲೆಯೂ ವಕ್ಫ್ ಆಸ್ತಿಯೆಂದು ಸುಳ್ಳು ಸುದ್ದಿ ಹರಡಿಸಿದ್ದು, 2019 ರಲ್ಲಿ ಇದ್ದ ಸರ್ಕಾರದ ಅವಧಿಯಲ್ಲಿ ಇಲ್ಲಿನ ಸಮೀಪದ ದರ್ಗಾ ವಕ್ಫ್ ಆಸ್ತಿಯಾಗಿತ್ತು. ಸಮೀಪದಲ್ಲಿಯೇ ಶಾಲೆ ಇದ್ದುದರಿಂದ ಒಂದೇ ಸರ್ವೆ ನಂ. ಬರುವುದರಿಂದ ಶಾಲೆಯನ್ನು ವಕ್ಫ್ ಆಸ್ತಿ ಎಂದು ಹೇಳಿದ್ದರು. ಆದರೆ ನಮ್ಮ ಸರ್ಕಾರ ಇದೇ ವರ್ಷದ ನವೆಂಬರ್ 08 ರಂದು ಉಪವಿಭಾಗಾಧಿಕಾರಿಗಳು ಆದೇಶ ಮಾಡಿ, ಶಾಲೆಗೆ ಸಂಬಂಧಿಸಿದ ಭೂಮಿಯನ್ನು ಶಾಲೆಯ ಖಾತೆಗೇ ಮಾಡಿಕೊಟ್ಟಿದೆ. ಶ್ರೀರಂಗಪಟ್ಟಣದಲ್ಲಿ ದೊಡ್ಡ ಹಾರೋಹಳ್ಳಿ ಗ್ರಾಮದಲ್ಲಿ 12 ಗುಂಟೆ ಜಮೀನಿನಲ್ಲಿ ಜಾಮಾ ಮಸೀದಿ ಇದೆ. ಆದರೆ ತಹಸಿಲ್ದಾರ್ ಅವರು ಮಾಡಿದ ಪ್ರಮಾದದಿಂದ ಅಂದರೆ ಕಣ್ತಪ್ಪಿನಿಂದ ಮಾಡಿದ ಲೋಪದಿಂದ ದೊಡ್ಡಹಾರೋಹಳ್ಳಿ ಬದಲಿಗೆ ಮಹದೇವಪುರ ಗ್ರಾಮದಲ್ಲಿ 06 ಗುಂಟೆ ಅಂತ ಮಾಡಿದ್ದಾರೆ. ಇಲ್ಲಿ ಚಿಕ್ಕಮ್ಮನಗುಡಿ ಇದೆ, ಆದರೆ ದೇವಸ್ಥಾನದ ಹೆಸರಿಗೆ ಯಾವುದೇ ಪಹಣಿ ದಾಖಲೆ ಇರಲಿಲ್ಲ. ಆದರೆ ನಮ್ಮ ಸರ್ಕಾರ ಪಹಣಿಯಲ್ಲಿ ಚಿಕ್ಕಮ್ಮನಗುಡಿ ಎಂದು ನಮೂದಿಸಿ, ದೇವಸ್ಥಾನದ ಹೆಸರಿಗೆ ಆಸ್ತಿ ಮಾಡಿಕೊಟ್ಟಿದ್ದೇವೆ. ಬಿಜಾಪುರ ಜಿಲ್ಲೆಯಲ್ಲಿ ಪಡಗಾನೂರು ಗ್ರಾಮದಲ್ಲಿ ಸೋಮೇಶ್ವರ ದೇವಸ್ಥಾನ ವಕ್ಫ್ ಆಸ್ತಿಯಾಗಿದೆ ಎಂದು ಸುಳ್ಳು ಸುದ್ದಿ ಹರಡಿಸಿದ್ದು, ಇಲ್ಲಿನ ಸರ್ವೆ ನಂ. 220 ರಲ್ಲಿ 57 ಎಕರೆ ಜಮೀನು ಇದೆ. ಆದರೆ ಇಲ್ಲಿ ವಕ್ಫ್‌ ಇರುವುದು ಕೇವಲ 02 ಎಕರೆ ಮಾತ್ರ, ಉಳಿದ ಜಮೀನಿನಲ್ಲಿ 18 ರೈತರಿದ್ದಾರೆ. ಸೋಮೇಶ್ವರ ದೇವಸ್ಥಾನಕ್ಕೂ ವಕ್ಫ್ ಆಸ್ತಿಗೂ ಅಥವಾ ರೈತರ ಆಸ್ತಿಗೂ ಯಾವುದೇ ಒಂದಕ್ಕೊಂದು ಸಂಬಂಧವಿಲ್ಲ. ವಿಜಯಪುರದಲ್ಲಿ ಪೊಲೀಸ್ ಕ್ವಾಟ್ರಸ್ ಜಾಗ ವಕ್ಫ್ ಎಂದು ಪೊಲೀಸರನ್ನು ಎತ್ತಿಕಟ್ಟಿದರು, ಆದರೆ ಆ ಜಾಗದ ಮೇಲೆ ಯಾವುದೇ ದಾವೆಯೂ ಇಲ್ಲ, ಯಾರೂ ಕೂಡ ಈ ಜಾಗ ನಮ್ಮದು ಎಂದು ಕ್ಲೇಮ್ ಮಾಡಿಲ್ಲ. ಆದ-'ರೆ ಆ ಸ್ಥಳದಲ್ಲಿ ಸುಮಾರು 300 ವರ್ಷಗಳಷ್ಟು ಹಳೆಯದಾದ ಪಾರಂಪರಿಕ ಮಸೀದಿ ಇದೆ, ಅದನ್ನು ಸುಸ್ಥಿತಿಯಲ್ಲಿಡುವಂತೆ ಮಾತ್ರ ಕೋರಿಕೆ ಸಲ್ಲಿಸಲಾಗಿದೆ. ಬಿಜಾಪುರದಲ್ಲಿ ಜಿಲ್ಲಾಧಿಕಾರಿಗಳ ಮನೆ ವಕ್ಫ್ ಆಸ್ತಿ ಎಂದು ಸುದ್ದಿ ಹರಡಿಸಿದರು, ಆದರೆ ಬಿಜಾಪುರದಲ್ಲಿನ ಜಿಲ್ಲಾಧಿಕಾರಿಗಳ ವಸತಿ ಗೃಹ 400 ವರ್ಷ ಹಳೆಯ ಕಟ್ಟಡವಾಗಿದ್ದು, ಆದಿಲ್‌ಶಾಹಿ ವಂಶಸ್ಥರು ನಿರ್ಮಿಸಿದ್ದು, ಎಲ್ಲೂ ಕೂಡ ಇದು ವಕ್ಫ್ ಆಸ್ತಿ ಎಂದು ನಮೂದಾಗಿಲ್ಲ ಎಂದು ಕಂದಾಯ ಸಚಿವರು ಸ್ಪಷ್ಟನೆ ನೀಡಿದರು.

ನಮ್ಮ ಸರ್ಕಾರ ಕೇವಲ ವಕ್ಫ್ ಆಸ್ತಿ ಸಂರಕ್ಷಣೆಗೆ ಮಾತ್ರ ಕ್ರಮ ಕೈಗೊಂಡಿಲ್ಲ, ಮುಜರಾಯಿ ಇಲಾಖೆಗೆ ಸಂಬಂಧಿಸಿದ ಆಸ್ತಿಗಳನ್ನು ಕೂಡ ಸಂರಕ್ಷಣೆಗೆ ಕ್ರಮ ಕೈಗೊಂಡಿದೆ. 2023 ರಲ್ಲಿ ನಮ್ಮ ಸರ್ಕಾರ 5402 ಎಕರೆ ಭೂಮಿಯನ್ನು ಮುಜರಾಯಿ ದೇವಸ್ಥಾನಗಳಿಗೆ ಖಾತೆ ಮಾಡಿಕೊಟ್ಟಿದ್ದರೆ, ವಕ್ಫ್ ಸಂಬಂಧಿಸಿದಂತೆ 600 ಎಕರೆ ಮಾತ್ರ ಖಾತೆ ಮಾಡಿಕೊಡಲಾಗಿದೆ. ಈ ವರ್ಷ 5287 ಎಕರೆ ಹಿಂದೂ ದೇವಸ್ಥಾನಗಳಿಗೆ ಖಾತೆ ಮಾಡಿ, ದೇವಸ್ಥಾನಗಳ ಜಾಗವನ್ನು ಸಂರಕ್ಷಣೆ ಮಾಡಿದ್ದೇವೆ ಎಂದು ಕಂದಾಯ ಸಚಿವರು ಹೇಳಿದರು.

****

# ರಾಜ್ಯದಲ್ಲಿ 50 ಅಕ್ಕ ಕೆಫೆ ಶೀಘ್ರದಲ್ಲಿ ಪ್ರಾರಂಭ: ಸಚಿವ ಶರಣ ಪ್ರಕಾಶ್ ಪಾಟೀಲ




ಬೆಳಗಾವಿ : ಮಹಿಳಾ ಸ್ವ-ಸಹಾಯ ಸಂಘಗಳಿಗೆ ಆದಾಯ ತರುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ನಿರ್ದೇಶನದಂತೆ ರಾಷ್ಟ್ರೀಯ ಜೀವನೋಪಾಯ ಅಭಿಯಾನ ಅಡಿಯಲ್ಲಿ ರಾಜ್ಯದ ವಿವಿಧ ಜಿಲ್ಲೆ ಹಾಗೂ ತಾಲೂಕುಗಳ ವ್ಯಾಪ್ತಿಯಲ್ಲಿ 50 ಅಕ್ಕ ಕೆಫೆಗಳನ್ನು ಪ್ರಾರಂಭಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವ ಶರಣ ಪ್ರಕಾಶ ಪಾಟೀಲ ಅವರು ತಿಳಿಸಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಜೀವನೋಪಾಯ ಅಭಿಯಾನ ಅಡಿಯಲ್ಲಿ ಗುರುವಾರ (ಡಿ.19) ಜಿಲ್ಲಾ ಪಂಚಾಯತ ಆವರಣದಲ್ಲಿ ನೂತನವಾಗಿ ನಿರ್ಮಿಸಲಾದ "ಅಕ್ಕ ಕೆಫೆ" ಉದ್ಘಾಟಿಸಿ ಅವರು ಮಾತನಾಡಿದರು.

ಬೆಂಗಳೂರು ಹೊರತುಪಡಿಸಿ ಬೆಳಗಾವಿಯಲ್ಲಿ "ಅಕ್ಕ ಕೆಫೆ" ಕ್ಯಾಂಟೀನ್ ಪ್ರಾರಂಭಿಸಲಾಗಿದೆ. ಸ್ವ-ಸಹಾಯ ಸಂಘಗಳಿಗೆ ಆದಾಯ ಒದಗಿಸುವ ವಿನೂತನ ಯೋಜನೆ ಇದಾಗಿದೆ. ಇಡೀ ರಾಜ್ಯದಲ್ಲಿ ಮೂರು "ಅಕ್ಕ ಕೆಫೆ" ಪ್ರಾರಂಭದಲ್ಲಿವೆ. ಬರುವಂತಹ ದಿನಗಳಲ್ಲಿ ರಾಜ್ಯದ ವಿವಿಧೆಡೆ 50 ಅಕ್ಕ ಕೆಫೆ ಪ್ರಾರಂಭಿಸಲಾಗುವುದು. ಕೆಫೆ ನಿರ್ವಹಣೆಗಾಗಿ ಸುಮಾರು 15 ಲಕ್ಷ ರೂಪಾಯಿಗಳ ಸಹಾಯ ಧನ ನೀಡಲಾಗುತ್ತಿದೆ ಎಂದು ಹೇಳಿದರು.

ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಮುಖ್ಯ ವಾಹಿನಿಗೆ ಬರಬೇಕು ಎಂಬ ಉದ್ದೇಶದಿಂದ ಸರ್ಕಾರ ಸ್ವಾವಲಂಬಿ ಯೋಜನೆಗಳನ್ನು ಜಾರಿಗೆ ತರುತ್ತಿದೆ. ಇಂತಹ ವಿನೂತನ ಯೋಜನೆಗಳನ್ನು ಬಳಕೆ ಮಾಡಿಕೊಂಡು ಮಹಿಳೆಯರು ಸ್ವಾವಲಂಬಿಯಾಗಿ ಬದುಕಬೇಕು ಎಂದು ಸಚಿವ ಶರಣ ಪ್ರಕಾಶ ಪಾಟೀಲ ಅವರು ತಿಳಿಸಿದರು.

ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಆವರಣದಲ್ಲಿ ಸಂಜೀವಿನಿ ಸ್ವ-ಸಹಾಯ ಸಂಘಗಳ ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಹಾಗೂ ಪ್ರದರ್ಶನಕ್ಕಾಗಿ "ಅವಸರ" ಮಳಿಗೆ ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ತಿಳಿಸಿದರು.

## ಕರ್ನಾಟಕ ಏಕೀಕರಣ,ಸ್ವರಾಜ್ಯ ಪಕ್ಷ ವಿಲೀನ , ಸೌಹಾರ್ದತೆಯ ಭಾವನೆಗಳನ್ನು ಬಿತ್ತಿದ ನೆಲ ಬೆಳಗಾವಿ

# 1924 ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಆಚರಣೆ ಅಧಿಕೃತ ನಿರ್ಣಯ ಸಚಿವ ಎಚ್.ಕೆ.ಪಾಟೀಲ ಮಂಡನೆ

ಬೆಳಗಾವಿ,ಸುವರ್ಣಸೌಧ: :ಬೆಳಗಾವಿಯಲ್ಲಿ 1924 ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನವು ದೇಶದಲ್ಲಿ ಸ್ವಾತಂತ್ರ್ಯ ಚಳುವಳಿಗೆ ಹೊಸಶಕ್ತಿ ನೀಡುವ ವಿಚಾರಗಳು, ಕರ್ನಾಟಕ ಏಕೀಕರಣಕ್ಕೆ ಮುನ್ನುಡಿ , ಸ್ವಾತಂತ್ರ್ಯ ಹೋರಾಟದಿಂದ ಹೊರ ಉಳಿದಿದ್ದವರನ್ನು ಕಾಂಗ್ರೆಸ್ ತೆಕ್ಕೆಗೆ ಸೇರಿಸಿಕೊಂಡು ಹೋರಾಟಕ್ಕೆ ಅಣಿಗೊಳಿಸುವುದು.ಹಿಂದೂ ಮುಸ್ಲಿಂ ಭಾವೈಕ್ಯತೆ ಭಾವನೆಗಳನ್ನು ಗಟಿಗೊಳಿಸುವದು ಸೇ-ರಿದಂತೆ ಮಹತ್ವದ ಚಾರಿತ್ರಿಕ ನಿರ್ಣಯಗಳಿಗೆ ಸಾಕ್ಷಿಯಾಗಿದೆ. ಬರುವ ಡಿಸೆಂಬರ್ 26 ಹಾಗೂ 27 ರಂದು ಬೆಳಗಾವಿಯಲ್ಲಿ ಶತಮಾನೋತ್ಸವ ಆಚರಣೆಗೆ ಚಾಲನೆ ನೀಡಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ ಹೇಳಿದರು.

ವಿಧಾನಸಭೆಯಲ್ಲಿ ಇಂದು ಈ ಕುರಿತು ಅಧಿಕೃತ ನಿರ್ಣಯ ವಾಚನ ಮಾಡಿದರು.

ಬೆಳಗಾವಿಯಲ್ಲಿ 1924ರಲ್ಲಿ ನಡೆದ 39ನೇ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನಕ್ಕೆ ಈಗ ಶತಮಾನದ ಸಂಭ್ರಮ. ಅಂದು ದೇಶದ ಸ್ವಾಂತ್ರತ್ಯಕ್ಕಾಗಿ, ಸ್ವರಾಜ್ಯ ಸ್ಥಾಪನೆಗಾಗಿ, ಸರ್ವ ಜನರ ಸ್ವಾಭಿಮಾನಕ್ಕಾಗಿ ಹೋರಾಡುತ್ತಿದ್ದ ದೇಶದ ಏಕೈಕ ಬೃಹತ್ ಸಂಘಟನೆ ಭಾರತ ರಾಷ್ಟ್ರೀಯ ಕಾಂಗ್ರೆಸ್. ಹೀಗಾಗಿಯೇ ಈ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮಹತ್ತರ ಪಾತ್ರ ವಹಿಸಿತ್ತು. ಬೇರೆ ಬೇರೆ ಕಾರಣಗಳಿಂದ ಕಾಂಗ್ರೆಸ್‌ನಿಂದ ದೂರ ಇದ್ದವರು ಸ್ವಾತಂತ್ರ್ಯ ಹೋರಾಟದಿಂದ ದೂರ ಉಳಿದವರು ಈ ಅಧಿವೇಶನದ ನಂತರ ಮನಃಪರಿವರ್ತನೆಗೊಂಡು ಭಾರತ ರಾಷ್ಟ್ರೀಯ ಕಾಂಗ್ರೆಸ್ ಗೆ ಮರಳಲಾರಂಭಿಸಿದ್ದರು. ಮುನಿಸಿಕೊಂಡಿದ್ದ ಸ್ವರಾಜ್ಯ ಪಕ್ಷದವರನ್ನೂ ಮತ್ತು ಮುಸ್ಲಿಮರನ್ನು ಪುನಃ ಭಾರತ ರಾಷ್ಟ್ರೀಯ ಕಾಂಗ್ರೆಸ್‌ನೊಂದಿಗೆ ಒಂದುಗೂಡಿಸಿದ್ದರಿಂದ ಈ ಅಧಿವೇಶನವು ಐಕ್ಯತಾ ಸಮ್ಮೇಳನ ಎಂದೇ ಹೆಸರು ಪಡೆದಿದೆ ಎಂದರು.

ಭಾರತದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿಯೇ ವಿಶೇಷವಾದ ಅಧಿವೇಶನ ಎಂಬ ಹೆಗ್ಗಳಿಕೆಗೂ ಈ ಬೆಳಗಾವಿ ಅಧಿವೇಶನ ಪಾತ್ರವಾಗಿದೆ. ಇದಕ್ಕೆ ಕಾರಣ ನಮ್ಮ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ ಏಕೈಕ ಅಧಿವೇಶನ ಇದು. ಅಲ್ಲದೆ ನಮ್ಮ ರಾಜ್ಯದಲ್ಲಿ ನಡೆದ ಏಕೈಕ ಸ್ವಾತಂತ್ರ್ಯ ಪೂರ್ವ ಕಾಂಗ್ರೆಸ್ ಅಧಿವೇಶನ ಕೂಡ ಹೌದು. ಹಿಂದೂ-ಮುಸ್ಲಿಂ ಸೌಹಾರ್ದತೆಯನ್ನು ಸಾರಿ, ಏಕತೆಯಿಂದ ಅಖಂಡ ಭಾರತದಾದ್ಯಂತ ಸ್ವಾತಂತ್ರ್ಯ ಸಂಗ್ರಾಮದ ಕಿಚ್ಚು ಹೆಚ್ಚಿಸಿದ, 'ಗಾಂಧಿ'ಎನ್ನುವ ಬಿಂಬ ಸಾವಿರ ಕಣ್ಣುಗಳಲ್ಲಿ ಸಾವಿರ ತೆರನಾಗಿ ರೂಪಗೊಳ್ಳಲು ಕಾರಣವಾದ ವೇದಿಕೆ ಇದಾಗಿತ್ತು ಎಂದು ಹೇಳಿದರು.

1924ರ ವರೆಗೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಬರಿ ಸ್ವಾತಂತ್ರ್ಯ ಹೋರಾಟಕ್ಕೆ ಮೀಸಲಾಗಿದ್ದ ರಾಜಕೀಯ ಸಂಘಟನೆ. ಆದರೆ ಈ ಅಧಿವೇಶನದಲ್ಲಿ ಅಧ್ಯಕ್ಷೀಯ ಭಾಷಣ ಮಾಡಿದ್ದ ಮಹಾತ್ಮ ಗಾಂಧೀಜಿಯವರು ಭಾರತದ ಸಾಮಾಜಿ-ಕ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಿ, ಭಾರತ ರಾಷ್ಟ್ರೀಯ ಕಾಂಗ್ರೆಸ್ ಸಮಾಜ ಸುಧಾರಣೆಗಾಗಿಯೂ ಶ್ರಮಿಸುವ ಅಗತ್ಯವನ್ನು ಒತ್ತಿ ಹೇಳುವುದರ ಮೂಲಕ ಪಕ್ಷವನ್ನು ಸಾಮಾಜಿಕ ಸಮಸ್ಯೆಗಳ ವಿರುದ್ಧದ ಹೋರಾಟಕ್ಕೂ ಅಣಿಗೊಳಿಸಿದ್ದರು. ಅಸ್ಪೃಶ್ಯತೆಯ ಆಳ- ಅಗಲವನ್ನು ಎತ್ತಿ ತೋರಿಸಿ, ಇದರ ನಿವಾರಣೆಗೆ ಇಡೀ ದೇಶ ನಿರ್ಣಯಿಸುವಂತೆ ಮಹಾತ್ಮ ಗಾಂಧೀಜಿ ಈ ವೇದಿಕೆಯ ಮೂಲಕವೇ ಮಾಡಿದ್ದರು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಹಲವಾರು ಸಂಘಟನೆಗಳನ್ನು ಸ್ಥಾಪಿಸಲಾಯಿತು. ಅಸ್ಪೃಶ್ಯತೆ ವಿರುದ್ಧದ ಕಾರ್ಯಕ್ರಮಗಳು ಚಳವಳಿಯ ಸ್ವರೂಪ ಪಡೆದುಕೊಂಡಿದ್ದವು. ಈ ಅಧಿವೇಶನದ ಮೂಲಕ ಸಾಮಾಜಿಕ ವಿಷಯಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್‌ನ ಧೋರಣೆಗಳು ಕೂಡ ಬದಲಾಗಿದ್ದವು. ಬ್ರಿಟೀಷರ ದಬ್ಬಾಳಿಕೆಯ ವಿರುದ್ಧ ಚರಕದ ಮೂಲಕ ಹೋರಾಟ ಆರಂಭಿಸಿದ್ದ ಭಾರತೀಯ ಸ್ವಾತಂತ್ರ್ಯ ಹೋರಾಟಗಾರರಿಗೆ, ಚರಕದ ಮಹತ್ವವನ್ನು ಮಹಾತ್ಮಗಾಂಧೀಜಿ ಮನಮುಟ್ಟುವಂತೆ ತಿಳಿ ಹೇಳಿದ್ದು ಇದೇ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ. ಮುಂದೆ ಖಾದಿ ಪ್ರಚಾರ ಚುರುಕು ಪಡೆದು, ಇಡೀ ದೇಶ ಖಾದಿಮಯವಾಗಿತ್ತು. ವಿದೇಶಿ ವಸ್ತ್ರ ದಹನ ಸಾಮನ್ಯ ಎಂಬಂತಾಗಿತ್ತು. "ಅಖಿಲ ಭಾರತ ಚರಕ ಸಂಘ ಸ್ಥಾಪನೆಗೂ ಕಾರಣವಾಯಿತು. ಚರಕದ ನೂಲು ಬ್ರಿಟೀಷರ ಪಾಲಿಗೆ ಉರುಳಾಗತೊಡಗಿತ್ತು.

1924ರ ಡಿಸೆಂಬರ್ 26 ಮತ್ತು 27 ರಂದು ನಡೆದ ಈ ಅಧಿವೇಶನದಲ್ಲಿ ಅಖಂಡ ಭಾರತದ ಮೂಲೆ ಮೂಲೆಯಿಂದ ಆಗಮಿಸಿದ್ದ 1,844 ಪ್ರತಿನಿಧಿಗಳು ಭಾಗವಹಿಸಿದ್ದರು. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗಿಯಾಗುತ್ತಿದ್ದ ಬಹುತೇಕ ಎಲ್ಲ ನಾಯಕರೂ ಈ ಅಧಿವೇಶನದಲ್ಲಿದ್ದರು. ಬಹಳ ಮುಖ್ಯವಾದ ಒಟ್ಟು 16 ನಿರ್ಣಯಗಳು ಅಂಗೀಕರಿಸಲ್ಪಟ್ಟವು. ಅಧಿವೇಶನದ ಜತೆ ಜತೆಗೆ ವಿವಿಧ ವಿಷಯಗಳಿಗೆ ಸಂಬಂಧಿಸಿದ ಸಮಾನಾಂತ ಸಮ್ಮೇಳನಗಳು ನಡೆದಿದ್ದವು. ಇದರಲ್ಲಿ ಕರ್ನಾಟಕ ಏಕೀಕರಣದ ಸಮ್ಮೇಳನವೂ ಒಂದು. ಈ ಸಮ್ಮೇಳನದ ಮೂಲಕ ನಮ್ಮ ನಾಡಿನ ಏಕೀಕರಣದ ಹೋರಾಟಕ್ಕೆ ಅಧಿಕೃತವಾಗಿ ಚಾಲನೆ, ಪ್ರೇರಣೆ ದೊರೆತಿತ್ತು. ಸ್ವಾತಂತ್ರ್ಯ ಹೋರಾಟದೊಂದಿಗೇ ನಾಡುಕಟ್ಟುವ ಕಾರ್ಯವೂ ಆರಂಭಗೊಂಡಿತ್ತು ಎಂದು ಇತಿಹಾಸ ಸ್ಮರಿಸಿದರು.

ಹಲವಾರು ಕಾರಣಗಳಿಂದಾಗಿ ಮಹಾತ್ಮಾ ಗಾಂಧೀಜಿಯವರ ಮೆಚ್ಚುಗೆಗೆ ಪಾತ್ರವಾಗಿದ್ದ ಈ ಅಧಿವೇಶನ ಸಂಘಟನೆ, ಸಮರ್ಥ-'ರ್ಥ ಆಯೋಜನೆ, ಶಿಸ್ತುಬದ್ಧ ಕಾರ್ಯಕಲಾಪ, ಪ್ರಜಾತಾಂತ್ರಿಕ ಮೌಲ್ಯಗಳಿಗೆ ಮನ್ನಣೆ ಈ ಎಲ್ಲ ಕಾರಣಗಳಿಂದಾಗಿ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸದಲ್ಲಿ ಬಹಳ ಪ್ರಾಮುಖ್ಯತೆ ಪಡೆದುಕೊಂಡಿದೆ ಎಂದರು. ಇಂಥ ಘಟನೆ, ಅಧಿವೇಶನ ನಡೆದು ನೂರು ವರ್ಷ ತುಂಬಿದ ಈ ಸಂದರ್ಭದಲ್ಲಿ ಕರ್ನಾಟಕದಲ್ಲಿ ಬೆಳಗಾವಿ ಅಧಿವೇಶನದ ಶತಮಾನೋತ್ಸವ ಆಚರಣೆ ಹೊಸ ಪೀಳಿಗೆಗೆ ಸ್ಫೂರ್ತಿ, ಪ್ರೇರಣೆ ನೀಡಲಿ ಎಂದು ತಮ್ಮ ನಿರ್ಣಯದ ಮೂಲಕ ಆಶಯ ವ್ಯಕ್ತಪಡಿಸಿದರು.

# ಅಶ್ಲೀಲ ಪದ ಬಳಕೆ ಆರೋಪ: ಸಿಟಿ ರವಿ ಮೇಲೆ ಹಲ್ಲೆಗೆ ಯತ್ನ

ಬೆಳಗಾವಿ: ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ ಆರೋಪ ತೀವ್ರ ಸ್ವರೂಪ ಪಡೆದುಕೊಂಡಿದೆ. ಬೆಳಗಾವಿಯ ಸುವರ್ಣ ಸೌಧದ ಮೊಗಸಾಲೆಯಲ್ಲಿ ದೊಡ್ಡ ಹೈಡ್ರಾಮಾವೇ ನಡೆದಿದೆ.

ವಿಧಾನಪರಿಷತ್‌ನ ಕಾರಿಡಾರ್‌ನಲ್ಲಿ ಹೋಗುತ್ತಿರುವಾಗ ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಗಲಿಗರು ಏಕಾಏಕಿ ಸಿಟಿ ರವಿಗೆ ಅಡ್ಡ ಹಾಕಿ ಅವಾಚ್ಯ ಶಬ್ಧಗಳಿಂದ ನಿಂದಿಸಿದ್ದಾರೆ. ಅಲ್ಲದೇ ನೂರಾರು ಬೆಂಬಲಿಗರು ಘೋಷಣೆ ಕೂಗಿ ಸಿಟಿ ರವಿ ಮೇಲೆ ಮುಗಿಬಿದ್ದಿದ್ದು, ಹಲ್ಲೆಗೆ ಯತ್ನ ನಡೆದಿದೆ ಎಂದು ತಿಳಿದುಬಂದಿದೆ. ಕೂಡಲೇ ಮಾರ್ಷಲ್‌ಗಳು, ಕಾರಿಡಾರ್ ಗೇಟ್ ಬಂದ್ ಮಾಡಿದರು. ಹೀಗಾಗಿ ಸಿಟಿ ರವಿ ಅಪಾಯದಿಂದ ಪಾರಾಗಿದ್ದಾರೆ.

ಏಕವಚನದಲ್ಲೇ ಏನೋ ಸೂ .ಮಗನೇ . ನಮ್ಮಕ್ಕನಿಗೆ ಹೀಗಂದ್ಯಾ ಎಂದು ಓರ್ವ ವ್ಯಕ್ತಿ ಒದೆಯುವ ರೀತಿಯಲ್ಲಿ ಕಾಲೆತ್ತಿದ್ದಾನೆ. ಆಗ ಏನೋ ಎಂದ ರವಿ ಪ್ರಶ್ನಿಸಿದ್ದಾರೆ. ಆಗ ಸಿಟಿ ರವಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಅವರ ಮೇಲೆ ಹಲ್ಲೆಗೆ ಯತ್ನಿಸಿದ್ದಾರೆ.

ಏಯ್, ಆಚೆ ಬಾರೋ, ಧೈರ್ಯವಿದ್ದರೆ ಹೊರಗೆ ಬಾ ಎಂದು ಏಕವಚನದಲ್ಲೇ ಆವಾಜ್ ಹಾಕಿದ್ದಾರೆ. ಈ ವೇಳೆ ಒಂದಿಬ್ಬರು ಹಲ್ಲೆಗೂ ಯತ್ನಿಸಿದ ಪ್ರಸಂಗ ನಡೆಯಿತು. ಇದರಿಂದ ಹೆಬ್ಬಾಳ್ಕರ್ ಬೆಂಬಲಿಗರ ವಿರುದ್ಧ ಕೆಂಡಾಮಂಡಲರಾದ ಸಿ.ಟಿ ರವಿ ಬಾ.. ಬಾ.. ಹೊಡಿ ಬಾ.., ಅದೇನ್ ಮಾಡ್ತಾರೆ ಮಾಡ್ಲಿ ಬಿಡ್ರಿ ಎಂದಿದ್ದಾರೆ.

ಇದರಿಂದ ದೊಡ್ಡ ಗಲಾಟೆ ಉಂಟಾಗಿದ್ದು, ಕೂಡಲೇ ಪೊಲೀಸರು ದೌಡಾಯಿಸಿ ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಲಿಗರನ್ನು ಚದು-ರಿಸಿದರು. ಅಲ್ಲದೇ ಕೆಲವರನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಇನ್ನು ಈ ಗಲಾಟೆ ನಡೆಯುವ ಸ್ಥಳದಲ್ಲೇ ಹೆಬ್ಬಾಳ್ಕರ್ ಸಹೋದರ ವಿಧಾನಪರಿಷತ್ ಸದಸ್ಯ ಚನ್ನರಾಜ್ ಹಟ್ಟಿಹೊಳಿ ಕಾಣಿಸಿಕೊಂಡಿದ್ದಾರೆ.

ಲಕ್ಷ್ಮೀ ಹೆಬ್ಬಾಳ್ಕರ್ ಅವರ ಬೆಂಬಲಿಗರ ನಡೆಯಿಂದ ಆಕ್ರೋಶಗೊಂಡಿರುವ ಸಿಟಿ ರವಿ, ನನ್ನ ಮೇಲೆ ಅಟ್ಯಾಕ್ ಮಾಡಲು ಯತ್ನಿಸಿದ್ದಾರೆ. ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಲಿಗರು ಕೊಲೆ



ಬೆದರಿಕೆ ಹಾಕಿದ್ದಾರೆ. ಕೂಡಲೇ ಅವರನ್ನು ಬಂಧಿಸಬೇಕೆಂದು ಧರಣಿ ಕುಳಿತುಕೊಂಡಿದ್ದಾರೆ.

**ಸಿಟಿ ರವಿ ಆಕ್ರೋಶ ಟ** ನಾನು ಇದಕ್ಕೆಲ್ಲ ಹೆದರಿಕೊಂಡು ರಾಜಕಾರಣ ಮಾಡುವವನಲ್ಲ. ನಾನು ಏಕಾಂಗಿಯಾಗಿಯೇ ಎಲ್ಲವನ್ನೂ ಎದು-ರಿಸುತ್ತೇನೆ. ನನ್ನ ಕೊಲೆ ಮಾಡುವುದಕ್ಕೆ ಸಂಚು ರೂಪಿಸಿಕೊಂಡು ಬಂದಿದ್ದಾರೆ. ಗೂಂಡಾ ರಾಜ್ಯ ಮಾಡಲು ಹೊರಟಿದ್ದಾರೆ ಎಂದು ಕಿಡಿಕಾ-ರಿದ ಸಿಟಿ ರವಿ, ನಾನು ಆ ರೀತಿ ಪದಬಳಕೆ ಮಾಡಿದ್ದನ್ನ ತೋರಿಸಿ ಎಂದು ಸವಾಲು ಹಾಕಿದರು. ಸುವರ್ಣಸೌಧದಲ್ಲೇ ಇಂತಹ ಸ್ಥಿತಿ ಇದೆ ಎಂದರೆ ಅರ್ಥಮಾಡಿಕೊಳ್ಳಿ. ಶಾಸಕನಿಗೆ ರಕ್ಷಣೆ ಇಲ್ಲ ಅಂದರೆ, ಜನಸಾಮಾನ್ಯರ ಸ್ಥಿತಿ ಹೇಗಿದೆ? ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿದೆ. ಬಾಣಂತಿಯರ ಸಾವು, ವಕ್ಫ್ ವಿಚಾರ ಡೈವರ್ಟ್ ಮಾಡಲು ಯತ್ನ. ಸರ್ಕಾರದ ಕುಮ್ಮಕ್ಕಿನಿಂದಲೇ ನಮ್ಮ ಮೇಲೆ ದಾಳಿ ನಡೆದಿದೆ ಎಂದು ಕಿಡಿಕಾರಿದರು.

**ಎಡಿಜಿಪಿ ಹಿತೇಂದ್ರಗೆ ಬಿಜೆಪಿ ನಾಯಕರ ತರಾಟೆ**

ಇನ್ನು ಸಿಟಿ ರವಿ ಮೇಲಿನ ಹಲ್ಲೆ ಯತ್ನಕ್ಕೆ ಸಂಬಂಧಿಸಿದಂತೆ ಬಿಜೆಪಿ ನಾಯಕರು ಎಡಿಜಿಪಿ ಹಿತೇಂದ್ರಗೆ ತರಾಟೆಗೆ ತೆಗೆದುಕೊಂಡಿದ್ದು, ಭಾರಿ ಸಂಖ್ಯೆಯಲ್ಲಿ ಕಾಂಗ್ರೆಸ್ ಬೆಂಬಲಿಗರನ್ನ ಹೇಗೆ ಒಳ ಬಿಟ್ಟಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಬಿಜೆಪಿ ನಾಯಕರ ಆಕ್ರೋಶ ಕಂಡು ಆಲುಕ ಹಿತೇಂದ್ರ ಅವರು ತಲೆ ಅಲ್ಲಾಡಿಸುತ್ತಾ ಸುಮ್ಮನೆ ನಿಂತುಕೊಂಡರು.

ಹೆಚ್ಚುವರಿ ಪೊಲೀಸರ ನಿಯೋಜನೆ

ಈ ಗಲಾಟೆ ಹಿನ್ನಲೆಯಲ್ಲಿ ಎಚ್ಚೆತ್ತುಕೊಂಡ ಪೊಲೀಸ್ ಇಲಾಖೆ, ಸುವರ್ಣ ಸೌಧದ ಮುಂಭಾಗದಲ್ಲಿ ಹೆಚ್ಚುವರಿ ಪೊಲೀಸರ ನಿಯೋಜನೆ ಮಾಡಲಾಗಿದೆ. ಮುಖ್ಯದ್ವಾರದ ಬಳಿ ನೂರಕ್ಕೂ ಅಧಿಕ ಪೊಲೀಸರ ನಿಯೋಜನೆ ಮಾಡಲಾಗಿದ್ದು, ಬೆಳಗಾವಿ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಅವರು ಬಂದೋಬಸ್ತ್ ವೀಕ್ಷಣೆ ಮಾಡಿದರು. ಈ ವೇಳೆ ಟಿವಿ9ಗೆ ಪ್ರತಿಕ್ರಿಯಿಸಿದ ಅವರು, ಪ್ರತಿಭಟನೆಗೆ ಬಂದಿದ್ದ-ರಿಂದ ಪೊಲೀಸ್ ಸಿಬ್ಬಂದಿಯನ್ನ ಸ್ಥಳಕ್ಕೆ ಕರೆಯಿಸಿಕೊಂಡಿದ್ದೇವೆ. ಸೌಧದ ಒಳಗೆ ಹೋರಾಟ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು.

**ಸುವರ್ಣಸೌಧಕ್ಕೆ ದಿಗ್ಬಂಧನ**

ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಅಶ್ಲೀಲ ಪದಗಳಿಂದ ನಿಂದನೆ ಮಾಡಿದ್ದಾರೆ ಎಂದು ಆರೋಪಿಸಿ ಅವರ ಬೆಂಬಲಿಗರು ಸುವರ್ಣಸೌಧದ ಕಾರಿಡಾರ್‌ನಲ್ಲಿ ಸಿ.ವಿ.ರವಿ ಮೇಲೆ ದಾಳಿಗೆ ಯತ್ನಿಸಿದ್ದಾರೆ. ಇದರಿಂದ ಭಾರೀ ಹೈಡ್ರಾಮಾಕ್ಕೆ ಸುವರ್ಣಸೌಧದಲ್ಲಿ ಸಾಕ್ಷಿಯಾಗಿದ್ದು , ಗಲಭೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಸುವರ್ಣಸೌಧಕ್ಕೆ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. ಸುವರ್ಣಸೌಧದ ಎಲ್ಲ ಗೇಟ್‌ಗಳನ್ನ ಬಂದ್ ಮಾಡಲಾಗಿದ್ದು ,ಎಲ್ಲಾ ಫ್ಲೋರ್‌ಗೂ ಪೊಲೀಸ್ ಬಿಗಿ ಬಂದೋಬಸ್ತ್ ಮಾಡಲಾಗಿದೆ.

## ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ ಆರೋಪ: ಸಿ.ಟಿ.ರವಿ ಬಂಧನ

ಬೆಳಗಾವಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ವಿಧಾನ ಪರಿಷತ್‌ನಲ್ಲಿ ಅಶ್ಲೀಲ ಪದ ಬಳಸಿದ ಆರೋಪದ ಮೇಲೆ ವಿಧಾನ ಪರಿಷತ್ ಬಿಜೆಪಿ ಸದಸ್ಯ ಸಿ.ಟಿ.ರವಿ ಅವರನ್ನು ಇಂದು ಸಂಜೆ ಹಿರೇಬಾಗೇವಾಡಿ ಪೊಲೀಸರು ಬಂಧಿಸಿದರು. ಇದಕ್ಕೂ ಮುನ್ನ ಲಕ್ಷ್ಮೀ ಹೆಬ್ಬಾಳ್ಕರ್ ನೀಡಿದ್ದ ದೂರಿನ್ವಯ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದರು.

ಬಂಧನಕ್ಕೆ ಪ್ರತಿರೋಧವೊಡ್ಡಿದ ಹಿನ್ನೆಲೆಯಲ್ಲಿ ಪೊಲೀಸರು ಸಿ.ಟಿ.ರವಿ ಅವರನ್ನು ಹೊತ್ತುಕೊಂಡೇ ತಮ್ಮ ವಾಹನದಲ್ಲಿ ಕರೆದೊಯ್ದರು.

ಸುವರ್ಣ ವಿಧಾನಸೌಧದಲ್ಲಿ ಸಿ.ಟಿ.ರವಿ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಹಲ್ಲೆಗೆ ಯತ್ನಿಸಿದ ಘಟನೆ ಖಂಡಿಸಿ ಬಿಜೆಪಿ ನಾಯಕರು ಸೌಧದ ಮುಂಭಾಗ ಪ್ರತಿಭಟನೆ ನಡೆಸಿದರು. ಈ ವೇಳೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಸೇರಿ ಹಲವರನ್ನು ಪೊಲೀಸರು ವಶಕ್ಕೆ ಪಡೆದರು.

ದೂರು, ಪ್ರತಿದೂರು ದಾಖಲು: ಸಿ.ಟಿ.ರವಿ ನನ್ನ ಬಗ್ಗೆ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ. ಅವರನ್ನು ತಕ್ಷಣವೇ ಅಮಾನತು ಮಾಡಬೇಕು ಎಂದು ಪರಿಷತ್ ಸಭಾಪತಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ದೂರು ನೀಡಿದರೆ, ಇದಕ್ಕೆ ಪ್ರತಿ ದೂರು ನೀಡಿರುವ ಸಿ.ಟಿ.ರವಿ, ನಾನು ಆ ರೀತಿ ಪದ ಬಳಕೆ ಮಾಡಿಲ್ಲ. ಎಲ್ಲ ಮಹಿಳೆಯರನ್ನೂ ಗೌರವದಿಂದ ಕಾಣುತ್ತೇನೆ ಎಂದು ತಿಳಿಸಿದ್ದಾರೆ.



# ಬೆಳಗಾವಿ ಅಧಿವೇಶನ : ಬಾಣಂತಿಯರ ಸಾವು ಪ್ರಕರಣದ ಕುರಿತು ನ್ಯಾಯಾಂಗ ತನಿಖೆ : ದಿನೇಶ್ ಗುಂಡೂರಾವ್

ಬೆಳಗಾವಿ ಸುವರ್ಣಸೌಧ :-ಬಳ್ಳಾರಿಯಲ್ಲಿ ಸಂಭವಿಸಿದ ಬಾಣಂತಿಯರ ಸಾವಿನ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಇದರಲ್ಲಿ ತಪ್ಪಿತಸ್ಥರಾದವರನ್ನು ಸುಮ್ಮನೆ ಬಿಡುವುದಿಲ್ಲ. ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ, ಬಾಣಂತಿಯರ ಸಾವಿನ ಕುರಿತು ನ್ಯಾಯಮೂರ್ತಿಗಳ ನೇತೃತ್ವದಲ್ಲಿ ತನಿಖೆ ನಡೆಸಲಾಗುವುದು. ಒಂದು ವೇಳೆ ನಾನು ತಪ್ಪಿತಸ್ಥನೆಂದು ತಿಳಿದು ಬಂದರೆ, ಯಾವುದೇ ಮುಲಾಜು ಇಲ್ಲದೇ, ನನ್ನ ಮೇಲಿನ ಕ್ರಮಕ್ಕೂ ಸಿದ್ಧ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ, ವಿರೋಧ ಪಕ್ಷದ ನಾಯಕರು ನಿಯಮ 69 ಅಡಿ ಬಾಣಂತಿಯರ ಸಾವಿನ ಕುರಿತು ಪ್ರಸ್ತಾಪಿಸಿದ್ದ ವಿಚಾರಗಳಿಗೆ ಸಚಿವ ದಿನೇಶ್ ಗುಂಡೂರಾವ್ ಶುಕ್ರವಾರ ಉತ್ತರಿಸಿದರು.

ಕಳೆದ ನವೆಂಬರ್ ತಿಂಗಳ 9, 10 ಹಾಗೂ 11 ತಾರೀಖಿನಂದು ಬಳ್ಳಾರಿ ಆಸ್ಪತ್ರೆಯಲ್ಲಿ 34 ಸಿಜೇರಿಯನ್ ಹೆರಿಗೆ ಮಾಡಲಾಗಿದೆ. ಈ ಪೈಕಿ 7 ಬಾಣಂತಿಯರು ಹೆರಿಗೆ ನಂತರ ತೀವ್ರ ತರನಾಗಿ ಅಸ್ವಸ್ಥಗೊಂಡರು. ಇದರಲ್ಲಿ 5 ಬಾಣಂತಿಯರು ಸಾವನಪ್ಪಿದರೆ, ಇಬ್ಬರು ಸಾವಿನಿಂದ ಪಾರಾದರು. ಘಟನೆ ತಿಳಿದ ತಕ್ಷಣವೇ, ಸಾವಿನ ಕಾರಣ ತಿಳಿಯಲು ಬೆಂಗಳೂರಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ವೈದ್ಯರ ತಂಡ ರಚಿಸಿ ಬಳ್ಳಾರಿಗೆ ಕಳುಹಿಸಿಕೊಡಲಾಯಿತು. ಈ ತಂಡ ನವೆಂಬರ್ 12 ಹಾಗೂ 13 ರಂದು ಕೂಲಂಕಷವಾಗಿ ಅಧ್ಯಯನ ನಡೆಸಿ, ನವೆಂಬರ್ 14 ರಂದು ವರದಿ ನೀಡಿದೆ.



ಇದರಲ್ಲಿ ವೈದ್ಯರು ಶಸ್ತ್ರಚಿಕಿತ್ಸೆಯ ಎಲ್ಲ ಶಿಷ್ಟಾಚಾರ ನಿಯಮಗಳನ್ನು ಪಾಲಿಸಿದ್ದಾರೆ. ವೈದ್ಯರಿಂದ ಲೋಪವಾಗಿಲ್ಲ, ಬದಲಾಗಿ ಸಿಜೇರಿಯನ್ ನಂತರ ಬಾಣಂತಿಯರಿಗೆ ನೀಡಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣದ ಪ್ರತಿಕೂಲ ಪರಿಣಾಮದಿಂದ ಸಾವು ಸಂಭವಿಸಿರುವುದಾಗಿ ವರದಿ ನೀಡಿದರು. ಇದರ ಆಧಾರದಲ್ಲಿ ಪಶ್ಚಿಮ್ ಬಂಗಾ ಕಂಪನಿ ಪೂರೈಸಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣವನ್ನು ಪರೀಕ್ಷೆಗಾಗಿ ಲ್ಯಾಬಿಗೆ ಕಳುಹಿಸಿಕೊಟ್ಟಾಗ ಕಳಪೆ ಗುಣಮಟ್ಟದ್ದು ಎಂದು ಪತ್ತೆಯಾಗಿದೆ. ಹೈದರಾಬಾದ್ ಲ್ಯಾಬ್‌ನಲ್ಲಿ ನಡೆಸಿದ ಪರೀಕ್ಷೆಯಲ್ಲಿ ರಿಂಗರ್ ಲ್ಯಾಕ್ಟೇಟ್ ಐವಿಯಲ್ಲಿ ಎಂಡೋ ಟಾಕ್ಸಿಕ್ ಅಂಶ ಇರುವುದಾಗಿ ತಿಳಿದು ಬಂದಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದರು.

ಬಾಣಂತಿಯರ ಸಾವಿನ ಲೆಕ್ಕ ಪರಿಶೋಧನೆ :ಪಶ್ಚಿಮ್ ಬಂಗಾ ಕಂಪನಿ ಪೂರೈಸಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣವನ್ನು ರಾಜ್ಯದ ಇತರೆ ಆಸ್ಪತ್ರೆಗಳಿಗೂ ಪೂರೈಸಲಾಗಿದೆ, ಈ ಹಿನ್ನಲೆಯಲ್ಲಿ ರಾಜ್ಯಾದ್ಯಂತ ಸಂಭವಿಸಿದ ಬಾಣಂತಿಯರ ಸಾವಿನ ಲೆಕ್ಕ ಪರಿಶೋಧನೆಗೂ ಸೂಚನೆ ನೀಡಿದ್ದೇನೆ. ಮುಖ್ಯಮಂತ್ರಿಗಳು ಈಗಾಗಲೇ ಅಭಿವೃದ್ಧಿ ಆಯುಕ್ತರನ್ನು ಪ್ರಕರಣದ ಪರಿಶೀಲನೆ ನಡೆಸಿ ವರದಿ ನೀಡಲು ನೇಮಿಸಿದ್ದಾರೆ. ತಜ್ಞ ವೈದ್ಯ-ರಿಂದಲೂ ತನಿಖೆ ನಡೆಯುತ್ತಿದೆ. ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ಆಡಳಿತದಲ್ಲಿ ಸುಧಾರಣೆಗೆ ವರದಿ ನೀಡಲು ಹಿರಿಯ ಐ.ಎ.ಎಸ್ ಅಧಿಕಾರಿಯನ್ನು ಸಹ ನೇಮಿಸಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

**ಕಳಪೆ ಐವಿ ದ್ರಾವಣ ಪೂರೈಕೆ ಹೇಗೆ?:**ಪಶ್ಚಿಮ್ ಬಂಗಾ ಕಂಪನಿ ಪೂರೈಸಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣ ಕಳಪೆ ಗುಣಮಟ್ಟದ್ದು ಎಂದು ಪತ್ತೆಯಾದ ಮೇಲೂ ಐವಿ ದ್ರಾವಣ ಪೂರೈಕೆ ಹೇಗೆ ಆಯಿತು ಎನ್ನವುದರ ಕುರಿತು ಸಚಿವ ದಿನೇಶ್ ಗುಂಡೂರಾವ್ ಸದನಕ್ಕೆ ವಿಸ್ತೃತ ಮಾಹಿತಿ ನೀಡಿದರು.

ಕಳೆದ ಮಾರ್ಚ್ ಹಾಗೂ ಏಪ್ರಿಲ್‌ನಲ್ಲಿಯೇ ಐವಿ ದ್ರಾವಣದ ಗುಣಮಟ್ಟದ ಕುರಿತು ಸರ್ಕಾರಕ್ಕೆ ಮಾಹಿತಿ ದೊರಕಿತ್ತು. ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಐವಿ ದ್ರಾವಣ ನೀಡಿದವರಿಗೆ ಚಳಿ ಹಾಗೂ ನಡುಕ ಉಂಟಾಗುತಿತ್ತು. ಇದೇ ಮಾದರಿಯಲ್ಲಿ ಗುಂಡ್ಲಪೇಟೆ ಆಸ್ಪತ್ರೆಯಲ್ಲಿಯು ರೋಗಿಗಳಿಗೆ ತೊಂದರೆಯಾಗಿ-ತ್ತು. ಇದನ್ನು ಗಂಭೀರವಾಗಿ ಪರಿಗಣಿಸಿ, ಸರ್ಕಾರ ಎನ್.ಎ.ಬಿ.ಎಲ್ ಹಾಗೂ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತದ ಲ್ಯಾಬ್‌ಗಳಲ್ಲಿ ಪರೀಕ್ಷೆ ನಡೆಸಿದಾಗ ಐವಿ ದ್ರಾವಣ ಕಳಪೆ ಗುಣಮಟ್ಟದ್ದು ಎಂದು ವರದಿ ಬಂದಿದೆ. ಇದನ್ನು ಆಧರಿಸಿ ಪಶ್ಚಿಮ್ ಬಂಗಾ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಿ, ಅವರು ಪೂರೈಹಿಸಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣದ 192 ಬ್ಯಾಚುಗಳ ಸರಬರಾಜನ್ನು ತಡೆ ಹಿಡಿಯಲಾಯಿತು.

ಇದನ್ನು ವಿರೋಧಿ ಪಶ್ಚಿಮ್ ಬಂಗಾ ಕಂಪನಿ ಕೇಂದ್ರ ಔಷಧ ಲ್ಯಾಬೋರೇಟರಿಯಿಂದ ಗುಣಮಟ್ಟದ ಪರೀಕ್ಷೆಯ ವರದಿ ಆಧರಿಸಿ ನ್ಯಾಯಾಲಯದಲ್ಲಿ ಸರ್ಕಾರ ದಾವೆ ಹೂಡಿದೆ. ಇದರೊಂದಿಗೆ ಎನ್.ಎ.ಬಿ.ಲ್ ಲ್ಯಾಬ್‌ಗಳು ಸಹ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣದ ಗುಣಮಟ್ಟ ಸರಿಯಿದೆ ಎಂದು ವರದಿ ನೀಡಿದವು.

ಜೂನ್ ತಿಂಗಳ ವೇಳೆಗೆ ರಾಜ್ಯದಲ್ಲಿ ಡೆಂಗ್ಯೂ ಹಾಗೂ ಇತರೆ ಶಸ್ತ್ರಚಿಕತ್ಸೆ ಮಾಡಿದವ-ರಿಗೆ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣ ನೀಡಲು ಬೇಡಿಕೆ ಹೆಚ್ಚಾಯಿತು. ಈ ವೇಳೆ ಸರ್ಕಾರ ಪಶ್ಚಿಮ್ ಬಂಗಾ ಕಂಪನಿ ಐವಿ ದ್ರಾವಣದ 192 ಬ್ಯಾಚುಗಳ ಗುಣಮಟ್ಟವನ್ನು ಮತ್ತೊಮ್ಮೆ ಪರಿಶೀಲಿಸಿ, 22 ಬ್ಯಾಚ್‌ಗಳನ್ನು ಕಳಪೆ ಎಂದು ತಡೆಹಿಡಿದು ಉಳಿದ ಬ್ಯಾಚುಗಳ ಐವಿ ದ್ರಾವಣವನ್ನು ಆಸ್ಪತ್ರೆಗಳಿಗೆ ಸರಬರಾಜು ಮಾಡಿದೆ. ನಂತರ ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ತಿಂಗಳಿನಲ್ಲಿ ಐವಿ ದ್ರಾವಣದ ಯಾವುದೇ ಅಡ್ಡ ಪರಿಣಾಮಗಳು ಕಂಡು ಬಂದಿಲ್ಲ. ಈ ಹಿನ್ನೆಯಲ್ಲಿ ನವೆಂಬರ್ 9 ರಂದು ಬಳ್ಳಾರಿ ಆಸ್ಪತ್ರೆಗೆ ಪಶ್ಚಿಮ್ ಬಂಗಾ ಕಂಪನಿ ಪೂರೈಸಿದ ರಿಂಗರ್ ಲ್ಯಾಕ್ಟೇಟ್ ಐವಿ ದ್ರಾವಣ ಪೂರೈಕೆಯಾಗಿದೆ. ನಂತರ ಸರಣಿ ಬಾಣಂತಿಯರ ಸಾವು ಸಂಭವಿಸಿದೆ. ಕೂಡಲೇ ಈ ಐವಿ ದ್ರಾವಣವನ್ನು 5 ಎನ್.ಎ.ಬಿ.ಎಲ್ ಲ್ಯಾಬ್‌ಗಳಲ್ಲಿ ಪರೀಕ್ಷಿಸಿದಾಗಲೂ ಗುಣಮಟ್ಟ ಸರಿಯಿದೆ ಎಂದೇ ವರದಿ ಬಂದಿದೆ. ಆದರೆ ಹೈದರಾಬಾದ್ ಲ್ಯಾಬ್ ವರದಿಯಲ್ಲಿ ಮಾತ್ರ ಐವಿ ದ್ರಾವಣದಲ್ಲಿ ಎಂಡೋ ಟಾಕ್ಸಿಕ್ ಅಂಶ ಇರುವುದಾಗಿ ಪತ್ತೆಯಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ವಿಸ್ತೃತವಾಗಿ ಘಟನೆ ಹಿನ್ನಲೆಯನ್ನು ಸದನದಲ್ಲಿ ವಿವರಿಸಿದರು.

ಫಾರ್ಮಾ ಕಂಪನಿಗಳ ಲಾಭಿ : ಭಾರತದ ಫಾರ್ಮಾ ಕಂಪನಿಗಳು ಪ್ರಪಂಚದಲ್ಲಿಯೇ ಉತ್ತಮ ಹೆಸರು ಹೊಂದಿವೆ. ಭಾರತ ವಿಶ್ವದ ಫಾರ್ಮಾ ಹಬ್ ಎಂದೇ ಪ್ರಸಿದ್ಧಿ ಪಡೆದಿದೆ.

ಆದರೆ ಈ ಫಾರ್ಮಾ ಕಂಪನಿಗಳಿಗೆ ಕರಾಳ ಮುಖ ಇದೆ. ವಿದೇಶಗಳಿಗೆ ಸರಬರಾಜು ಮಾಡುವ ಔಷಧಗಳ ತಯಾರಿಕೆಗೆ ಈ ಫಾರ್ಮಾ ಕಂಪನಿಗಳು ಪ್ರತ್ಯೇಕವಾಗಿ ಘಟಗಳನ್ನು ಸ್ಥಾಪಿಸಿವೆ. ಈ ಘಟಕಗಳು ಉತ್ತಮ ಗುಣಮಟ್ಟ ಹಾಗೂ ಎಲ್ಲ ಅಂತರಾಷ್ಟ್ರೀಯ ನಿಯಮಗಳನ್ನು ಪಾಲಿಸುತ್ತವೆ. ಆದರೆ ಭಾರತದಲ್ಲಿ ಪೂರೈಸುವ ಔಷದ ಘಟಕಗಳ ಸ್ಥಿತಿ ಶೋಚನೀಯವಾಗಿದೆ. ಕೇಂದ್ರ ಹಾಗೂ ರಾಜ್ಯ ಔಷಧ ನಿಯಂತ್ರಣ ಸಂಸ್ಥೆಗಳನ್ನು ಈ ಫಾರ್ಮಾ ಕಂಪನಿಗಳು ತಮ್ಮ ಪ್ರಭಾವ ಬೀರಿ, ತಮಗೆ ಬೇಕಾದ ಹಾಗೆ ವರದಿ ಪಡೆಯುತ್ತಿವೆ. ಬಹುತೇಕ ಕಂಪನಿಗಳು ಪೂರ್ವ ಈಶಾನ್ಯ ರಾಜ್ಯಗಳಲ್ಲಿ ಸ್ಥಾಪಿತವಾಗಿದ್ದು, ಇತರೆ ರಾಜ್ಯಗಳಿಗೆ ಅವುಗಳ ಮೇಲೆ ನಿಯಂತ್ರಣವಿಲ್ಲ. ಪಶ್ಚಿಮ ಬಂಗಾ ಕಂಪನಿಯ ಔಷಧ ತಯಾರಿಕಾ ಘಟಕಕ್ಕೆ ಕೇಂದ್ರ, ರಾಜ್ಯ ಹಾಗೂ ಪಶ್ಚಿಮ ಬಂಗಾಳ ರಾಜ್ಯದ ತನಿಖಾ ತಂಡಗಳು ಭೇಟಿ ನೀಡಿದ್ದು, ಕಂಪನಿಯ ಔಷಧ ತಯಾರಿಕೆಗೆ ತಡೆ ಒಡ್ಡಿವೆ. ರಾಜ್ಯ ಸರ್ಕಾರವು ಪಶ್ಚಿಮ ಬಂಗಾ ಕಂಪನಿಯ ಮೇಲೆ ಪ್ರಕರಣ ದಾಖಲಿಸಿದ್ದು, ರಾಜ್ಯದಲ್ಲಿನ ಬಾಣಂತಿಯರ ಸಾವಿಗೆ ಅವರನ್ನು ಹೊಣೆ ಮಾಡಿ, ಬಾಧಿತ ಕುಟುಂಬಗಳಿಗೆ ಸೂಕ್ತ ಪರಿಹಾರವನ್ನು ಕೊಡಿಸುವುದಾಗಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಶುಲ್ಕ ಹೆಚ್ಚಳ ಮಾಡಿಲ್ಲ : ರಾಜ್ಯದ ಜಿಲ್ಲಾ, ತಾಲ್ಲೂಕು, ಸಮುದಾಯ ಹಾಗೂ ಪ್ರಾಥಮಿಕ ಆಸ್ಪತ್ರೆಗಳಲ್ಲಿ ಯಾವುದೇ ಶುಲ್ಕಗಳನ್ನು ಹೆಚ್ಚಳ ಮಾಡಿಲ್ಲ ಎಂದು ಸಚಿವ ದಿನೇಶ್ ಗುಂಡುರಾವ್ ಸದನದಲ್ಲಿ ಸ್ಪಷ್ಟ ಪಡಿಸಿದರು.

ರಾಜ್ಯದಲ್ಲಿ ಕಳೆದ 12 ವರ್ಷಗಳಿಂದ ಬಳಕೆದಾರರ ಶುಲ್ಕಗಳನ್ನು ಹೆಚ್ಚಿಸಿಲ್ಲ. ಈ ಹಿನ್ನಲೆಯಲ್ಲಿ ಪ್ರಾಯೋಗಿಕವಾಗಿ ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಮಾತ್ರ ಶುಲ್ಕ ಹೆಚ್ಚಳ ಮಾಡಲಾಗಿದೆ. ರಾಜ್ಯದ ಎಲ್ಲ 108 ಆಂಬ್ಯುಲೆನ್ಸ್ ವಾಹನಗಳಲ್ಲಿ ಜಿ.ಪಿ.ಎಸ್ ಅಳವಡಿಸಲಾಗಿದೆ. ದೇಶದಲ್ಲಿ ಬ್ರೇನ್ ಹೆಲ್ತ್ ಕ್ಲೀನಿಕ್‌ಗಳನ್ನು ಪ್ರಾರಂಭಿಸಿದ ಪ್ರಥಮ ರಾಜ್ಯ ಕರ್ನಾಟಕ, ಈ ಬಗ್ಗೆ ಕೇಂದ್ರ ನೀತಿ ಆಯೋಗವೂ ಮೆಚ್ಚುಗೆ ವ್ಯಕ್ತಪಡಿಸಿದೆ. ಆರೋಗ್ಯ ಇಲಾಖೆ ಎಲ್ಲಾ ವರ್ಗದ ನೌಕರರ ಸೇವಾ ಜೇಷ್ಠತಾ ಪಟ್ಟಿ ಸಿದ್ದಪಡಿಸಲಾಗಿದೆ. ರಾಷ್ಟ್ರೀಯ ಆರೋಗ್ಯ ಮಿಷನ್ ಶೇ.84 ರಷ್ಟು ಅನುದಾನ, ರಾಜ್ಯದ ಶೇ.97 ರಷ್ಟು ಅನುದಾನವನ್ನು ಬಳಕೆ ಮಾಡಲಾಗಿದೆ. ರಾಜ್ಯದಲ್ಲಿ ಔಷಧಗಳ ಕೊರತೆಯಿಲ್ಲ. 1126 ವಿವಿಧ ಬಗೆಯ ಔಷಧಗಳು ಆಸ್ಪತ್ರೆಗಳಲ್ಲಿ ದೊರಕುತ್ತಿವೆ. ರಾಜ್ಯದ 17 ಜಿಲ್ಲಾ ಆಸ್ಪತ್ರೆ, 164 ತಾಲ್ಲೂಕು ಆಸ್ಪತ್ರೆ, 64 ಸಮುದಾಯ ಆರೋಗ್ಯ ಕೇಂದ್ರಗಳು ಎನ್.ಕ್ಯೂ.ಎ.ಸ್ ಮಾನ್ಯತೆ ಪಡೆದಿವೆ ಎಂದು ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 266



ಕರ್ನಾಟಕ ಸರ್ಕಾರ









# ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

೨೦, ೨೧ ಮತ್ತು ೨೨ನೇ ಡಿಸೆಂಬರ್, ೨೦೨೪

## ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭ

ದಿನಾಂಕ: ೨೦.೧೨.೨೦೨೪, ಬೆಳಗ್ಗೆ: ೧೦.೩೦ ಗಂಟೆಗೆ,
ಸ್ಥಳ: ಸ್ಯಾಂಜೋ ಆಸ್ಪತ್ರೆ ಹಾಗೂ
ಹೋಟೆಲ್ ಅಮರಾವತಿ ಹಿಂಭಾಗ, ಮಂಡ್ಯ

### ದಿವ್ಯ ಸಾನ್ನಿಧ್ಯ

ಪರಮಪೂಜ್ಯ ಜಗದ್ಗುರು
ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ
ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ,
ಶ್ರೀ ಆದಿಚುಂಚನಗಿರಿ ಕ್ಷೇತ್ರ







| ಉದ್ಘಾಟನೆ | ಘನ ಉಪಸ್ಥಿತಿ | ಸಮ್ಮೇಳನಾಧ್ಯಕ್ಷರು |
|---|---|---|
| ಶ್ರೀ ಸಿದ್ದರಾಮಯ್ಯ<br>ಸನ್ಮಾನ್ಯ ಮುಖ್ಯಮಂತ್ರಿಗಳು | ಶ್ರೀ ಡಿ.ಕೆ. ಶಿವಕುಮಾರ್<br>ಮಾನ್ಯ ಉಪ ಮುಖ್ಯಮಂತ್ರಿಗಳು | ನಾಡೋಜ<br>ಡಾ. ಗೊ.ರು. ಚನ್ನಬಸಪ್ಪ |

### ಘನ ಉಪಸ್ಥಿತಿ

**ಶ್ರೀ ಹೆಚ್.ಡಿ. ಕುಮಾರಸ್ವಾಮಿ** – ಸನ್ಮಾನ್ಯ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರು, ಭಾರತ ಸರ್ಕಾರ

**ಶ್ರೀ ಯು.ಟಿ. ಖಾದರ್ ಫರೀದ್** – ಸನ್ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ

**ಶ್ರೀ ಎನ್. ಚಲುವರಾಯಸ್ವಾಮಿ** – ಮಾನ್ಯ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಅಧ್ಯಕ್ಷರು, ಸಮ್ಮೇಳನ ಸ್ವಾಗತ ಸಮಿತಿ

**ಡಾ. ಚಂದ್ರಶೇಖರ ಕಂಬಾರ** – ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು

**ಡಾ. ದೊಡ್ಡರಂಗೇಗೌಡ** – ನಿಕಟಪೂರ್ವ ಸಮ್ಮೇಳನಾಧ್ಯಕ್ಷರು

**ನಾಡೋಜ ಡಾ. ಮಹೇಶ ಜೋಶಿ** – ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಗೌರವ ಕಾರ್ಯಾಧ್ಯಕ್ಷರು, ಸಮ್ಮೇಳನ ಸ್ವಾಗತ ಸಮಿತಿ

ಹಾಗೂ ವಿಧಾನಸಭೆಯ ಸನ್ಮಾನ್ಯ ಉಪಸಭಾಧ್ಯಕ್ಷರು, ಮಾನ್ಯ ಸಮಾಜ ಕಲ್ಯಾಣ ಸಚಿವರು ಹಾಗೂ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು, ವಿಧಾನಸಭೆಯ ಮಾನ್ಯ ಸರ್ಕಾರಿ ಮುಖ್ಯ ಸಚೇತಕರು, ಮಾನ್ಯ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರು, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರುಗಳು ಗೌರವ ಉಪಸ್ಥಿತರಾಗಿ ಮತ್ತು ವಿಧಾನಸಭಾ ಹಾಗೂ ವಿಧಾನ ಪರಿಷತ್‌ನ ಮಾನ್ಯ ಶಾಸಕರುಗಳು ಮತ್ತು ನಿಗಮ, ಮಂಡಳಿ, ಪ್ರಾಧಿಕಾರ, ಒಕ್ಕೂಟ ಹಾಗೂ ನಗರಸಭೆಯ ಮಾನ್ಯ ಅಧ್ಯಕ್ಷರುಗಳು ಮತ್ತು ಮಂಡ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಮಾನ್ಯ ಸಂಚಾಲಕರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸುವರು.

### ಸಮಾರಂಭದ ಪ್ರಮುಖ ಆಕರ್ಷಣೆಗಳು

- ಧ್ವಜಾರೋಹಣ – ೨೦.೧೨.೨೦೨೪, ಬೆಳಿಗ್ಗೆ ೬.೦೦ ಗಂಟೆಗೆ
- ಸಮ್ಮೇಳನಾಧ್ಯಕ್ಷರ ಮೆರವಣಿಗೆ – ೨೦.೧೨.೨೦೨೪, ಬೆಳಿಗ್ಗೆ ೭.೦೦ ಗಂಟೆಗೆ. (ಮೆರವಣಿಗೆ ಮಾರ್ಗ – ಸರ್ ಎಂ. ವಿಶ್ವೇಶ್ವರಯ್ಯ ಪ್ರತಿಮೆ ಮುಂಭಾಗದಿಂದ ಮೈಸೂರು–ಬೆಂಗಳೂರು ರಸ್ತೆ ಮಾರ್ಗವಾಗಿ ಸಮ್ಮೇಳನದ ವೇದಿಕೆಗೆ)
- ಸಮಾನಾಂತರ ವೇದಿಕೆ: ೧ ಮತ್ತು ವೇದಿಕೆ: ೨ – ಒಟ್ಟು ೨೦ ಗೋಷ್ಠಿಗಳಲ್ಲಿ ಚಿಂತನ ಮಂಥನ, ಸಂವಾದ ಕಾರ್ಯಕ್ರಮಗಳು
- ಪುಸ್ತಕಗಳ ಬಿಡುಗಡೆ, ಸ್ಮರಣ ಸಂಚಿಕೆ ಬಿಡುಗಡೆ, ವಿಶೇಷ ಅಂಚೆ ಲಕೋಟೆ ಬಿಡುಗಡೆ, ನುಡಿಜಾತ್ರೆ–ಸ್ವರಯಾತ್ರೆ–ಸಂಗೀತ ಕಾರ್ಯಕ್ರಮ



ಶ್ರೀ ಎನ್. ಚಲುವರಾಯಸ್ವಾಮಿ, ಮಾನ್ಯ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು, ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರಿಗೆ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಮಂತ್ರಣ ನೀಡುತ್ತಿರುವ ಸಂದರ್ಭ

### ಸರ್ವರಿಗೂ ಸ್ವಾಗತ

**ಎನ್. ಚಲುವರಾಯಸ್ವಾಮಿ** – ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧ್ಯಕ್ಷರು, ಸಮ್ಮೇಳನ ಸ್ವಾಗತ ಸಮಿತಿ

**ನಾಡೋಜ ಡಾ. ಮಹೇಶ ಜೋಶಿ** – ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಗೌರವ ಕಾರ್ಯಾಧ್ಯಕ್ಷರು, ಸಮ್ಮೇಳನ ಸ್ವಾಗತ ಸಮಿತಿ

**ಡಾ. ಕುಮಾರ, ಭಾ.ಆ.ಸೇ** – ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ

**ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು**